ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 127 ಸಂಚಿಕೆ- 127 | PAGE-8 ಪುಟ-8 | ಶುಕ್ರವಾರ 27.06.2025 | RS.2/- ಬೆಲೆ 2/-

## ಹಿಮಾಚಲ್ ಮೇಘಸ್ಫೋಟ್: ಐವರ ಸಾವು ಹಲವರು ನಾಪತ್ತೆ



ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಜೂ.26: ಕಳೆದ 24 ಗಂಟೆಯಲ್ಲಿ ಹಿಮಾಚಲ ಪ್ರದೇಶದ 5 ಕಡೆಗಳಲ್ಲಿ ಮೇಘಸ್ಫೋಟಗೊಂಡ ಪರಿಣಾಮ ಐವರು ಪ್ರಾಣ ಕಳೆದುಕೊಂಡಿದ್ದು, ಹಲವರು ನಾಪತ್ತೆಯಾಗಿದ್ದಾರೆ.

ಉತ್ತರ ಭಾರತದ ಹಲವೆಡೆ ಮಳೆ ಅಬ್ಬರಿಸುತ್ತಿದ್ದು, ಭಾರೀ ಅವಾಂತರವನ್ನೇ ಸೃಷ್ಟಿ ಮಾಡಿದೆ. ಹಿಮಾಚಲ ಪ್ರದೇಶದಲ್ಲಿ ಕಳೆದ 24 ಗಂಟೆ ಅವಧಿಯಲ್ಲಿ ಕುಲು ಜಿಲ್ಲೆಯ ಸೈನ್ಜ್ ಕಣಿವೆ,ಜೀಭಿ,ತೀರ್ಥನ್,ಮತ್ತು ಮಣಿಕರಣ್-ಬಂಜರ್ ಕಣಿವೆಗಳಲ್ಲಿ ಭಾರಿ ಮಳೆಯಾಗಿದೆ. ಪರಿಣಾಮ ಪಾರ್ವತಿ ನದಿ ಉಕ್ಕಿಹರಿದು ಭೀಕರ ಪ್ರವಾಹ ಸಂಭವಿಸಿದೆ. ಮರದ ದಿಮ್ಮಿಗಳು ತರಗೆಲೆಗಳಂತೆ ತೇಲಿ ಬರುತ್ತಿದೆ. ಇನ್ನೂ ಕೆಲವೆಡೆ ಮನೆ, ಕಚೇರಿಗಳಿಗೆ ನೀರು ನುಗ್ಗಿ, ಅವ್ಯವಸ್ಥೆ ಉಂಟಾಗಿದೆ.ಸರಿಸುಮಾರು 15ಕ್ಕೂ ಹೆಚ್ಚು ಮನೆಗಳು ಹಾನಿಗೊಳಗಾಗಿದೆ. ಗ್ರಾಮೀಣ ಪ್ರದೇಶದ ರಸ್ತೆಗಳು ಜಲಾವೃತಗೊಂಡಿವೆ. ಇದೇ ವೇಳೆ ಪ್ರವಾಸಿ ತಾಣಗಳಲ್ಲಿ 2 ಸಾವಿರ ಪ್ರವಾಸಿಗರು ಸಿಲುಕಿಕೊಂಡಿದ್ದು,ರಕ್ಷಣಾ ಕಾರ್ಯಾಚರಣೆ ಮುಂದುವರೆದಿದೆ. ಕಾಂಗ್ರಾ ಜಿಲ್ಲೆಯ ಧರ್ಮಶಾಲಾದಲ್ಲಿ ಭಾರೀ ಮಳೆಯಾಗುತ್ತಿದ್ದು,ಪ್ರವಾಹದ ಪರಿಸ್ಥಿತಿ ಎದುರಾಗಿದೆ.ಈ ನಡುವೆ ಭಾರತೀಯ ಹವಾಮಾನ ಇಲಾಖೆ ಜು.1 ರವರೆಗೆ ಹಿಮಾಚಲ ಪ್ರದೇಶ, ಪಂಜಾಬ್, ಹರಿಯಾಣ, ಉತ್ತರಾಖಂಡ ಮತ್ತು ಪಶ್ಚಿಮ ಉತ್ತರ ಪ್ರದೇಶದಲ್ಲಿ ಭಾರೀ ಮಳೆಯಾಗುವ ಸಾಧ್ಯತೆಯಿದೆ ಎಂದು ತಿಳಿಸಿದೆ. ಇನ್ನೂ ಮಹಾರಾಷ್ಟ್ರದಲ್ಲೂ ಕೆಲ ಕಡೆ ಪ್ರವಾಹ ನಿರ್ಮಾಣವಾಗಿದೆ. ಗುಜರಾತ್‌ನ ಅಹಮದಾಬಾದ್-ಮುಂಬೈ ಹೈವೇಯಲ್ಲಿ 15 ಕಿ.ಮೀ. ಟ್ರಾಫಿಕ್ ಜಾಮ್ ಆಗಿದೆ. ಕೇರಳದ ವಯನಾಡ್‌ನಲ್ಲೂ ಭಾರಿ ಮಳೆಯಾಗ್ತಿದೆ. ಚೂರಲ್ಮಲ ಮತ್ತು ಮುಂಡಕ್ಕೈನಲ್ಲಿ ದಾಖಲೆಯ ಮಳೆ ಆಗುತ್ತಿದ್ದು, ಕಳೆದ ವರ್ಷ ಸಂಭವಿಸಿದ ಭೀಕರ ಭೂಕುಸಿತದ ದುರಂತ ಈಗ ಜನರಲ್ಲಿ ಆತಂಕ ಹುಟ್ಟಿಸಿದೆ. ಕೇರಳದ 12 ಜಿಲ್ಲೆಗಳಿಗೆ ಭಾರಿ ಮಳೆಯ ಎಚ್ಚರಿಕೆ ನೀಡಲಾಗಿದೆ.

## ಬೀದರ್ ಸಕ್ಕರೆ ಕಾರ್ಖಾನೆ ಅವ್ಯವಹಾರ ತನಿಖೆಗೆ ಈಶ್ವರ ಖಂಡ್ರೆ, ರಹೀಂಖಾನ್ ಒತ್ತಾಯ




ಮಲ್ಲಮ್ಮ ನುಡಿ ವಾರ್ತೆ ಬೀದರ. ಜೂ. 26 : ದುರಾಡಳಿತದ ಫಲವಾಗಿ ಕಾರ್ಮಿಕರ ವೇತನ ಹಾಗೂ ವಿವಿಧ ಬ್ಯಾಂಕ್‌ಗಳ ಸುಮಾರು 430 ಕೋಟಿ ರೂ. ಗೂ ಅಧಿಕ ಬಾಕಿ ಉಳಿಸಿಕೊಂಡು ಪ್ರಸ್ತುತ ಸ್ಥಗಿತಗೊಂಡಿರುವ ಬೀದರ್ ಸಹಕಾರಿ ಸಕ್ಕರೆ ಕಾರ್ಖಾನೆಯಲ್ಲಿ ಕಳೆದ 10 ವರ್ಷಗಳಲ್ಲಿ ಆಗಿರುವ ಅವ್ಯವಹಾರದ ಬಗ್ಗೆ ತನಿಖೆ ನಡೆಸಿ ತಪ್ಪಿತಸ್ಥರಿಗೆ ಶಿಕ್ಷೆ ಆಗಬೇಕು ಎಂದು ಸಚಿವರುಗಳಾದ ಈಶ್ವರ ಬಿ. ಖಂಡ್ರೆ ಮತ್ತು ರಹೀಂ ಖಾನ್ ಒತ್ತಾಯಿಸಿದ್ದಾರೆ.

ವಿಧಾನಸೌಧದ ಸಮಿತಿ ಸಭಾಂಗಣದಲ್ಲಿಂದು ನಡೆದ ಹಳ್ಳಿಖೇಡ್‌ನ ಬೀದರ್ ಸಹಕಾರಿ ಸಕ್ಕರೆ ಕಾರ್ಖಾನೆ ಪುನಶ್ಚೇತನಗೊಳಿಸುವ ಮತ್ತು ಕಾರ್ಖಾನೆಯು ವಿವಿಧ ಸಹಕಾರಿ ಬ್ಯಾಂಕ್ ನಿಂದ ಪಡೆದಿರುವ ಸಾಲದ ಮರುಪಾವತಿ ಕುರಿತ ಸಭೆಯಲ್ಲಿ ಮಾತನಾಡಿದ ಈಶ್ವರ ಖಂಡ್ರೆ, ಈ ಹಿಂದೆಯೂ ಬಿಎಸ್‌ಎಸ್. ಕೆ ಅವ್ಯವಹಾರದ ಬಗ್ಗೆ ತನಿಖೆಗೆ ಆದೇಶ ಆಗಿದೆ ಆದರೆ ತಾರ್ಕಿಕ ಅಂತ್ಯ ಕಂಡಿಲ್ಲ. ಸಮಗ್ರ ತನಿಖೆ ನಡೆಸಿ, ತಪ್ಪಿತಸ್ಥರಿಗೆ ದಂಡನೆ ಆಗಬೇಕು ಎಂದು ಆಗ್ರಹಿಸಿದರು.

ಕಾರ್ಖಾನೆ ಡಿಸಿಸಿ ಬ್ಯಾಂಕ್ ನಿಂದ 115 ಕೋಟಿ ಸಾಲ ಪಡೆದಿದೆ. ಬಡ್ಡಿ ಸೇರಿ 233 ಕೋಟಿ ಬಾಕಿ ಪಾವತಿಸಬೇಕಿದೆ. ಕಾರ್ಖಾನೆ ಮತ್ತು ಡಿಸಿಸಿ ಬ್ಯಾಂಕ್ ಎರಡೂ ರೈತರದ್ದೇ ಆಗಿದೆ. ಬೆಟ್ಟದಷ್ಟು ಸಾಲದ ಹೊರೆ ಇದ್ದು ಸಕ್ಕರೆ

(2ನೇ ಪುಟ ನೋಡಿ)

## ಮಾದಕ ವಸ್ತು ಮಾರಾಟಗಾರರ ಮಾಹಿತಿ ಇದ್ದರೆ ಪೊಲೀಸ್ ಇಲಾಖೆಗೆ ನೀಡಿ:ಎಸ್‌ಪಿ ಪ್ರದೀಪ್ ಗುಂಟಿ





ಮಲ್ಲಮ್ಮ ನುಡಿ ವಾರ್ತೆ ಬೀದರ. ಜೂ. 26 : ಮಾದಕ ವ್ಯಾಸನಿಗಳ ಹಾಗೂ ಮಾದಕ ವಸ್ತುಗಳ ಮಾರಾಟಗಾರರ ಮಾಹಿತಿ ಇದ್ದರೆ ಪೊಲೀಸ್ ಇಲಾಖೆಗೆ ನೀಡಿ, ಅಂಥವರನ್ನು ಜೈಲಿಗೆ ಕಳಿಸುವ ಕೆಲಸವನ್ನು ನಾವು ಮಾಡುತ್ತೇವೆಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ ತಿಳಿಸಿದರು.

ಅವರು ಗುರುವಾರ ನಗರದ ಅಂಬೇಡ್ಕರ್ ವೃತ್ತದ ಬಳಿ ಪೊಲೀಸ್ ಇಲಾಖೆಯಿಂದ ಆಯೋಜಿದ ಅಂತರಾಷ್ಟ್ರೀಯ ಮಾದಕ ದ್ರವ್ಯ ಸೇವನೆ ಮತ್ತು ಸಾಗಾಣಿಕೆ ವಿರೋಧಿ ದಿನಾಚರಣೆ ಹಾಗೂ ಮಾದಕ ವಸ್ತುಗಳ ದುಷ್ಪರಿಣಾಮಗಳ ಜಾಗೃತಿ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಪ್ರತಿಯೊಬ್ಬರು ಸಾಮಾಜಿಕ ಜವಾಬ್ದಾರಿ ತೆಗೆದುಕೊಳ್ಳಬೇಕು

(2ನೇ ಪುಟ ನೋಡಿ)

## ವಾಯುವ್ಯ ಸಾರಿಗೆ ನಿಗಮದಲ್ಲಿ 2 ಸಾವಿರ ಚಾಲಕ ಕಂ ನಿರ್ವಾಹಕ ಹುದ್ದೆಗೆ ಅರ್ಜಿ ಸಲ್ಲಿಸಿದವರಿಗೆ ಸಿಹಿಸುದ್ದಿ



ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಜೂ.26:ವಾಯುವ್ಯ ಕರ್ನಾಟಕ ಸಾರಿಗೆ ನಿಗಮದಲ್ಲಿ ಖಾಲಿಯಿರುವಂತಹ 1000 ಚಾಲಕ ಕಂ ನಿರ್ವಾಹಕರ ಹುದ್ದೆಗೆ ಅರ್ಜಿ ಸಲ್ಲಿಸಿದವರಿಗೆ ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಸಿಹಿ ಸುದ್ದಿ ನೀಡಿದ್ದಾರೆ.ಅದೇ ಈ ಹುದ್ದೆಗಳ ನೇಮಕಾತಿಗೆ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳಿಗೆ 2023 ರಲ್ಲಿ ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯಲ್ಲಿ ಖಾಲಿಯಿದ್ದಂತಹ 2 ಸಾವಿರ ಚಾಲಕ ಕಂ ನಿರ್ವಾಹಕರ ಹುದ್ದೆಗಳ ನೇಮಕಾತಿಗೆ ಸರ್ಕಾರ ಅನುಮತಿ ನೀಡಿತ್ತು. ಆ ಬಳಿಕ ನೇಮಕಾತಿ ಅಧಿಸೂಚನೆಯನ್ನು ಹೊರಡಿಸಲಾಗಿತ್ತು. ಈ ಹುದ್ದೆಗಳಲ್ಲಿ 1000 ಚಾಲಕರನ್ನು ಭರ್ತಿ ಮಾಡಿಕೊಳ್ಳಲಾಗಿದ್ದು, ಸಾವಿರ ಚಾಲಕ ಕಂ ನಿರ್ವಾಹಕ ಹುದ್ದೆಗೆ ಭರ್ತಿ ಮಾಡಿಕೊಳ್ಳಬೇಕಿದೆ.

2000 ಚಾಲಕ ಕಂ ನಿರ್ವಾಹಕರ ಹುದ್ದೆಗೆ ಬರೋಬ್ಬರಿ 57000 ಅಭ್ಯರ್ಥಿಗಳು ಅರ್ಜಿ ಸಲ್ಲಿಸಿದ್ದರು. 2023ರ ಅಧಿಸೂಚನೆಯ ನೇಮಕಾತಿಗೆ 2025ರಲ್ಲಿ 1000 ಚಾಲಕರನ್ನು ನೇಮಕ ಮಾಡಿಕೊಂಡರೆ ಇನ್ನು ಸಾವಿರ ಹುದ್ದೆ ಬಾಕಿಇವೆ. ಅವುಗಳಲ್ಲಿ ಚಾಲಕ ಕಂ ನಿರ್ವಾಹಕ ಹುದ್ದೆಗಳನ್ನು ಮಾತ್ರ ಭರ್ತಿ ಮಾಡಿಕೊಳ್ಳಲು ನಿರ್ಧರಿಸಲಾಗಿದೆ.

(2ನೇ ಪುಟ ನೋಡಿ)

## ಆಗಸ್ಟ್, ಸೆಪ್ಟೆಂಬರ್‌ನಲ್ಲಿ ರಾಜ್ಯ ರಾಜಕೀಯದಲ್ಲಿ ಬದಲಾವಣೆ: ರಾಜಣ್ಣ



ಮಲ್ಲಮ್ಮನುಡಿವಾರ್ತೆಬೆಂಗಳೂರು:ಜೂ.26: ಆಗಸ್ಟ್, ಸೆಪ್ಟೆಂಬರ್‌ನಲ್ಲಿ ಭಾರೀ ಬದಲಾವಣೆಯಾಗಲಿದೆ ಎಂದು ಸಹಕಾರ ಸಚಿವ ಕೆಎನ್ ರಾಜಣ್ಣ ಬಾಂಬ್ ಸಿಡಿಸಿದ್ದಾರೆ.

ವಿಧಾನಸೌಧದಲ್ಲಿ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಆಗಸ್ಟ್, ಸೆಪ್ಟೆಂಬರ್‌ನಲ್ಲಿ ರಾಜ್ಯ ರಾಜಕೀಯದಲ್ಲಿ ಭಾರೀ ಬದಲಾವಣೆ ನಡೆಯಲಿದೆ. ಗಾಳಿ ತಣ್ಣಗೆ ಬೀಸುತ್ತಿದೆ. ಸೆಪ್ಟೆಂಬರ್ ಕಳೀಲಿ ಎಂದು ಹೇಳುವ ಮೂಲಕ ಸಂಚಲನ ಮೂಡಿಸಿದ್ದಾರೆ.

2013ರಲ್ಲಿ ಇದ್ದ ಹಾಗೆ ಸಿಎಂ ಸಿದ್ದರಾಮಯ್ಯ ಈ ಬಾರಿ ಇಲ್ಲ ಎಂಬ ಶಾಸಕರ ಹೇಳಿಕೆಯ ಬಗ್ಗೆ ಪ್ರತಿಕ್ರಿಯಿಸಿದ ಅವರು, ಏನ್ ಮಾಡೋದು ಪವರ್ ಸೆಂಟರ್‌ಗಳು ಜಾಸ್ತಿಯಾಗಿವೆ. ಒಂದು ಎರಡು ಮೂರು ಲೆಕ್ಕಕ್ಕೆ ಇಲ್ಲದಷ್ಟು ಆಗಿವೆ. 2013 ರಿಂದ 2018ವರೆಗೆ ಒಂದೇ ಪವರ್ ಸೆಂಟರ್ ಇತ್ತು. ಹೀಗಾಗಿ ಅವರಿಗೆ ಯಾವುದೇ ಒತ್ತಡ ಇರಲಿಲ್ಲ. ಆದರೆ ಈಗ ಪವರ್ ಸೆಂಟರ್ ಜಾಸ್ತಿ ಆಗಿ ಜಂಜಾಟ ಹೆಚ್ಚಾಗಿದೆ ಎಂದರು.

ಶಾಸಕರಿಗೆ ಅನುದಾನ ಸಿಗುತ್ತಿಲ್ಲ ಎಂಬ ಆರೋಪಕ್ಕೆ, ಸಿಎಂ ರಾಜ್ಯಾದ್ಯಂತ ಪ್ರವಾಸ ಮಾಡಿ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ಕೊಡುತ್ತಿದ್ದಾರೆ. ದುಡ್ಡು ಇಲ್ಲದೆ ಇದ್ದರೆ ಅನುದಾನ ಕೊಡಲು ಸಾಧ್ಯವೇ? ಅವರ ಬೇಡಿಕೆಗೆ ತಕ್ಕಂತೆ ಅನುದಾನ ಸಿಕ್ಕಿಲ್ಲ ಎಂಬ ಅಸಮಾಧಾನ ಇರಬಹುದು. ಗ್ಯಾರಂಟಿ ಯೋಜನೆಗಳನ್ನ ಕೊಟ್ಟಿರೋದ್ರಿಂದ ಆರ್ಥಿಕ ಹೊರೆ ಸರ್ಕಾರದ ಮೇಲಿದೆ ಎಂದು ಹೇಳಿದರು.


ಆರ್ಥಿಕ ಲಭ್ಯತೆಗೆ ಅನುಗುಣವಾಗಿ ಯಾವುದೇ ತಾರತಮ್ಯ ಇಲ್ಲ. ಆಡಳಿತ ಪಕ್ಷ ವಿರೋಧ ಪಕ್ಷ ಅಂತಾ ಯಾವುದೇ ತಾರತಮ್ಯ ಮಾಡುವುದಿಲ್ಲ. ಎಲ್ಲಾ ಕ್ಷೇತ್ರಗಳ ಅಭಿವೃದ್ಧಿಗೆ ಹಣಕಾಸನ್ನು ಒದಗಿಸುತ್ತಿದ್ದೇವೆ. ಒಬ್ಬರಿಗೆ ಹೆಚ್ಚಿಗೆ ನಿರೀಕ್ಷೆ ಇರಬಹುದು ಅದಕ್ಕೆ ತಕ್ಕಂತೆ ಆಗದೇ ಇರಬಹುದು. ಏನು ಅಭಿವೃದ್ಧಿ ಅಗುತ್ತಿಲ್ಲ. ಕ್ಷೇತ್ರಕ್ಕೆ ಅನುದಾನ ಕೊಟ್ಟಿಲ್ಲ ಎನ್ನುವುದು ಸತ್ಯಕ್ಕೆ ದೂರವಾದ ಮಾತು ಎಂದರು.

## ಬ್ಲೇಡ್‌ನಿಂದ ಕುತ್ತಿಗೆ ಕೊಯ್ದುಕೊಂಡು ಆತ್ಮಹತ್ಯೆಗೆ ಯತ್ನಿಸಿದ ಪತಿ

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ,ಜೂ.26:ಕೌಟುಂಬಿಕ ಕಲಹದಿಂದ ಬೇಸತ್ತ ವ್ಯಕ್ತಿಯೊಬ್ಬ ಬ್ಲೇಡ್‌ನಿಂದ ಕುತ್ತಿಗೆ ಕೊಯ್ದು-ಕೊಂಡು ಆತ್ಮಹತ್ಯೆಗೆ ಯತ್ನಿಸಿದ ಘಟನೆ ಅಫಜಲಪುರ ತಾಲ್ಲೂಕಿನ ಘತ್ತರಗಾ ಸಮೀಪದ ಹಾವಳಗಾ ಗ್ರಾಮದ ಎಸ್.ಬಿ.ಪೆಟ್ರೋಲ್ ಬಂಕ್ ಬಳಿ ಇಂದು ನಡೆದಿದೆ.ಜೇವರ್ಗಿ ಪಟ್ಟಣದ ಶಾಸ್ತ್ರಿ ಚೌಕ್‌ನ ಕುಂಬಾರಗಲ್ಲಿ ನಿವಾಸಿ ಜಗನ್ನಾಥ ತಂದೆ ನಾರಾಯಣ (42) ಆತ್ಮಹತ್ಯೆಗೆ ಯತ್ನಿಸಿದವರು. ಇವರು ಕಳೆದ ಆರು ತಿಂಗಳ ಹಿಂದೆ ಜೇವರ್ಗಿಯಿಂದ ಹೆಂಡತಿ ಮತ್ತು ಮಗುವಿನೊಂದಿಗೆ ಘತ್ತರಗಾ ಗ್ರಾಮಕ್ಕೆ ಆಮಿಸಿ ಕೂಲಿ ಕೆಲಸ ಮಾಡುತ್ತ ಜೀವನ ಸಾಗಿಸುತ್ತಿದ್ದರು.

ಇಂದು ಬೆಳಿಗ್ಗೆ ಯಾವುದೋ ವಿಷಯಕ್ಕೆ ಪತಿ-ಪತ್ನಿ ನಡುವೆ ಜಗಳ ನಡೆದು ಪತ್ನಿ ಗಾಯಗೊಂಡಿದ್ದಳು. ಇದರಿಂದ ಬೇಸತ್ತ ಜಗನ್ನಾಥ ಹಾವಳಗಾ ಕಾರ್ಖಾನೆ ಸಮೀಪದ ಕಬ್ಬಿನ ಗದ್ದೆಗೆ ತೆರಳಿ ಬ್ಲೇಡ್‌ನಿಂದ ಕುತ್ತಿಗೆ ಕೊಯ್ದುಕೊಂಡು ಆತ್ಮಹತ್ಯೆಗೆ ಯತ್ನಿಸಿದ್ದು, ಆತನನ್ನು ಕಲಬುರಗಿಯ ಜಿಮ್ಸ್ ಆಸ್ಪತ್ರೆಗೆ ದಾಖಲಿಸಲಾಗಿದೆ. ಅಫಜಲಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಕೇಂದ್ರ ಸರ್ಕಾರ ಕೊಡಬೇಕಾದ ಹಣ ಕೊಡುತ್ತಿಲ್ಲ, ಆದ್ರೂ ರಾಜ್ಯದ ಅಭಿವೃದ್ಧಿಗೆ ಬದ್ಧ: ಶರಣಬಸಪ್ಪ ದರ್ಶನಾಪುರ



ಮಲ್ಲಮ್ಮ ನುಡಿ ವಾರ್ತೆ ಬೀದರ. ಜೂ. 26 : ಕೇಂದ್ರ ಸರ್ಕಾರ ಕೊಡಬೇಕಾದ ಹಣವನ್ನು ಕೊಡುತ್ತಿಲ್ಲ, ಆದ್ರೂ ರಾಜ್ಯದ ಅಭಿವೃದ್ಧಿಗೆ ಬದ್ಧರಾಗಿದ್ದೇವೆ ಎಂದು ಸಣ್ಣ ಕೈಗಾರಿಕೆ ಸಚಿವ ಶರಣಬಸಪ್ಪ ದರ್ಶನಾಪುರ ಹೇಳಿದ್ದಾರೆ. ಬೀದರ್‌ನಲ್ಲಿ ಮಾತನಾಡಿದ ಅವರು, ಕೇಂದ್ರ ಸರ್ಕಾರ ರಾಜ್ಯಕ್ಕೆ ಕೊಡಬೇಕಾದ ಹಣವನ್ನು ಕೊಡುತ್ತಿಲ್ಲ.

ಆದರೂ, ನಾವು ರಾಜ್ಯದ ಅಭಿವೃದ್ಧಿಗೆ ಬದ್ಧರಾಗಿದ್ದೇವೆ ಎಂದರು.

ಇನ್ನೂ ನಾವು ಐದು ಗ್ಯಾರಂಟಿಗಳನ್ನು ಜಾರಿಗೊಳಿಸಿದ್ದೇವೆ. ಇದನ್ನು ಇತರ ರಾಜ್ಯದವರು ಬಂದು ಗಮನಿಸಿ, ಮಾದರಿಯಾಗಿ ತೆ-ಗೆದುಕೊಂಡು ಹೋಗುತ್ತಿದ್ದಾರೆ. ಆದರೆ, ಬಿಜೆಪಿಯವರಿಗೆ ತಲೆ ಕೆಟ್ಟಿದೆ. ಅವರ ಪಕ್ಷದಲ್ಲಿ ಏನಿದೆ? ಐದು ಗ್ಯಾರಂಟಿಗಳು ಒಳ್ಳೆಯದೋ, ಕೆಟ್ಟದ್ದೋ, ಜನರೇ ತೀರ್ಮಾನಿಸಲಿ ಎಂದು ಕಿಡಿಕಾರಿದ್ದಾರೆ.

ನಾವು ಪ್ರತಿ ತಿಂಗಳು 2,000 ರೂಪಾಯಿ ಹಾಕುವುದಾಗಿ ಭರವಸೆ ನೀಡಿದ್ದೇವೆ. ಏನೋ ತಾಂತ್ರಿಕ ಕಾರಣದಿಂದ ತಡವಾಗಿರಬಹುದು. ಆದರೆ, ಎಲ್ಲ ಫಲಾನುಭವಿಗಳಿಗೂ ಹಣ ತಲುಪಲಿದೆ ಎಂದು ಸ್ಪಷ್ಟಪಡಿಸಿದ್ದಾರೆ.

## ರೈಲ್ವೆ ಹಳಿಗೆ ಸಿಲುಕಿ ಪ್ರಯಾಣಿಕ ಸಾವು




ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ್: ಜೂ.26:ರೈಲ್ವೆ ಹಳಿಗೆ ಸಿಲುಕು ಪ್ರಯಾಣಿಕ ಮೃತಪಟ್ಟ ಘಟನೆ ಪಟ್ಟಣದ ರೈಲು ನಿಲ್ದಾಣದಲ್ಲಿ ಬುಧವಾರ ಬೆಳಿಗ್ಗೆ ಸಂಭವಿಸಿದೆ. ಅಪಘಾತದಲ್ಲಿ ಮೃತಪಟ್ಟ ದುರ್ದೈವಿಯನ್ನು ಕಲ್ಬುರ್ಗಿ ಬಸವೇಶ್ವರ ಬಡಾವಣೆ ನಿವಾಸಿ, ಕಲ್ಬುರ್ಗಿ ಮಹಾನಗರಪಾಲಿಕೆ ಕಾರ್ಮಿಕ ವಿಜಯಾನಂದ ಅಂಬಲಗೆ(28) ಎಂದು ಗುರುತಿಸಲಾಗಿದೆ.

ಕಲ್ಬುರ್ಗಿಯಿಂದ ಬೀದರ್ ಜಿಲ್ಲೆ ಭಾಲ್ಕಿ ತಾಲ್ಲೂಕು ಮೈಲಾರ ಮಲ್ಲಣ್ಣ ದರ್ಶಕ್ಕಾಗಿ ತೆರಳುವ ಮಾರ್ಗಮಧ್ಯ ಪಟ್ಟಣದ ರೈಲ್ವೆ ನಿಲ್ದಾಣದಲ್ಲಿ ರೈಲು ನಿಲುಗಡೆಯಾದಾಗ ನೀರುತರುವುದಕ್ಕಾಗಿ ಕೆಳಗಿಳಿದಿದ್ದ. ರೈಲು ಚಲಿಸುತ್ತಿರುವುದು ಗಮನಿಸಿ, ಅವಸರದಲ್ಲಿ ರೈಲು ಹತ್ತುವಾಗ ಕಾಲುಜಾರಿ ಹಳಿಗೆ ಬಿದ್ದು ಮೃತಪಟ್ಟಿದ್ದಾನೆ. ಮೃತವ್ಯಕ್ತಿ ದೇಹ ಇಬ್ಭಾಗವಾಗಿ ಬಿದ್ದಿರುವ ಹೃದಯವಿದ್ರಾವಕ

ದೃಶ್ಯ ಕಂಡು ನಿಲ್ದಾಣದಲ್ಲಿನ ಪ್ರಯಾಣಿಕರ ಕರುಳು ಚುರ್ ಎನ್ನುವಂತಿತ್ತು. ಘಟನೆ ಹಿನ್ನೆಲೆಯಲ್ಲಿ ಬೀದರ್ ರೈಲ್ವೆ ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ

## ಇಲ್ಲಿಂದ ಭೂಮಿಯನ್ನು ನೋಡುವುದೇ ಸೌಭಾಗ್ಯ: ಬಾಹ್ಯಾಕಾಶ ನಿಲ್ದಾಣದಿಂದ ಶುಭಾಂಶು



ನವದೆಹಲಿ:ಜೂ.26:140 ಕೋಟಿ ಭಾರತೀಯರ ಕನಸನ್ನು

ಹೊತ್ತು ಅಂತರಿಕ್ಷಕ್ಕೆ ತೆರಳಿರುವ ಭಾರತೀಯ ವಾಯುಪಡೆಯ ಗ್ರೂಪ್ ಕ್ಯಾಪ್ಟನ್ ಶುಭಾಂಶು ಶುಕ್ಲಾ, ಅಂತಾರಾಷ್ಟ್ರೀಯ

ಬಾಹ್ಯಾಕಾಶ ನಿಲ್ದಾಣ ತಲುಪಿದ ಬಳಿಕ ಮೊದಲ ಸಂದೇಶವನ್ನು ಹಂಚಿಕೊಂಡಿದ್ದಾರೆ.

ಬಾಹ್ಯಾಕಾಶ ನಿಲ್ದಾಣ ತಲುಪಿದ ಬಳಿಕ ಮೊದಲ ಬಾರಿಗೆ ಮಾತನಾಡಿರುವ ಶುಕ್ಲಾ ನಾನು

(2ನೇ ಪುಟ ನೋಡಿ)

## ಭಯೋತ್ಪಾದನೆ, ಶಾಂತಿ ಒಟ್ಟಿಗೆ ಇರಲು ಸಾಧ್ಯವಿಲ್ಲ: ರಾಜನಾಥ್ ಸಿಂಗ್



ಮಲ್ಲಮ್ಮ ನುಡಿ ವಾರ್ತೆ ನವದೆಹಲಿ/ಬೀಜಿಂಗ್:ಜೂ.26: ಕೆಲವು ದೇಶಗಳು ತಮ್ಮ ನೀತಿಗಳಲ್ಲಿ ಗಡಿಯಾಚೆಗಿನ ಭಯೋತ್ಪಾದನೆಯನ್ನು ಅಸ್ತ್ರವಾಗಿ ಬಳಸುತ್ತಿವೆ ಮತ್ತು ಭಯೋತ್ಪಾದಕರಿಗೆ ಆಶ್ರಯ ನೀಡುತ್ತಿವೆ. ಅಂತಹ ದ್ವಿಮುಖ ನೀತಿಗಳನ್ನು ಕೊನೆಗೊಳಿಸುವುದು ಬಹಳ ಮುಖ್ಯ ಮತ್ತು ಶಾಂಘೈ ಸಹಕಾರ ಸಂಸ್ಥೆಯಂತಹ ವೇದಿಕೆಯು ಅಂತಹ ಶಕ್ತಿಗಳನ್ನು ಬಹಿರಂಗವಾಗಿ ಟೀಕಿಸಬೇಕು ಎಂದು ರಕ್ಷಣಾ ರಾಜನಾಥ್ ಸಿಂಗ್ ಹೇಳಿದರು.

ಚೀನಾದಲ್ಲಿ ನಡೆದ ಶಾಂಘೈ ಸಹಕಾರ ಸಂಸ್ಥೆ ರಕ್ಷಣಾ ಸಚಿವರ ಸಭೆಯಲ್ಲಿ ಮಾತನಾಡಿದ ರಾಜನಾಥ್ ಸಿಂಗ್, ಪಾಕಿಸ್ತಾನದ ಮೇಲೆ ಪರೋಕ್ಷ ದಾಳಿ ನಡೆಸಿದರು. ಭಯೋತ್ಪಾದನೆ ಮತ್ತು ಶಾಂತಿ ಒಟ್ಟಿಗೆ ಇರಲು ಸಾಧ್ಯವಿಲ್ಲ ಎಂದು ಹೇಳಿದರು. ಇದೇ ವೇಳೆ ಭಾರತದ ಭಯೋತ್ಪಾದನೆಯ ವಿಷಯದ ಬಗ್ಗೆ ತನ್ನ ಕಠಿಣ ನಿಲುವನ್ನು ಸ್ಪಷ್ಟಪಡಿಸಿದರು. ಭಯೋತ್ಪಾದನೆಯ ವಿರುದ್ಧ ಒಂದಾಗಲು ಕರೆ ನೀಡಿದ ರಾಜನಾಥ್ ಸಿಂಗ್, ಆಪರೇಷನ್ ಸಿಂಧೂರದ ಮೂಲಕ ಭಾರತ ಭಯೋತ್ಪಾದನೆಯ ಮೇಲೆ ಯಾವುದೇ ಒತ್ತಡ ಅಥವಾ ರಾಜಿಗೆ ಸಿದ್ಧವಾಗಿಲ್ಲ ಎಂದು ಮತ್ತೊಮ್ಮೆ ತೋರಿಸಿದೆ. ನಮ್ಮ ಹೋರಾಟಕ್ಕೆ ಇತರೆ ದೇಶಗಳು ಬೆಂಬಲ ನೀಡಬೇಕು ಎಂದು ಆಗ್ರಹಿಸಿದರು. ಶಾಂಘೈ ಸಹಕಾರ ಸಂಸ್ಥೆಯಲ್ಲಿ ಭಾರತ, ಚೀನಾ, ಪಾಕಿಸ್ತಾನ, ರಷ್ಯಾ ಸೇರಿದಂತೆ ಒಟ್ಟು ಹತ್ತು ಸದಸ್ಯ ರಾಷ್ಟ್ರಗಳಿವೆ. ಈ ಬಾರಿ ಶಾಂಘೈ ಸಹಕಾರ ಸಂಸ್ಥೆ ಅಧ್ಯಕ್ಷರಾಗಿರುವ ಚೀನಾ ಮತ್ತು ಅದರ ಆಪ್ತ ಮಿತ್ರ ಪಾಕಿಸ್ತಾನ ಇಬ್ಬರೂ ಒಟ್ಟಾಗಿ ಎಸ್‌ಸಿಓ ದಾಖಲೆಯಲ್ಲಿ ಭಯೋತ್ಪಾದನೆಯ ಮೇಲಿನ ಗಮನವನ್ನು ಕಡಿಮೆ ಮಾಡಲು ಪ್ರಯತ್ನಿಸಿದರು. ಆದರೆ ಭಾರತ ಇದಕ್ಕೆ ತೀವ್ರವಾಗಿ ಆಕ್ಷೇಪ ವ್ಯಕ್ತಪಡಿಸಿತು ಮತ್ತು ತನ್ನ ನಿಲುವಿನಲ್ಲಿ ರಾಜಿ ಮಾಡಿಕೊಳ್ಳಲಿಲ್ಲ. ವಿಶೇಷವಾಗಿ ಕಾಶ್ಮೀರದ ಪಹಲ್ಗಾಮ್‌ನಲ್ಲಿ ಇತ್ತೀಚೆಗೆ ನಡೆದ ಭಯೋತ್ಪಾದಕ ದಾಳಿಯ ಬಗ್ಗೆ, ಭಯೋತ್ಪಾದನೆಯ ಮೇಲೆ ಯಾವುದೇ ದಯೆಯನ್ನು ಸಹಿಸುವುದಿಲ್ಲ ಎಂದು ಭಾರತ ಸ್ಪಷ್ಟಪಡಿಸಿದೆ.

**ಒಂದನೇ ಪುಟದಿಂದ**

## ಈಶ್ವರ ಖಂಡ್ರೆ, ರಹೀಂಖಾನ್ ಒತ್ತಾಯ

ಕಾರ್ಖಾನೆಯೂ ಮುಚ್ಚಿದೆ. ಬ್ಯಾಂಕ್ ಕೂಡ ಚೇತರಿಸಿಕೊಳ್ಳದಂತಾಗಿದೆ. ಈ ನಿಟ್ಟಿನಲ್ಲಿ ಕಾರ್ಖಾನೆಯ ಪುನಶ್ಚೇತನ ಕುರಿತಂತೆ ಮುಖ್ಯಮಂತ್ರಿಗಳ ಬಳಿಗೆ ನಿಯೋಗ ತೆರಳಬೇಕು ಎಂದು ಸಲಹೆ ನೀಡಿದರು.

ಸಚಿವ ರಹೀಂ ಖಾನ್ ಸಕ್ಕರೆ ಕಾರ್ಖಾನೆಯಲ್ಲಿ ಅವ್ಯವಹಾರ ಮಾಡಿದವರ ವಿರುದ್ಧ ಕ್ರಮ ಆಗದಿದ್ದರೆ ಮತ್ತೆ ಅವರೇ ಚುನಾಯಿಸಿ ಬಂದು ಕಾರ್ಖಾನೆಯನ್ನು ನಾಶ ಮಾಡುತ್ತಾರೆ. ಈ ಬಗ್ಗೆ ತನಿಖೆ ಆಗಿ ತಪ್ಪಿತಸ್ಥರ ವಿರುದ್ಧ ಕಾನೂನು ರೀತ್ಯ ಕ್ರಮ ಆಗಬೇಕು ಎಂದರು.

ಕಾರ್ಖಾನೆಯ ಸ್ವಾಧೀನದಲ್ಲಿರುವ 173 ಎಕರೆ ಜಮೀನಿನ ಪೈಕಿ ಕಾರ್ಖಾನೆಗೆ ಬೇಕಾದಷ್ಟು ಜಾಗ ಇಟ್ಟುಕೊಂಡು ಭಾಗಶಃ ಮಾರಾಟ ಮಾಡಿ, ಬ್ಯಾಂಕ್ ಗಳ ಸಾಲ ತೀರಿಸಿ, ಯಂತ್ರೋಪಕರಣಗಳಿಗೆ ಹೊಸ ಸಾಲ ಪಡೆದು ಕಾರ್ಖಾನೆ ಆರಂಭಿಸಲು ಸಾಧ್ಯವೇ ಎಂಬ ಬಗ್ಗೆ ಪರಿಶೀಲಿಸಲು ಸಹಕಾರ ಸಚಿವ ರಾಜಣ್ಣ ಸಲಹೆ ನೀಡಿದರು.

ಸಕ್ಕರೆ ಸಚಿವ ಶಿವಾನಂದ ಪಾಟೀಲ್, ಓಟಿಎಸ್ ಯೋಜನೆಯಡಿ ಬ್ಯಾಂಕ್ ಗಳ ಸಾಲದ ಮೇಲಿನ ಬಡ್ಡಿ ಮನ್ನಾ ಮಾಡುವ ಮತ್ತು ಖಾಸಗಿಯವರಿಗೆ ಗುತ್ತಿಗೆ ನೀಡಿ ಸಕ್ಕರೆ ಕಾರ್ಖಾನೆ ಪುನಾರಂಭ ಮಾಡುವ ಬಗ್ಗೆ ಪರಿಶೀಲಿಸುವಂತೆ ಸಲಹೆ ನೀಡಿದರು.

ಬೀದರ್ ಜಿಲ್ಲೆಯ ರೈತರ ಹಿತದೃಷ್ಟಿಯಿಂದ ಸಹಕಾರಿ ಸಕ್ಕರೆ ಕಾರ್ಖಾನೆ ಪುನಾರಂಭಕ್ಕಾಗಿ ಮುಖ್ಯಮಂತ್ರಿಗಳ ಬಳಿಗೆ ನಿಯೋಗ ತೆರಳಲು ಮತ್ತು ಕಾರ್ಖಾನೆಯ ಅವ್ಯವಹಾರಗಳ ಬಗ್ಗೆ ತನಿಖೆ ನಡೆಸಬೇಕೆಂದು ಸಭೆಯಲ್ಲಿ ತೀರ್ಮಾನಿಸಲಾಯಿತು.

ಸಚಿವರುಗಳಾದ ಕೆ.ಎನ್. ರಾಜಣ್ಣ, ಶಿವಾನಂದ ಪಾಟೀಲ್, ಈಶ್ವರ ಬಿ ಖಂಡ್ರೆ, ರಹೀಂಖಾನ್ ಮತ್ತು ಮಾಜಿ ಸಚಿವ ರಾಜಶೇಖರ ಪಾಟೀಲ್, ಶಾಸಕರಾದ ಡಾ. ಶೈಲೇಂದ್ರ ಬೆಲ್ದಾಳೆ, ವಿಧಾನಪರಿಷತ್ ಸದಸ್ಯರಾದ ಭೀಮರಾವ್ ಪಾಟೀಲ್, ಚಂದ್ರಶೇಖರ ಪಾಟೀಲ್, ಎಂ.ಜಿ. ಮುಳೆ, ಡಿಸಿಸಿ ಬ್ಯಾಂಕ್ ಅಧ್ಯಕ್ಷ ಅಮರ್ ಬಿ ಖಂಡ್ರೆ, ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಮತ್ತಿತರರು ಪಾಲ್ಗೊಂಡಿದ್ದರು.

## ಪೊಲೀಸ್ ಇಲಾಖೆಗೆ ನೀಡಿ:ಎಸ್‌ಪಿ ಪ್ರದೀಪ್ ಗುಂಟಿ

ಅಂದಾಗ ಮಾತ್ರ ಸಮಾಜವನ್ನು ನಶೆ ಮುಕ್ತ ಮಾಡಲು ಸಾಧ್ಯವಾಗುತ್ತದೆ ಆದ್ದರಿಂದ ಎಲ್ಲರೂ ಪೊಲೀಸ್ ಇಲಾಖೆ ಸಹಕರಿಸಬೇಕು ಎಂದರು

ವೇದಿಕೆ ಕಾರ್ಯಕ್ರಮಕ್ಕೂ ಮುನ್ನ ಜಾಗೃತಿ ಜಾಥಾ ಕಾರ್ಯಕ್ರಮವು ಬೀದರ್ ನಗರದ ವಿಶ್ವಗುರು ಬಸವೇಶ್ವರ ವೃತ್ತದಿಂದ ಪ್ರಾರಂಭವಾಗಿ, ಭಗತ್ ಸಿಂಗ್ ವೃತ್ತ, ಶಿವಾಜಿ ವೃತ್ತ, ಹರಳಯ್ಯ ವೃತ್ತ, ಬ್ರಿಮ್ಸ್ ಆಸ್ಪತ್ರೆ ರಸ್ತೆ ಮಾರ್ಗವಾಗಿ ಅಂಬೇಡ್ಕರ್ ವೃತ್ತ ತಲುಪಿತು. ಈ ಸಮಯದಲ್ಲಿ ಡ್ರಗ್ಸ್ ಮಾರಾಟ, ಮಾದಕ ವ್ಯಸನ ಹಾಗೂ ದುಶ್ಚಟಗಳಿಂದ ದೂರವಿರುವ ಬಗ್ಗೆ ಸಂದೇಶ ನೀಡುವ ಬಿತ್ತಿ ಪತ್ರಗಳನ್ನು ಹಿಡಿದು ಬೀದರ್ ಜಿಲ್ಲಾ ಪೊಲೀಸರೊಂದಿಗೆ ನೂರಾರು ವಿದ್ಯಾರ್ಥಿಗಳು ಹೆಜ್ಜೆ ಹಾಕಿದರು.

ಈ ಸಂದರ್ಭದಲ್ಲಿ ಬೀದರ ನಗರಸಭೆ ಅಧ್ಯಕ್ಷ ಮೊಹ್ಮದ್ ಗೌಸ್, ಹೆಚ್ಚುವರಿ ಎಸ್ಪಿ ಚಂದ್ರಕಾಂತ್ ಪೂಜಾರಿ, ಬೀದರ ಸಹಾಯಕ ಆಯುಕ್ತ ಮೊಹ್ಮದ್ ಶಕೀಲ್, ಬೀದರ ಅಬಕಾರಿ ಉಪ ಆಯುಕ್ತರಾದ ರವಿಶಂಕರ ಎ., ಡಿವೈಎಸ್ಪಿ ಶಿವನಗೌಡ ಪಾಟೀಲ್, ಆರೋಗ್ಯ ಇಲಾಖೆಯ ಅಧಿಕಾರಿಗಳು, ಸೇರಿದಂತೆ ಇತರೆ ಅಧಿಕಾರಿಗಳು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಬಾಹ್ಯಾಕಾಶ ನಿಲ್ದಾಣದಿಂದ ಶುಭಾಂಶು

ಎದುರು ನೋಡುತ್ತಿದ್ದೆ. ನಿಮ್ಮ ಪ್ರೀತಿ, ಆಶೀರ್ವಾದದಿಂದ ಐಎಸ್‌ಎಸ್ ತಲುಪಿದ್ದೇನೆ. ಇಲ್ಲಿಂದ ಭೂಮಿಯನ್ನು ನೋಡುವುದೇ ಸೌಭಾಗ್ಯ ಅಂತ ಭಾವುಕರಾಗಿದ್ದಾರೆ.

ನಾವು ಹೀಗೆ ನಿಂತಿರೋದು ಸುಲಭ ಅಂತಾ ಕಾಣಿಸಬಹುದು. ಆದರೆ ಇದು ಕಷ್ಟಕರ. ತಲೆ ಭಾರವಾದಂತಿದೆ, ಸ್ವಲ್ಪ ಕಷ್ಟವಾಗುತ್ತಿದೆ. ಕೆಲವೇ ದಿನಗಳಲ್ಲಿ ಇದಕ್ಕೆ ಹೊಂದಿಕೊಳ್ಳುತ್ತೇವೆ. ಇದು ಮೊದಲ ಹೆಜ್ಜೆ, ಇನ್ನೂ 14 ದಿನ ನಾವಿಲ್ಲಿರುತ್ತೇವೆ. ಅನೇಕ ವಿಜ್ಞಾನದ ಪ್ರಯೋಗಗಳನ್ನು ಮಾಡಲಿದ್ದೇವೆ. ನಿಮ್ಮೊಂದಿಗೆ ಮಾತನಾಡುತ್ತೇವೆ ಎಂದಿದ್ದಾರೆ ಶುಕ್ಲಾ. ಇದು ನಮ್ಮ ಅಂತರಿಕ್ಷ ಯಾನದ ಹೆಜ್ಜೆಯೂ ಹೌದು. ಡ್ರಾಗನ್‌ನಲ್ಲಿದ್ದಾಗ ನಿಮ್ಮಜೊತೆ ಮಾತನಾಡಿದ್ದೆ. ಇಲ್ಲಿಂದ ನಂತರವೂ ಮಾತನಾಡುತ್ತೇನೆ. ಈ ಯಾನವನ್ನು ಅತ್ಯಾಕರ್ಷಕ ಮಾಡೋಣ. ನಾವೆಲ್ಲರೂ ಕೂಡ ಉತ್ಸಾಹದಿಂದ ಭಾಗಿಯಾಗುತ್ತೇವೆ. ನಾನು ತುಂಬಾ ಉತ್ಸಾಹದಿಂದಿದ್ದೇನೆ. ನನ್ನ ತೋಳಿನಲ್ಲಿ ತ್ರಿವರ್ಣ ಧ್ವಜದ ಜೊತೆ ನಡೆಯುತ್ತಿದ್ದೇನೆ, ಮುಂದಿನ 14 ದಿನ ಇನ್ನಷ್ಟು ಆಕರ್ಷಕವಾಗಿರಲಿದೆ. ಜೈ ಹಿಂದ್, ಜೈ ಭಾರತ ಅಂತ ಶುಕ್ಲಾ ಹೇಳಿದ್ದಾರೆ. ಶುಕ್ಲಾ ಗಗನಯಾತ್ರಿ ?634'ಇದಕ್ಕೂ ಹ್ಯಾಚ್ ತೆರೆಯುತ್ತಿದ್ದಂತೆ ಐಎಸ್‌ಎಸ್‌ನ ಸಿಬ್ಬಂದಿ ಶುಕ್ಲಾ ಸೇರಿದಂತೆ ಇತರ ನಾಲ್ವರನ್ನು ಆತ್ಮೀಯವಾಗಿ ಸ್ವಾಗತಿಸಿದರು. ಬಳಿಕ ಶುಕ್ಲಾಗೆ ಗಗನಯಾತ್ರಿ ಸಂಖ್ಯೆ–634 ನೀಡಲಾಯಿತು. ?ಡ್ರ್ಯಾಗನ್' ನೌಕೆ ಡಾಕಿಂಗ್ ಪೂರ್ಣ

ಬುಧವಾರ (ಜೂ.25) ಮಧ್ಯಾಹ್ನ 12:03ರ ವೇಳೆಗೆ ಆಕ್ಸಿಯಂ–4 ಮಿಷನ್ ಅಡಿಯಲ್ಲಿ ಉಡಾವಣೆ ಆಗಿದ್ದ ಸ್ಪೇಸ್‌ಎಕ್ಸ್‌ನ ?ಡ್ರ್ಯಾಗನ್' ನೌಕೆ ಗುರುವಾರ (ಜೂ.26) ಸಂಜೆ 4:01 ಗಂಟೆ ವೇಳೆಗೆ ಯಶಸ್ವಿಯಾಗಿ ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಲ್ಲಿ ಡಾಕ್ (ಕೂಡಿಸುವುದು) ಆಯಿತು. ಇದಾದ 2 ಗಂಟೆಗಳ ನಂತರ ಹ್ಯಾಚ್ ತೆರೆಯಿತು. ಬಳಿಕ ಶುಕ್ಲಾ ಸೇರಿ ನಾಲ್ವರು ಗಗನಯಾತ್ರಿಗಳು ಐಎಸ್‌ಎಸ್‌ನೊಳಗೆ ಅಧಿಕೃತವಾಗಿ ಪ್ರವೇಶಿಸುವ ಮೂಲಕ ಹೆಮ್ಮೆಯ ಕ್ಷಣಕ್ಕೆ ಸಾಕ್ಷಿಯಾದರು. ಐಎಸ್‌ಎಸ್ ಪ್ರವೇಶಿಸುತ್ತಿದ್ದಂತೆ ನಿಲ್ದಾಣದ ಸಿಬ್ಬಂದಿ ಪರಸ್ಪರ ಅಪ್ಪಿಕೊಂಡು ಬರಮಾಡಿಕೊಂಡರು.

## ಪರಿಸರ ಕಾಳಜಿ ತೋರಿದ್ದ ಶರಣರು:ಡಾ.ಬಲ್ಲೂರ



ಬೀದರ. ಜೂ. 26 : ಬಸವಾದಿ ಶರಣರು ಪರಿಸರ ಕಾಳಜಿ ತೋರಿದ್ದರು ಎಂದು ಸಾಹಿತಿ ಡಾ. ಬಸವರಾಜ ಬಲ್ಲೂರ ಹೇಳಿದರು.

ಜಾಗತಿಕ ಲಿಂಗಾಯತ ಮಹಾಸಭಾದ ಜಿಲ್ಲಾ ಘಟಕದ ವತಿಯಿಂದ ನಗರದ ಗಾಂಧಿಗಂಜ್‌ನ ಬಸವೇಶ್ವರ ದೇವಸ್ಥಾನದಲ್ಲಿ ಬುಧವಾರ ಸಂಜೆ ಆಯೋಜಿಸಿದ್ದ ಮಾಸಿಕ ವಚನ ಮಂಟಪ, ವಿಶ್ವ ಪರಿಸರ ದಿನಾಚರಣೆ ಹಾಗೂ ಸಸಿ ವಿತರಣೆ ಕಾರ್ಯಕ್ರಮದಲ್ಲಿ 'ಶರಣರ ಪರಿಸರ ಪ್ರೇಮ' ಕುರಿತು ಅವರು ಮಾತನಾಡಿದರು.

ಶರಣರು ಪರಿಸರಕ್ಕೆ ವಿಶೇಷ ಮಹತ್ವ ನೀಡಿದ್ದರು. ಪರಿಸರವನ್ನು ತಮ್ಮ ಸ್ವಾರ್ಥಕ್ಕಾಗಿ ಬಲವಂತವಾಗಿ ಬಳಸಲಿಲ್ಲ. ಅದಕ್ಕೆ ಹಾನಿ ಉಂಟು ಮಾಡದಂತೆ ಬದುಕು ಸಾಗಿಸಿದ್ದರು ಎಂದು ತಿಳಿಸಿದರು.

ಪರಿಸರದ ಬಗೆಗಿನ ಶರಣರ ಪ್ರೀತಿ, ಪ್ರೇಮ ಎಲ್ಲರಿಗೂ ಮಾದರಿಯಾಗಬೇಕು ಎಂದರು.

ಪರಿಸರ ಪ್ರೀತಿ ಬಾಯಿ ಮಾತಿಗೆ ಸೀಮಿತವಾಗಬಾರದು. ಪ್ರತಿಯೊಬ್ಬರೂ ಸಸಿ ನೆಟ್ಟು ಪರಿಸರ ಉಳಿಸಬೇಕು ಎಂದು ಸಾನಿಧ್ಯ ವಹಿಸಿದ್ದ ಬಸವ ಮುಕ್ತಿ ಮಂದಿರದ ಶಿವಯೋಗೀಶ್ವರ ಸ್ವಾಮೀಜಿ ನುಡಿದರು. ಪರಿಸರ ಸಂರಕ್ಷಣೆ ಭಾಗವಾಗಿ ಭಾತಂಬ್ರಾದ ಮಠದಲ್ಲಿ ಈವರೆಗೆ 2 ಸಾವಿರ ಸಸಿಗಳನ್ನು ನೆಟ್ಟು ಬೆಳೆಸಲಾಗಿದೆ ಎಂದು ತಿಳಿಸಿದರು.

ಲಿಂಗಾಯತ ಮಠಾಧಿಪತಿಗಳ ಒಕ್ಕೂಟ ಹಾಗೂ ಜಾಗತಿಕ ಲಿಂಗಾಯತ ಮಹಾಸಭಾ ವತಿಯಿಂದ ಸೆಪ್ಟೆಂಬರ್‌ನಲ್ಲಿ ರಾಜ್ಯದಾದ್ಯಂತ ಬಸವ ಸಂತತಿ ಅಭಿಯಾನ ನಡೆಸಲು ನಿರ್ಧರಿಸಲಾಗಿದೆ ಎಂದು ಅಧ್ಯಕ್ಷತೆ ವಹಿಸಿದ್ದ ಜಾಗತಿಕ ಲಿಂಗಾಯತ ಮಹಾಸಭಾದ ಜಿಲ್ಲಾ ಘಟಕದ ಅಧ್ಯಕ್ಷ ಬಸವರಾಜ ಧನ್ನೂರ ಹೇಳಿದರು.

ರಾಜ್ಯ ಸರ್ಕಾರ ಬಸವಣ್ಣನವರನ್ನು ಕರ್ನಾಟಕದ ಸಾಂಸ್ಕೃತಿಕ ನಾಯಕರನ್ನಾಗಿ ಘೋಷಿಸಿದ ಪ್ರಯುಕ್ತ ಬಸವ ಸಂಸ್ಕೃತಿಯನ್ನು ಜನ ಮಾನಸಕ್ಕೆ ತಲುಪಿಸಲು ಈ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ರಾಜ್ಯ ಅಲ್ಪಸಂಖ್ಯಾತರ ಆಯೋಗದ ಸದಸ್ಯೆ ಮನದೀಪ್ ಕೌರ್ ಹಾಗೂ ಮನಪ್ರೀತ್ ಸಿಂಗ್ ದಂಪತಿ, ಬಸವೇಶ್ವರ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಸಿದ್ದಯ್ಯ ಕಾವಡಿ, ಉಪಾಧ್ಯಕ್ಷ ಉದಯಕುಮಾರ ಲದ್ದೆ, ರೋಟರಿ ಕ್ಲಬ್ ಬೀದರ್ ಅಧ್ಯಕ್ಷ ಸೋಮಶೇಖರ ಪಾಟೀಲ, ಜಯದೇವಿ ತಾಯಿ ಲಿಗಾಡೆ ಪ್ರಶಸ್ತಿ ಪುರಸ್ಕೃತ ಸುವರ್ಣಾ ಚಿಮಕೋಡೆ ಹಾಗೂ ಇನ್ನರ್ ವ್ಹೀಲ್ ಕ್ಲಬ್ ಅಧ್ಯಕ್ಷೆ ಕವಿತಾ ಪ್ರಭಾ ಅವರನ್ನು ಸನ್ಮಾನಿಸಲಾಯಿತು.

ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿಯ ಸಹಾಯಕ ಪರಿಸರ ಅಧಿಕಾರಿ ಜಗನ್ನಾಥ ಪರಿಸರ ಸಂರಕ್ಷಣೆ ಪ್ರತಿಜ್ಞೆ ಮಾಡಿಸಿದರು. ಅಶ್ವಿನಿ ರಾಜಕುಮಾರ ವಚನ ಗಾಯನ ನಡೆಸಿಕೊಟ್ಟರು.

ಜಾಗತಿಕ ಲಿಂಗಾಯತ ಮಹಾಸಭಾದ ಜಿಲ್ಲಾ ಮಹಿಳಾ ಘಟಕದ ಅಧ್ಯಕ್ಷೆ ಉಷಾ ಮಿರ್ಚೆ, ಕಾರ್ಯದರ್ಶಿ ಜಯದೇವಿ ಯದಲಾಪುರೆ, ಪ್ರಮುಖರಾದ ಸುವರ್ಣಾ ಧನ್ನೂರ, ರಾಜೇಂದ್ರಕುಮಾರ ಗಂದಗೆ, ಗುಂಡಪ್ಪ ಬಳತೆ, ನಾಗಶೆಟ್ಟೆಪ್ಪ ದಾಡಗಿ, ಮಲ್ಲಿಕಾರ್ಜುನ ಪಂಚಾಕ್ಷರಿ, ವೀರಭದ್ರಪ್ಪ ಬುಯ್ಯಾ, ರಾಜಕುಮಾರ ಹಜ್ಜರಗಿ ಮತ್ತಿತರರು ಇದ್ದರು.

ಯೋಗೇಶ ಶ್ರೀಗಿರಿ ಭಕ್ತಿ ದಾಸೋಹಗೈದರು. ಮಹಾಸಭಾದ ಜಿಲ್ಲಾ ಘಟಕದ ಪ್ರಧಾನ ಕಾರ್ಯದರ್ಶಿ ರಾಜೇಂದ್ರ ಜೊನ್ನಿಕೇರಿ ಸ್ವಾಗತಿಸಿದರು. ಯೋಗೇಂದ್ರ ಯದಲಾಪುರೆ ನಿರೂಪಿಸಿದರು. ಬಸವರಾಜ ಜಕ್ಕಾ ವಂದಿಸಿದರು.

ಅರಣ್ಯ ಇಲಾಖೆ ಸಹಯೋಗದೊಂದಿಗೆ 250 ಸಸಿಗಳನ್ನು ಸಾರ್ವಜನಿಕರಿಗೆ ಉಚಿತವಾಗಿ ವಿತರಿಸಲಾಯಿತು.

## ಹುದ್ದೆಗೆ ಅರ್ಜಿ ಸಲ್ಲಿಸಿದವರಿಗೆ ಸಿಹಿಸುದ್ದಿ

ಇಂದಿಗೆ ಚಾಲಕ ಕಂ ನಿರ್ವಾಹಕರ ಹುದ್ದೆ ಸಲ್ಲಿಸಿದಂತಹ ಅನೇಕ ಅಭ್ಯರ್ಥಿಗಳು ವಯೋಮಿತಿ ಮೀರಿದ್ದಾರೆ. ಅವರಿಗೂ ಅವಕಾಶ ಕಲ್ಪಿಸುವ ನಿಟ್ಟಿನಲ್ಲಿ ಅವರಿಗೆ ಅನ್ಯಾಯವಾಗಬಾರದೆಂಬ ಸದುದ್ದೇಶದಿಂದ ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಮಹತ್ವದ ನಿರ್ಧಾರಕ್ಕೆ ಮುಂದಾಗಿದ್ದಾರೆ.

ಈ ಹುದ್ದೆಗಳಿಗೆ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳಿಗೆ ವಯೋಮಿತಿ ಸಡಿಲಿಕೆಗಾಗಿ ಡಿಪಿಎಆರ್ ಹಾಗೂ ಕಾನೂನು ಇಲಾಖೆಯಿಂದ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲು ಸೂಚಿಸಿದ್ದಾರೆ. ಆ ಪ್ರಸ್ತಾವನೆಗೆ ಅನುಮೋದನೆ ಸಿಕ್ಕ ಬಳಿಕ ವಾಯುವ್ಯ ಕರ್ನಾಟಕ ಸಾರಿಗೆ ನಿಗಮದ 1000 ಚಾಲಕ ಕಂ ನಿರ್ವಾಹಕರ ಹುದ್ದೆಗೆ ಅರ್ಜಿ ಸಲ್ಲಿಸಿದ, ವಯೋಮಿತಿ ಮೀರಿದ ಅಭ್ಯರ್ಥಿಗಳಿಗೆ ಅವಕಾಶ ಸಿಗಲಿದೆ. ಆ ಮೂಲಕ ಚಾಲಕ ಕಂ ನಿರ್ವಾಹಕರ ಸಾವಿರ ಹುದ್ದೆಗೆ ನೇಮಕವಾಗಲು ಅರ್ಹತೆ ಪಡೆದಂತಾಗಲಿದೆ.

## ನರಸಪ್ಪ ನರನಾಳ ಅವರ 38ನೇ ಜನ್ಮ ದಿನ ಆಚರಣೆ

ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:ಜೂ.26:ಯಾವುದೇ ಸಮಯದಲ್ಲಾಗಲಿ ಎಲ್ಲರ ಜೊತೆಗೂ ಸರಳವಾಗಿ, ಒಳ್ಳೆಯ ರೀತಿಯಲ್ಲಿ ನಡೆದುಕೊಳ್ಳುವಂತಹ ವ್ಯಕ್ತಿತ್ವಹೊಂದಿದ್ದ ಯುವ ಉದ್ಯಮಿ ಹಾಗೂ ಬಿಜೆಪಿ ಎಸ್.ಟಿ.ಮೋರ್ಚಾ ಜಿಲ್ಲಾ ಕಾರ್ಯದರ್ಶಿ ನರಸಪ್ಪ ಎಂ. ನರನಾಳ ಅವರ 38ನೇ ಜನ್ಮ ದಿನಾಚರಣೆಯನ್ನು ಪಟ್ಟಣ ಪ್ರಿಯಾ ಫೋಟೋಸ್ಟುಡಿಯೋನಲ್ಲಿ ಕೇಕ್ ಕತ್ತರಿಸುವ ಮೂಲಕ ಅದ್ದೂರಿಯಾಗಿ ಆಚರಿಸಲಾಯಿತ್ತು.

## ಮಹಾಸತಿ ಮಾಸಾಬಿ ಬೆಟ್ಟಕ್ಕೆ ಹೋಗಿ ಮಳೆಗಾಗಿ ಪ್ರಾರ್ಥನೆ..!



ಸುರಪುರ : ಕೆಂಭಾವಿ ಪಟ್ಟಣದ, ಮುಸ್ಲಿಂ ಬಾಂಧವರು ಪ್ರತಿ ವರ್ಷದ ವಾಡಿಕೆಯಂತೆ ಗ್ರಾಮ ದೇವತೆ ಮಹಾಸತಿ (ಮಾಸಾಬಿ) ಬೆಟ್ಟಕ್ಕೆ ಹೋಗಿ ಮಳೆಗಾಗಿ ಪೂಜೆ ಸಲ್ಲಿಸಿ. ಪ್ರಾರ್ಥನೆ ಮಾಡಿದರು.

ಪಟ್ಟಣದ ಸೀಮೆಯಲ್ಲಿರುವ ಗ್ರಾಮ ದೇವತೆಗಳಾದ ಗುಡ್ಡದ ರಾಮಲಿಂಗೇಶ್ವರ ಮತ್ತು ಬೆಟ್ಟದ ಮಾಸಾಬಿ ದೇವಿಗೆ ಮಳೆಗಾಗಿ ಪ್ರಾರ್ಥನೆ ಸಲ್ಲಿಸಿ ವಿಶೇಶ ಪೂಜೆ ಸಲ್ಲಿಸುವುದು ಪ್ರತಿವರ್ಷ ನಡೆದು ಬಂದ ಸಂಪ್ರಾದಾಯವಾಗಿದೆ.

ಗುರುವಾರ ರೈತರು ಹಾಗೂ ಪಟ್ಟಣದ ಮುಸ್ಲಿಂ ಬಾಂದವರು ಹಿಂದು ಮುಸ್ಲಿಂ ಭಾವೈಕ್ಯತೆಯ ಸಂಕೇತವಾದ ಹಜರತ್ ಜಬ್ಬಾ ಮಾಸಾಬಿ ಕುದುರೆಗಳಿಗೆ ವಿಶೇಶ ಅಲಂಕಾರಗೊಳಿಸಿ ಸಕಲ ವಾದ್ಯ ಮೇಳಗಳೊಂದಿಗೆ ಪಟ್ಟಣದಲ್ಲಿ ಮೆರವಣಿಗೆ ಮೂಲಕ ಮಾಸಾಬಿ ಬೆಟ್ಟಕ್ಕೆ ಹೋಗಿ ಪೂಜೆ ಸಲ್ಲಿಸಿದರು.

ನಂತರ ಸಾಮೂಹಿಕ ಪ್ರಸಾದ ಸ್ವೀಕರಿಸಿ ಸಾಯಂಕಾಲ ಮನೆಗೆ ಸೇರುತ್ತಿದ್ದಂತೆ

ಮಳೆಬಂದು ನೆಲ ತಂಪು ಮಾಡಿದ್ದು ಕಂಡು ರೈತರಲ್ಲಿ ಮುಖದಲ್ಲಿ ಸಂತಸದ ಭಾವ ಮೂಡಿತು.

## ಮರಾಠಾ ನೌಕರರ ಸಂಘದಿಂದ ಸಂಭ್ರಮದ ಜಯಂತಿ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ:– ಜೂ 26 ಛತ್ರಪತಿ ಶಾಹು ಮಹಾರಾಜರು ದಲಿತರ ಹಾಗೂ ಹಿಂದುಳಿದವರ ಶೈಕ್ಷಣಿಕ, ಆರ್ಥಿಕ ಮತ್ತು ಸಾಮಾಜಿಕ ಉನ್ನತಿಯ ಉದ್ದೇಶದಿಂದ ಮೀಸಲಾತಿ ನೀಡಿದ್ದರು ಎಂದು ಸಾಹಿತಿ ದತ್ತಾತ್ರೇಯ ಪವಾರ ಹೇಳಿದ್ದಾರೆ.

ಇಲ್ಲಿನ ಶಿವಾಜಿ ಪಾರ್ಕ್ ಕರ್ನಾಟಕ ಮರಾಠಾ ನೌಕರರ ಸಂಘ ತಾಲ್ಲೂಕು ಘಟಕದಿಂದ ಗುರುವಾರ ಆಯೋಜಿಸಿದ್ದ ಛತ್ರಪತಿ ಶಾಹು ಮಹಾರಾಜರ ಜಯಂತಿಯಲ್ಲಿ ಮಾತನಾಡಿ 'ಧಾರವಾಡದಲ್ಲಿ ಶಿಕ್ಷಣ ಪಡೆದಿದ್ದ ಅವರು ರಾಜ್ಯದ ಅನೇಕರೊಂದಿಗೆ ಅನ್ಯೋನ್ಯ ಸಂಬಂಧಹೊಂದಿದ್ದರು. ವೈಚಾರಿಕ, ವೈಜ್ಞಾನಿಕ ತಳಹದಿಯಲ್ಲಿ ಆಲೋಚಿಸುತ್ತಿದ್ದರು. ರಾಜ ಆಗಿದ್ದರೂ ಜನಸಾಮಾನ್ಯರ ಜೊತೆಯಲ್ಲಿ ಬೆರೆತು ಅವರ ಸಮಸ್ಯೆಗಳಿಗೆ ಸ್ಪಂದಿಸುತ್ತಿದ್ದರು. ಜಾತಿ, ಧರ್ಮದ ಭೇದವೆಣಿಸದೆ ಎಲ್ಲರ ಹಿತ ಬಯಸಿದ್ದ ಸಮಾಜ ಸುಧಾರಕ ಆಗಿದ್ದರು. ಜಲಾಶಯ, ಕೆರೆ, ಕಾಲುವೆ ನಿರ್ಮಿಸಿ ಕೃಷಿಕರಿಗೆ ಅನುಕೂಲತೆ ಒದಗಿಸಿದ್ದರು' ಎಂದರು.

ಸಂಪನ್ಮೂಲ ವ್ಯಕ್ತಿ ಬಾಲಕೃಷ್ಣ ಪಾಟೀಲ ಮಾತನಾಡಿ, 'ಛತ್ರಪತಿ ಶಾಹು ಮಹಾರಾಜರಂತೆ ಜಾತ್ಯತೀತ ಮನೋಭಾವನೆ ಬೆಳೆಸಿಕೊಳ್ಳಬೇಕು. ಪ್ರಗತಿಪರರಾಗಬೇಕು. ಸಮಾಜದ ಅಭಿವೃದ್ಧಿಗಾಗಿ ಸಂಘಟನೆ ಬಲಗೊಳಿಸಬೇಕು. ಇದಕ್ಕಾಗಿ ಎಲ್ಲರೂ ಪರಸ್ಪರರಿಗೆ ಸಹಾಯ ಸಹಕಾರ ನೀಡಬೇಕು' ಎಂದು ತಿಳಿಸಿದರು.

ಶಿವಸೃಷ್ಟಿ ಸಮಿತಿ ಕಾರ್ಯದರ್ಶಿ ತಾತೇರಾವ್ ಪಾಟೀಲ ಮತ್ತು ಹಿರಿಯರಾದ ಭಾನುದಾಸ ಪಾಟೀಲ ಅವರು ಭಾವಚಿತ್ರದ ಪೂಜೆ ನೆರವೇರಿಸಿದರು. ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ನಿರ್ದೇಶಕರಾದ ಮಹೇಶ ಮುಳೆ ಮಾತನಾಡಿದರು.

ಈ ಸಂದರ್ಭದಲ್ಲಿ ಉಪನ್ಯಾಸಕರಾದ ಶ್ರೀಕಾಂತ ಚವ್ಹಾಣ, ಪ್ರೌಢಶಾಲಾ ಶಿಕ್ಷಕರ ಸಂಘದ ಅಧ್ಯಕ್ಷರಾದ ವಿಜಯಕುಮಾರ ಮಾನೆ, ಶ್ರಮಜೀವಿ ಸೇವಾ ಪ್ರತಿಷ್ಠಾನದ ಅಧ್ಯಕ್ಷರಾದ ಮಾಣಿಕ ಭುರೆ, ಸಂಜೀವಕುಮಾರ ನಡುಕರ್, ನವೀನ ಶ್ರೀವಾಸ್ತವ, ಅಶೋಕ ಪಾಟೀಲ, ಗಿರಿಧರ ಧಾನೂರೆ, ಬಾಲಾಜಿ ಹಿಪ್ಪರ್ಗೆ, ಮದನ ಪಾಟೀಲ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಮೊಹರಂ ಹಬ್ಬದ ನಿಮಿತ್ತ ಶಾಂತಿ ಸಭೆ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಜೂ.26:ಪಟ್ಟಣದ ಪೊಲೀಸ್ ಠಾಣೆ ಆವರಣದಲ್ಲಿ ಮೊಹರಂ ಹಬ್ಬದ ನಿಮಿತ್ತ ಸರ್ವ ಧರ್ಮಗಳ ಶಾಂತಿ ಸಭೆಯನ್ನು ಸಿಪಿಐ ಶಿವಾನಂದ ಘಾಣಗೇರೆ ಅವರ ಅಧ್ಯಕ್ಷತೆಯಲ್ಲಿ ನಡೆಯಿತು.

ಈ ಸಂದರ್ಭದಲ್ಲಿ ಸಿಪಿಐ ಶಿವಾನಂದ ಮಾತನಾಡಿ, ಹಿಂದು ಮುಸ್ಲಿಂರು ಒಟ್ಟಾಗಿ ಆಚರಿಸುವ ಪವಿತ್ರ ಹಬ್ಬ ಮೊಹರಂ ಆಗಿದ್ದು, ಶಾಂತಿ ಮತ್ತು ಸೋದರತೆಯಿಂದ ಹಬ್ಬವನ್ನು ಆಚರಿಸಬೇಕು. ಹಬ್ಬದಲ್ಲಿ ಧ್ವನಿವರ್ಧಕ ಬಳಕೆಗೆ ಅನುಮತಿ ಕಡ್ಡಾಯವಾಗಿದೆ. ಈ ಬಗ್ಗೆ ಸಾರ್ವಜನಿಕರು ಇಲಾಖೆ ಜತೆ ಸಹಕರಿಸಿ

ಕಮಲನಗರ ಪಟ್ಟಣದ ಪೊಲೀಸ್ ಠಾಣೆ ಆವರಣದಲ್ಲಿ ಮೊಹರಂ ಹಬ್ಬದ ನಿಮಿತ್ತ ಸರ್ವ ಧರ್ಮಗಳ ಶಾಂತಿ ಸಭೆಯನ್ನು ಸಿಪಿಐ.ಶಿವಾನಂದ ಘಾಣಗೇರೆ ಅವರ ಅಧ್ಯಕ್ಷತೆಯಲ್ಲಿ ನಡೆಯಿತು

ಯಾವುದೇ ಅಹಿತಕರ ಘಟನೆ ನಡೆಯದಂತೆ ಮತ್ತು ಎಲ್ಲರು ಒಟ್ಟಾಗಿ ಸೇರಿ ಶಾಂತಿ ಮತ್ತು ಸುವ್ಯವಸ್ಥೆ ಕಾಡಬೇಕು ಎಂದರು.

ಪಿಎಸ್ಐ ಚಂದ್ರಶೇಖರ ನಿರ್ಣೆ ಮಾತನಾಡಿ, ಯಾವುದೆ ಅಹಿತಕರ ಘಟನೆ ನಡೆಯದಂತೆ ಮತ್ತು ಸೌಹಾರ್ದಯುತ ಹಬ್ಬ ಆಚರಿಸಿ ಒಳ್ಳೆಯ ಹೆಸರು ತರಲು ಸಾರ್ವಜನಿಕರು ಸಹಕರಿಸಬೇಕು. ಪ್ರೀತಿ ಮತ್ತು ವಿಶ್ವಾಸದ ಮಧ್ಯೆ ಎಲ್ಲರು ಸಹೋದರರಂತೆ ಬದುಕಬೇಕು ಎಂದರು. ಪ್ರವೀಣ ಕದಮ, ಗೋವಿಂದರಾವ ತಾಂದಳೆ, ಆಜರ್ ಬಾಗವಾನ್, ಇಲಾಹಿ, ಅಯೂಬ್ ಖುರೇಷಿ ಸೇರಿ ಇತರರಿದ್ದರು.

## ವಿದ್ಯಾರ್ಥಿಗಳು ವೈಯಕ್ತಿಕ ಆರೋಗ್ಯದೊಂದಿಗೆ ಓದಿನ ಕಡೆ ಗಮನಹರಿಸಿ: ಡಿಹೆಚ್‌ಓ ಡಾ.ಯಲ್ಲಾ ರಮೇಶ್‌ಬಾಬು



ಬಳ್ಳಾರಿ,ಜೂ.26:ವಿದ್ಯಾರ್ಥಿಗಳು ವೈಯಕ್ತಿಕ ಆರೋಗ್ಯದೊಂದಿಗೆ ಓದಿನ ಕಡೆ ಗಮನಹರಿಸುವ ಮೂಲಕ ಉನ್ನತ ಗುರಿ ಸಾಧಿಸಲು ಪಣತೊಡಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್‌ಬಾಬು ಅವರು ಹೇಳಿದರು.

ಗುರುವಾರ, ಬಳ್ಳಾರಿ ತಾಲ್ಲೂಕಿನ ಕೆ.ವೀರಾಪುರ ಗ್ರಾಮದ ಸರ್ಕಾರಿ ಪ್ರೌಢಶಾಲೆಗೆ ಭೇಟಿ ನೀಡಿ ಹುಟ್ಟಿನಿಂದ 05 ವರ್ಷದೊಳಗಿನ ಮಕ್ಕಳಿಗೆ ಕಾಡುವ ಅತಿಸಾರ ಭೇದಿ ನಿಯಂತ್ರಣ ಕಾರ್ಯಕ್ರಮದಡಿ ಜಿಂಕ್ ಮತ್ತು ಓಆರ್‌ಎಸ್ ದ್ರಾವಣ ಕುರಿತು ಜಾಗೃತಿ ಹತ್ತನೇಯ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದರು.

ಮನುಷ್ಯನ ಜೀವನದಲ್ಲಿ ಬಾಲ್ಯಾವ್ಯಸ್ಥೆಯಿಂದ ಹದಿಹರೆಯದಕ್ಕೆ ಕಾಲಿಡುವ ಅವಧಿಯು ಅತ್ಯಂತ ಮಹತ್ವಪೂರ್ಣವಾಗಿದೆ. ಹಾರ್ಮೋನುಗಳ ಬದಲಾವಣೆಯಿಂದ ದೈಹಿಕವಾಗಿ ಬಾಲಕ–ಬಾಲಕಿಯರಲ್ಲಿ ಬದಲಾವಣೆಗಳು ಉಂಟಾಗುತ್ತವೆ. ವಿದ್ಯಾರ್ಥಿಗಳು ಪಾಲಕರ ಹಾಗೂ ಶಾಲಾ ಗುರುಗಳ ಮಾರ್ಗದರ್ಶನ ಪಡೆದು ಭವಿಷ್ಯದಲ್ಲಿ ಉನ್ನತ ಹುದ್ದೆಗಳನ್ನು ಪಡೆಯುವ ಗುರಿಯೊಂದಿಗೆ ಸಾಗುವ ಮಹಾದಾಸೆ ಹೊಂದಬೇಕು ಎಂದು ತಿಳಿಸಿದರು.

ಇಂದಿನ ಸ್ಪರ್ಧಾತ್ಮಕ ದಿನಗಳಲ್ಲಿ ಶ್ರದ್ಧೆಯಿಂದ ಓದುವುದಕ್ಕೆ ಹೆಚ್ಚು ಗಮನ ಹರಿಸಬೇಕು. ಇತ್ತೀಚಿನ ದಿನಗಳಲ್ಲಿ ಮೊಬೈಲ್ ಮೂಲಕ ಸಾಮಾಜಿಕ ಜಾಲತಾಣಗಳಾದ ಫೇಸ್ಬುಕ್, ಇಸ್ಟಾಗ್ರಾಮ್ ಮುಂತಾದವುಗಳಿಂದ ಹದಿಹರೆಯುದವರು ಪರಿಚಯವಿಲ್ಲದವರೊಂದಿಗೆ ಸಲುಗೆ ಬೆಳೆದು ಕುಟುಂಬದವರಿಗೆ ಗೊತ್ತಿಲ್ಲದೆ ಮದುವೆಯಾಗುವ, ಮನೆಯಿಂದ ಕಣ್ಮರೆಯಾಗುವ ಘಟನೆಗಳ ಕುರಿತು ಪತ್ರಿಕೆಗಳಲ್ಲಿ ವರದಿಯಾಗುತ್ತಿವೆ. ಇದು ಬಾಲ್ಯವಿವಾಹಕ್ಕೂ ದಾರಿ ಮಾಡುತ್ತದೆ ಅಲ್ಲದೆ ಹಲವಾರು ಬಾರಿ ದುಷ್ಟರಿಂದ ಲೈಂಗಿಕ ದೌರ್ಜನ್ಯಕ್ಕೂ ಒಳಗಾಗುವ ಸಾಧ್ಯತೆ ಇರುತ್ತದೆ. ಹಾಗಾಗಿ ವಿದ್ಯಾರ್ಥಿಗಳು ಇವುಗಳಿಂದ ದೂರ ಇರಬೇಕು.

ಆರೋಗ್ಯ ಇಲಾಖೆಯ ಎಲ್ಲ ಆಸ್ಪತ್ರೆಗಳಲ್ಲಿರುವ 'ಸ್ನೇಹ ಕ್ಲಿನಿಕ್' ನಲ್ಲಿ ಹದಿಹರೆಯದವರ ಆಪ್ತಸಮಾಲೋಚಕರ ಬಳಿ ಸಲಹೆ ಪಡೆದು ಒತ್ತಡಗಳಿಂದ ಮುಕ್ತರಾಗುವ ಹಾಗೂ ಹದಿಹರೆಯದಲ್ಲಿ ಆಕರ್ಷಕವಾಗುವ ತಂಬಾಕು ಉತ್ಪನ್ನಗಳು, ಬೀಡಿ ಸೀಗ–ರೇಟು ಮುಂತಾದವುಗಳಿಂದ ದೂರವಿರಬೇಕು ಎಂದು ಸಲಹೆ ನೀಡಿದರು.

ಮಕ್ಕಳಲ್ಲಿ ಜಂತುಹುಳು ಕಂಡುಬಂದ ಸಂದರ್ಭದಲ್ಲಿ ಮಕ್ಕಳು ಸೇವಿಸುವ ಆಹಾರವನ್ನು ಜಂತುಹುಳುಗಳು ಕಸಿದುಕೊಳ್ಳುವ ಮೂಲಕ ದೇಹದಲ್ಲಿ ರಕ್ತದ ಪ್ರಮಾಣ ಕಡಿಮೆ ಮಾಡುವ ಜೊತೆಗೆ ರೋಗನಿರೋಧಕ ಶಕ್ತಿ ಕುಂದಿಸಿ ಸಣ್ಣಪುಟ್ಟ ಕಾಯಿಲೆಗಳು ದೀರ್ಘಾವಧಿಯವರೆಗೆ ಕಾಡುವಂತೆ ಮಾಡುತ್ತವೆ ಎಂದರು.

ಮುಖ್ಯವಾಗಿ ಹೆಣ್ಣುಮಗುವಿನಲ್ಲಿ ರಕ್ತಹೀನತೆ ಸತತವಾಗಿ ಮುಂದುವರೆದಲ್ಲಿ ಹದಿಹರೆಯದಲ್ಲಿಯ ಸಮಸ್ಯೆಗಳು ಮದುವೆಯ ನಂತರ ವೈವಾಹಿಕ ಜೀವನದಲ್ಲಿ ಗಂಭೀರ ಸ್ವರೂಪ ಪಡೆಯುತ್ತವೆ. ಈ ದಿಶೆಯಲ್ಲಿ ಮಕ್ಕಳು ವರ್ಷದಲ್ಲಿ ಎರಡು ಬಾರಿ ತಪ್ಪದೇ ಜಂತುಹುಳು ನಿವಾರಕ ಮಾತ್ರೆ ಸೇವಿಸಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಶಿಡಿಗಿನಮೊಳ ಪ್ರಾಥಮಿಕ ಆರೋಗ್ಯ ಕೇಂದ್ರದ ಆಡಳಿತ ವೈದ್ಯಾಧಿಕಾರಿ ಡಾ.ಸಂತೋಷ ಹೆಬ್ಬಾಳ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ಶಾಲೆಯ ಮುಖ್ಯಗುರುಗಳಾದ ನಾಗರಾಜ, ಹಿರಿಯ ಪ್ರಾಥಮಿಕ ಆರೋಗ್ಯ ಸುರಕ್ಷಣಾಧಿಕಾರಿ, ಶಕುಂತಲಮ್ಮ, ಸಮುದಾಯ ಆರೋಗ್ಯ ಅಧಿಕಾರಿ ಮಧುಲತಾ ಸೇರಿದಂತೆ ಶಾಲಾ ಶಿಕ್ಷಕರು, ಆಶಾ ಕಾರ್ಯಕರ್ತೆಯರು, ಮಕ್ಕಳು ಉಪಸ್ಥಿತರಿದ್ದರು.

# ಬಲವಂತದ ಭೂಸ್ವಾಧೀನ ವಿರೋಧಿಸಿದ ಹೋರಾಟಗಾರರ ಬಂಧನ ಖಂಡಿಸಿ ಪ್ರತಿಭಟನೆ

ಕಲಬುರಗಿ, ಜೂ.26– ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ತಾಲ್ಲೂಕು ಚನ್ನರಾಯಪಟ್ಟಣ ಹೋಬಳಿ ಹದಿಮೂರು ಗ್ರಾಮಗಳ ಸುಮಾರು 1,777 ಎಕರೆ ಪೂರ್ಣ ಭೂ ಸ್ವಾಧೀನ ದಿಂದ ಕೈ ಬಿಡಬೇಕು ಎಂದು ಒತ್ತಾಯಿಸಿ, ಚನ್ನರಾಯಪಟ್ಟಣ ಭೂ ಸ್ವಾಧೀನ ವಿರೋಧಿ ಹೋರಾಟ ಸಮಿತಿಯ ನೇತೃತ್ವದಲ್ಲಿ ದೇವನಹಳ್ಳಿಯಲ್ಲಿ ಪ್ರತಿಭಟನೆ ನಡೆಸುತ್ತಿದ್ದ ಪ್ರತಿಭಟನಾಕಾರರನ್ನು ಬಂಧಿಸಿರುವ ರಾಜ್ಯ ಕಾಂಗ್ರೇಸ್ ಸರ್ಕಾರದ ಪ್ರಜಾಪ್ರಭುತ್ವ ವಿರೋಧಿ ಎಂದು ಆರೋಪಿಸಿ ಸಂಯುಕ್ತ ಹೋರಾಟ ಕರ್ನಾಟಕ ಜಿಲ್ಲಾ ಸಮಿತಿಯ ಕಾರ್ಯಕರ್ತರು ಗುರುವಾರ ನಗರದ ಸರ್ದಾರ್ ವಲ್ಲಭಬಾಯಿ ಪಟೇಲ್ ವೃತ್ತದಲ್ಲಿ ಪ್ರತಿಭಟನಾ ಪ್ರದರ್ಶನ ಮಾಡಿದರು.

ಕರ್ನಾಟಕ ಪ್ರಾಂತ ರೈತ ಸಂಘದ ಜಿಲ್ಲಾಧ್ಯಕ್ಷ ಶರಣಬಸಪ್ಪ ಮಮಶೆಟ್ಟಿ, ಸಿಐಟಿಯು ಕಾರ್ಯದರ್ಶಿ ಎಂ.ಬಿ. ಸಜ್ಜನ್, ಎಐಕೆಎಸ್ ಕಾರ್ಯದರ್ಶಿ ಭೀಮಾಶಂಕರ್ ಮಾಡಿಯಾಳ್, ದಲಿತ ಸಂಘರ್ಷ ಸಮಿತಿಯ ಜಿಲ್ಲಾ ಸಂಚಾಲಕ ಅರ್ಜುನ್ ಗೊಬ್ಬೂರ್, ಮಹೇಶ್ ಎಸ್.ಬಿ., ಮಲ್ಲಮ್ಮಾ ಮಗಿ ಮುಂತಾದದವರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

ಪ್ರತಿಭಟನೆಕಾರರು ನಂತರ ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಪತ್ರ ಸಲ್ಲಿಸಿ, ಚನ್ನರಾಯಪಟ್ಟಣ ಹೋಬಳಿಯ ಭೂ ಸ್ವಾಧೀನವು ಕರಾಳ ಕೆಐಎಡಿಬಿ ಭೂ ಸ್ವಾಧೀನ ಪ್ರಕಾರ ನಡೆಸಲಾಗುತ್ತಿದೆ. ಈ ಅನ್ಯಾಯದ ಭೂ ಸ್ವಾಧೀನ ಕ್ರಮವು, ಭೂ ಸ್ವಾಧೀನ ಕಾಯ್ದೆ 2013ರ ಕಾಯ್ದೆಗೆ ವಿರುದ್ಧವಾಗಿದೆ. ಕರಾಳ ಕೆಐಎಡಿಬಿ ಭೂ ಸ್ವಾಧೀನ




ಕಾಯ್ದೆ ಪ್ರಕಾರ ಹಿಂದಿನ ಬಿಜೆಪಿ ಸರ್ಕಾರ ರೈತರ ವಿರೋಧ ಧಿಕ್ಕರಿಸಿ ಪ್ರಾಥಮಿಕ ಅಧಿಸೂಚನೆ ಹೊರಡಿಸಿತ್ತು. ಇದನ್ನು ವಿರೋಧಿಸಿ ರೈತರು ಕಳೆದ ನಾಲ್ಕು ವರ್ಷಗಳಿಂದ ನಿರಂತರವಾಗಿ ಅನಿರ್ದಿಷ್ಟವಾಧಿ ಹೋರಾಟ ನಡೆಸುತ್ತಾ ಬಂದಿದ್ದಾರೆ ಎಂದು ಹೋರಾಟಕ್ಕೆ ಬೆಂಬಲಿಸಿದರು. ಈ ಹಿಂದೆ ವಿರೋಧ ಪಕ್ಷದ ನಾಯಕರಾಗಿ ಧರಣಿ ಸ್ಥಳಕ್ಕೆ ಭೇಟಿ ನೀಡಿದ್ದ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು ತಾನು ಅಧಿಕಾರಕ್ಕೆ ಬಂದರೆ ಬಿಜೆಪಿ ಸರ್ಕಾರದ ಭೂ ಸ್ವಾಧೀನ ಪ್ರಕಟಣೆ ರದ್ದುಪಡಿಸುತ್ತೇವೆ ಎಂದು ಭರವಸೆ ನೀಡಿದ್ದರು. ತಮ್ಮ ಮಾತಿನಂತೆ ಭೂಸ್ವಾಧೀನ ಪ್ರಕ್ರಿಯೆ ರದ್ದುಪಡಿಸಿ ಸಿದ್ಧರಾಮಯ್ಯ ಸರ್ಕಾರ ಬದ್ಧತೆ ಮೆರೆಯಬೇಕಿತ್ತು. ಆದರೆ ಇದೀಗ ಭೂ ಸ್ವಾಧೀನಕ್ಕೆ ತಾವು ಕೊಟ್ಟ ಮಾತಿನಂತೆ ನಡೆದುಕೊಳ್ಳದೇ ವಚನ ಭ್ರಷ್ಟರಾಗುವ ಜೊತೆಯಲ್ಲಿ ಹಠಮಾರಿ ಧೋರಣೆ ಅನುಸರಿಸಿ, ಜನರನ್ನು ಒಡೆದಾಳುವ ಕುಟೀಲ ತಂತ್ರವನ್ನು ಅನುಸರಿಸುತ್ತಿರುವುದು ನಾಚಿಕೆಗೇಡು. ಇಂತಹ ಕುಟಿಲ ತಂತ್ರಗಳಿಂದ ಹಾಗೂ ಪ್ರತಿಭಟನಾಕಾರರನ್ನು ದೌರ್ಜನ್ಯದಿಂದ ಬಂಧಿಸುವುದರಿಂದ ರೈತ ಹೋರಾಟವನ್ನು ಬಗ್ಗು ಬಡಿಯಲು ಸಾಧ್ಯವಿಲ್ಲ ಎಂಬುದನ್ನು ರಾಜ್ಯ ಕಾಂಗ್ರೇಸ್ ಅರಿಯಬೇಕು. ರೈತರಿಗೆ ವಿದ್ರೋಹ ಬಗೆದ ಸರಕಾರಗಳು ಆಡಳಿತ ಕಳೆದುಕೊಂಡಿರುವ ಇತಿಹಾಸವನ್ನು ರಾಜ್ಯ ಸರ್ಕಾರ ನೆನಪಿನಲ್ಲಿಟ್ಟುಕೊಳ್ಳಬೇಕಿದೆ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು. ಶೇಕಡಾ 90ಕ್ಕಿಂತ ಹೆಚ್ಚು ರೈತರು ವಿರೋಧಿಸುತ್ತಿರುವ ಈ ಅನ್ಯಾಯದ ಹಾಗೂ ಬಲವಂತದ ಭೂ ಸ್ವಾಧೀನ ಮಾಡಿಕೊಳ್ಳಲು ಯಾವುದೇ ಕಾರಣಕ್ಕೂ ರೈತರು ಅವಕಾಶ ನೀಡುವುದಿಲ್ಲ. ಮುಖ್ಯಮಂತ್ರಿ ಸಿದ್ಧರಾಮಯ್ಯನವರು ವಚನ ಭ್ರಷ್ಠರಾಗದೇ ತಾವು ಕೊಟ್ಟ ಭರವಸೆಯಂತೆ ಈ ಭೂಸ್ವಾದೀನ ಪ್ರಕ್ರಿಯೆಯನ್ನು ರದ್ದುಪಡಿಸಬೇಕು ಎಂದು ಅವರು ಒತ್ತಾಯಿಸಿದರು.

ಕೂಡಲೇ ರಾಜ್ಯ ಸರ್ಕಾರ ಬಲವಂತವಾಗಿ ರೈತ–ರಿಂದ ಭೂಮಿಯನ್ನು ವಶಪಡಿಸಿಕೊಳ್ಳುವುದನ್ನು ಕೈಬಿಡಬೇಕು ಹಾಗೂ ತಮ್ಮ ಭೂಮಿಯ ಉಳಿವಿಗಾಗಿ ಪ್ರಜಾಸತ್ತಾತ್ಮಕ ನೆಲೆಯಲ್ಲಿ ಪ್ರತಿಭಟಿಸುತ್ತಿರುವ ರೈತರು ಹಾಗೂ ಪ್ರತಿಭಟನಾಕಾರರನ್ನು ಬಂಧಿಸಿದ್ದು, ಕೂಡಲೇ ಬಂಧಿಸಿದ ಎಲ್ಲ ಪ್ರತಿಭಟನಾಕಾರರನ್ನು ಭೇಶರತ್ ಬಿಡುಗಡೆ ಮಾಡಬೇಕೆಂದು ಎಂದು ಒತ್ತಾಯಿಸಿದ ಅವರು, ಇಲ್ಲವಾದಲ್ಲಿ ರಾಜ್ಯವ್ಯಾಪಿ ಪ್ರಖರ ಹೋರಾಟ ರೂಪಿಸಬೇಕಾಗುತ್ತದೆ ಎಂದು ಎಚ್ಚರಿಸಿದರು.

# ಮಾದಕ ವಸ್ತುಗಳ ಬಳಕೆ, ಸಾಗಾಣೆ ತಡೆಗೆ ಸಹಕಾರ ಅಗತ್ಯ

ರಾಯಚೂರು ಜೂ 26 : ಸಮಾಜದಲ್ಲಿ ಮಾದಕ ವಸ್ತುಗಳ ಬಳಕೆ ಮತ್ತು ಅಕ್ರಮ ಸಾಗಾಟ ತಡೆಗಟ್ಟುವಲ್ಲಿ ಪ್ರತಿಯೊಬ್ಬರು ಸಹಕಾರ ನೀಡುವ ಮೂಲಕ ಆರೋಗ್ಯಯುತ ಜೀವನ ನಡೆಸಬೇಕು ಎಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷರಾದ ನಾಗಣ್ಣಗೌಡ ಅವರು ಹೇಳಿದರು. ಜೂನ್ 26ರ ಗುರುವಾರ ದಂದು ನಗರದ ಇನ್ ಫ್ಯಾಂಟ್ ಶಾಲೆಯಲ್ಲಿ ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಪೊಲೀಸ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ ಮತ್ತು ಜಿಲ್ಲಾ ಮಕ್ಕಳ ರಕ್ಷಣಾ ಘಟಕ ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ನಡೆದ ಅಂತಾರಾಷ್ಟ್ರೀಯ ಮಾದಕ ವಸ್ತು ವಿರೋಧಿ ದಿನಾಚರಣೆ–2025ರ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಭವಿಷ್ಯತ್ತಿ ಉತ್ತಮ ಪ್ರಜೆಗಳಾಗಲು ಹಾಗೂ ಉತ್ತಮ ಸಮಾಜ ನಿರ್ಮಿಸಲು ವಿದ್ಯಾಭ್ಯಾಸದ ಕಡೆಗೆ ಹೆಚ್ಚು ಗಮನವಹಿಸಬೇಕು. ಯಾವುದೇ ಕಾರಣಕ್ಕೂ ಮಾದಕ ವಸ್ತುಗಳ ವ್ಯಸನಿಗಳಾಗಬಾರದು. ಕುಟುಂಬದ ಮೇಲೆ ಗಂಭೀರ ಪರಿಣಾಮ ಬೀರುವುದರಿಂದ



ಮಾದಕ ವಸ್ತುಗಳಿಂದ ಅತ್ಯಂತ ಜಾಗೃತರಾಗಿರಬೇಕು. ಮಕ್ಕಳೇ ಈ ದೇಶದ ಆಸ್ತಿಯಾಗಿದ್ದು, ಇಂದು ಮಕ್ಕಳು ಹಾದಿತಪ್ಪುತ್ತಿರುವುದು ಕಳವಳಕಾರಿಯಾಗಿದೆ. ಪೋಷಕರು ಮಕ್ಕಳ ಮುಂದೆ ಮಾದಕ ವಸ್ತುಗಳ ಸೇವನೆ, ಮದ್ಯಪಾನ ಮಾಡಬಾರದು. ಈ ವ್ಯಸನವವು ಆರೋಗ್ಯ, ಕುಟುಂಬದ ನೆಮ್ಮದಿ ಹಾಗೂ ಸಮಾಜದ ಸ್ವಾಸ್ಥ್ಯವನ್ನೇ ಹಾಳು ಮಾಡುತ್ತದೆ. ಈ ದಿನದ ಪ್ರಮುಖ ಉದ್ದೇಶ ಜನರನ್ನು ಮಾದಕ ವಸ್ತುಗಳಿಂದ ದೂರವಿಡುವುದು ಮತ್ತು ಮಾದಕ ವಸ್ತು ಕಳ್ಳಸಾಗಣೆ ತಡೆಯುವುದು. ಈ ಕ್ರಮವು ಮಕ್ಕಳು ಮತ್ತು ಯುವ ಜನರ ಭವಿಷ್ಯವನ್ನು ಉಜ್ವಲವಾಗಿಸುಲ್ಲಿ ಪ್ರಮುಖ ಪಾತ್ರವಹಿಸುತ್ತದೆ ಎಂದರು. ಈ ವೇಳೆ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಅವರು ಮಾತನಾಡಿ, ಮಾದಕ ವಸ್ತುಗಳ ಸಾಗಣೆ ತಡೆಗೆ ಜಿಲ್ಲಾ ಪೊಲೀಸ್ ಇಲಾಖೆ ಹಾಗೂ ಅಬಕಾರಿ ಇಲಾಖೆಗಳು ನಿರಂತರ ಕ್ರಮ ವಹಿಸುತ್ತಿವೆ. ಪೋಷಕರು ತಮ್ಮ ಮಕ್ಕಳ ಮೇಲೆ ನಿಗಾ ವಹಿಸಿದಲ್ಲಿ ಮಕ್ಕಳು ದಾರಿ ತಪ್ಪುವುದಿಲ್ಲ ಎಂದರು. ಈ ವೇಳೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ಪುಟ್ಟಮಾದಯ್ಯ ಅವರು ಮಾತನಾಡಿ, ರಾಯಚೂರ ಜಿಲ್ಲೆಯಲ್ಲಿ ಮಾದಕ ವಸ್ತುಗಳ ಬಳಕೆಯ ಜಾಲ ಬೇಧಿಸಿ, ಮಾದಕ ವಸ್ತುಗಳ ಬಳಕೆಯ ನಿಯಂತ್ರಣಕ್ಕೆ ಕಠಿಣ ಕ್ರಮ ವಹಿಸಲಾಗುವುದು ಎಂದರು. ಈ ಬಗ್ಗೆ ಪ್ರಕರಣ ದಾಖಲಿಸಿ ಆರೋಪಿಗಳನ್ನು ಬಂಧಿಸಲಾಗಿದೆ. ಪ್ರತಿದಿನ ಈ ಬಗ್ಗೆ ನಿರಂತರವಾಗಿ ಕಾರ್ಯಾಚರಣೆ ನಡೆಸಲಾಗುತ್ತಿದೆ ಎಂದರು. ಪ್ರತಿಜ್ಞಾವಿಧಿ ಬೋಧನೆ: ಈ ವೇಳೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು, ಅಂತರಾಷ್ಟ್ರೀಯ ಮಾದಕ ವಸ್ತು ವಿರೋಧಿ ದಿನಾಚರಣೆ ಅಂಗವಾಗಿ, ಮಾದಕ ದ್ರವ್ಯ ವ್ಯಸನ ಮುಕ್ತ ರಾಷ್ಟ್ರ ನಿರ್ಮಾಣ ಮಾಡಲು ನಾವು ಗಾಂಜಾ, ಅಫೀಮುದಂತಹ ಮಾದಕ ದ್ರವ್ಯಗಳನ್ನು ಸೇವಿಸುವುದಿಲ್ಲ. ಇತರರು ಸೇವಿಸದಂತೆ ಶ್ರಮಿಸುತ್ತೇವೆ ಎಂಬ ಪ್ರತಿಜ್ಞಾವಿಧಿಯನ್ನು ಬೋಧಿಸಿದರು. ಇದೇ ಸಂದರ್ಭದಲ್ಲಿ ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅಧ್ಯಕ್ಷರಾದ ಪವನ ಕುಮಾರ್, ಅಬಕಾರಿ ಉಪ ಆಯುಕ್ತರಾದ ಸಿ.ಕೆ.ಮಹೇಶ, ಡಿವೈಎಸ್‌ಪಿ ಶಾಂತವೀರ,.ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕ ನವೀನ ಕುಮಾರ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಅಮರೇಶ, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಶ್ರೀದೇವಿ, ಮನೋವೈದ್ಯ ಡಾ.ಮನೋಹರ್ ವೈ.ಪತ್ತಾರ್, ಸೈಕಾಲಾಜಿಸ್ಟ್ ಡಾ.ಮಹೇಶ್ ಕುಮಾರ್, ಇನ್‌ಫೆಂಟ್ ಶಾಲೆಯ ಫಾದರ್ ಸ್ಯಾಮ್ಯುಯೆನ್ಸ್, ಪದವಿ ಪೂರ್ವ ಶಿಕ್ಷಣ ಇಲಾಖೆಯ ಹಿರಿಯ ಪ್ರಾಚಾರ್ಯ ಕುಂಟೇಪ್ಪ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ವಿವಿಧ ವಸತಿ ನಿಯಗಳ ನಿಲಯಪಾಲಕರು ಇದ್ದರು.

# ಮದ್ಯಪಾನ- ಮಾದಕ ವಸ್ತು ಸೇವನೆ ದೇಹಕ್ಕೆ ಹಾನಿಕಾರಕ : ಜಿಲ್ಲಾಧಿಕಾರಿ ಡಾ.ಸುಶೀಲ.ಬಿ

ಯಾದಗಿರಿ:ಜೂ:26: ಮಾದಕ ವಸ್ತುಗಳ ಹಾಗೂ ಮದ್ಯಪಾನ ಸೇವನೆಯಿಂದ ವೈಯಕ್ತಿಕವಾಗಿ ಆರೋಗ್ಯಕ್ಕೆ ಹಾನಿಯಾಗುವ ಜೊತೆಗೆ ದೇಶದ ಹಿತದೃಷ್ಟಿಯಿಂದಲೂ ಇದು ಹಾನಿಕಾರಕವಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಸುಶೀಲ.ಬಿ ಅವರು ಹೇಳಿದರು.

ನಗರದ ಲುಂಬಿನಿ ಉದ್ಯಾನವನದಲ್ಲಿ ಇಂದು ಜಿಲ್ಲಾ ಪೋಲಿಸ್ ಇಲಾಖೆ ವತಿಯಿಂದ ಹಮ್ಮಿಕೊಂಡಿದ್ದ ಮಾದಕವಸ್ತುಗಳ ದುರುಪಯೋಗ ಹಾಗೂ ಅಕ್ರಮ ಸಾಗಾಣಿಕೆ ವಿರುದ್ಧ ಅಂತಾರಾಷ್ಟ್ರೀಯ ದಿನಾಚರಣೆ ಹಾಗೂ ವ್ಯಸನ ಮುಕ್ತ ಸಮಾಜ –ನಶೆ ಮುಕ್ತ ಯಾದಗಿರಿ ಕಾರ್ಯಕ್ರಮದಲ್ಲಿ ಅವರು ಮುಖ್ಯ ಅತಿಥಿಗಳಾಗಿ ಮಾತನಾಡಿದದರು.

ಉತ್ತಮ ಆರೋಗ್ಯ–ಕ್ಕೆ ಉತ್ತಮ ಹವ್ಯಾಸಗಳು ಬಹುಮುಖ್ಯ.ಮಾದಕವಸ್ತುಗಳ ಸೇವನೆಯಿಂದ ವ್ಯಕ್ತಿಯು ತನ್ನ ಸರ್ವಸ್ವವನ್ನೂ ಕಳೆದುಕೊಳ್ಳುವ ಜೊತೆಗೆ ಇದು ದೇಶಕ್ಕೂ ಹಾನಿಕಾರಕವಾಗಿದೆ ಎಂದು ಹೇಳಿದರು.

ಜಿಲ್ಲಾಡಳಿತದವತಿಯಿಂದ ಪ್ರತಿ ಮಾಹೆ ಸಮನ್ವಯ ಸಮಿತಿ ಸಭೆಗಳ ಮೂಲಕ ತಂಬಾಕು, ಮದ್ಯಪಾನ ನಿಯಂತ್ರಣ ಕ್ರಮಕ್ಕೆ ಅಧಿಕಾರಿಗಳಿಗೆ ಸೂಚಿಸಲಾಗಿದೆ. ಇತ್ತೀಚೆಗೆ ಜಿಲ್ಲಾ ಪೋಲಿಸ್ ಇಲಾಖೆಯಿಂದಲೂ ಕೂಡ ಜಿಲ್ಲೆಯಲ್ಲಿ ಗಾಂಜಾ ಅಕ್ರಮ ಸಾಗಾಣಿಕೆ ವಿರುದ್ಧ ಐದು ಪ್ರಕರಣಗಳನ್ನು ದಾಖಲಿಸಲಾಗಿದೆ ಎಂದು ಹೇಳಿದರು.

ಸಾರ್ವಜನಿಕರು ಕೂಡ ಮದ್ಯಪಾನ ಹಾಗೂ ಮಾದಕ ವಸ್ತುಗಳ ಸೇವನೆಯಿಂದ ದೂರು ಉಳಿಯುವ ಜೊತೆಗೆ ಇದನ್ನು




ತಕ್ಷಣ ತ್ಯಜಿಸಬೇಕು. ನಗರದ ವೈದ್ಯಕೀಯ ವಿಜ್ಞಾನ ಸಂಸ್ಥೆಯಲ್ಲಿಯೂ ಕೂಡ ವ್ಯಸನಮುಕ್ತಕ್ಕಾಗಿ ಓಪಿಡಿ ಕೌಂಟರ್ ಸಹ ತೆರೆಯಲಾಗಿದೆ ಎಂದು ಹೇಳಿದರು.

ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಹಣಾಧಿಕಾರಿ ಲವೀಶ್ ಒರಡಿಯಾ ಅವರು ಮಾತನಾಡಿ ಅತೀಯಾದ ಸಿಗರೇಟ್, ಗುಟ್ಕಾ, ನಶೆ ಪದಾರ್ಥಗಳ ಸೇವನೆ. ಮದ್ಯಪಾನ ಮಾಡುವ ವ್ಯಕ್ತಿಗಳು ಸಮಾಜ ಹಾಗೂ ಕುಟುಂಬದಿಂದ ದೂರ ಉಳಿಯುತ್ತಾರೆ. ಮಾದಕ ವಸ್ತುಗಳ ಸೇವನೆ ಹಾಗೂ ಮದ್ಯಪಾನದಿಂದ ವ್ಯಕ್ತಿಯು ದುಶ್ಚಟಗಳ ದಾಸರಾಗುತ್ತಾರೆ. ಅಂತಹ ವ್ಯಕ್ತಿಗಳಿಗೆ ಬಗ್ಗೆ ಕುಟುಂಬದಿಂದ ಸಹಾನುಭೂತಿಯಿಂದ ನೋಡದೆ ನಿರಂತರ ನಿಗಾ ಇಡುವ ಮೂಲಕ ದುಶ್ಚಟಗಳಿಗೆ ಬಲಿಯಾಗದಂತೆ ನೋಡಿಕೊಳ್ಳಬೇಕೆಂದು ತಿಳಿಸಿದರು.

ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಶ್ರೀ ಪೃಥ್ವಿಕ್ ಶಂಕರ್ ಅವರು ಮಾತನಾಡಿ ಇತ್ತೀಚೆಗೆ ಸಭ್ಯ ಕುಟುಂಬಸ್ಥರವರೂ ಕೂಡ ಒತ್ತಡ ನಿವಾರಣೆ, ಕ್ಷಣಿಕ ಸುಖಕ್ಕಾಗಿ ಡ್ರಗ್ಸ್, ಕೊಕೆನ್, ಇತರೆ ಮಾದಕ ವಸ್ತುಗಳ ಹಾಗೂ ಮದ್ಯಪಾನದ ದಾಸರಾಗುತ್ತಿರುವುದು ಡಿಪ್ರೆಶಿಯನ್ ಹಾಗೂ ಆತ್ಮಹತ್ಯೆ ಮನಸ್ಥಿತಿಗೆ ಕಾರಣವಾಗುತ್ತಿದೆ. ಅದರಂತೆ ಅಪಘಾತಗಳು, ರೇಪ್, ಕೊಲೆ, ಕಳ್ಳತನ, ದರೋಡೆಗಳಿಗೂ ಕಾರಣವಾಗುತ್ತಿದೆ. ಪೋಲಿಸ್ ಇಲಾಖೆ ಮಾದಕವಸ್ತುಗಳ ಅಕ್ರಮ ಸಾಗಾಣಿಕೆ ಮೇಲೆ ತೀವ್ರ ನಿಗಾ ಇಡುತ್ತಿದೆ. ವಿಶೇಷವಾಗಿ ಡ್ರಗ್ಸ್ ಪೆಡ್ಲರ್ಸ್, ಅಕ್ರಮ ಸಾಗಾಣಿಕೆದಾರರ ಮೇಲೆ ನಿಗಾ ಇಡಲಾಗುತ್ತಿದೆ. ಸಾರ್ವಜನಿಕರು ಕೂಡ ರಾಜ್ಯ ಗೃಹ ಇಲಾಖೆಯಿಂದ ಅಭಿವೃದ್ಧಿಪಡಿಸಿದ ಆಪ್ ಮೂಲಕ ಎಂಡ್ರಾಯ್ಡ ಮೋಬೈಲ್ ಬಳಸಿ ದೂರು ನೀಡಬಹುದಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಮಹೇಶ್ ಬಿರಾದಾರ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಿರಿಯ ಸಹಾಯಕ ನಿರ್ದೇಶಕ ಸುಲೈಮಾನ್ ನದಾಫ, ಡಾ.ಜಾಕಾ ಮಾತನಾಡಿದರು. ಯುವಜನ ಸೇವಾ ಹಾಗೂ ಕ್ರೀಡಾಧಿಕಾರಿ ಶ್ರೀ ರಾಜು ಬಾವಿಹಳ್ಳಿ ಪ್ರತಿಜ್ಞಾ ವಿಧಿ ಬೋಧಿಸಿದರು.

ಕುಮಾರಿ ಶಿಲ್ಪಾ ಯೋಗ ಪ್ರದರ್ಶಿಸಿದರು. ಗಿರಿನಗರ ಸಾಂಸ್ಕೃತಿಕ ಕಲಾ ತಂಡದಿಂದ ಕಿರು ನಾಟಕದ ಮೂಲಕ ಜಾಗೃತಿ ಮೂಡಿಸಲಾಯಿತು. ಯುವಜನ ಸೇವಾ ಮತ್ತು ಕ್ರೀಡಾ ಇಲಾಖೆಯ ತಂಡದಿಂದ ರೂಪಕ ಪ್ರದರ್ಶನ ಮೂಲಕ ಅರಿವು ಮೂಡಿಸಲಾಯಿತು. ಡಿವೈಎಸ್ಪಿ ಭರತ್ ಕುಮಾರ್ ಕಾರ್ಯಕ್ರಮ ನಿರೂಪಿಸಿದರು. ಡಿವೈಎಸ್ಪಿ ಜಾವೇದ್ ವಂದಿಸಿದರು.

ಇದಕ್ಕೂ ಮುನ್ನ ಇಂದು ಬೆಳಿಗ್ಗೆ ಸುಭಾಷ್ ಸರ್ಕಲ್ ದಿಂದ ಲುಂಬಿನಿ ಉದ್ಯಾನದವರೆಗಿನ ಜಾಗೃತಿ ಜಾಥಾಕ್ಕೆ ಜಿಲ್ಲಾಧಿಕಾರಿ ಡಾ.ಸುಶೀಲ.ಬಿ ಅವರು ಚಾಲನೆ ನೀಡಿದರು. ಜಿ.ಪಂ ಸಿಇಓ ಲವೀಶ್ ಒರಡಿಯಾ, ಎಸ್ಪಿ ಪೃಥ್ವಿಕ್ ಶಂಕರ್, ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಉಪನಿರ್ದೇಶಕಿ ಪೂರ್ಣಿಮಾ ಸೇರಿದಂತೆ ಇತರ ಅಧಿಕಾರಿಗಳು ಉಪಸ್ಥಿತರಿದ್ದರು.

# ನಮ್ಮಲ್ಲಿ ಯಾರ ಬದಲಾವಣೆಯೂ ಇಲ್ಲ ಸಿಎಂ ರಾಜೀನಾಮೆ ನೀಡಲಿ : ಛಲುವಾದಿ ಆಗ್ರಹ

ಯಾದಗಿರಿ:ಜೂ.26: ಬಿಜೆಪಿ ರಾಜ್ಯಾಧ್ಯಕ್ಷರಾಗಿ ವಿಜಯೇಂದ್ರ ಅವರೇ ಮುಂದುವರೆಯುತ್ತಾರೆ ಎಂಬ ವಿಶ್ವಾಸವಿದೆ ಎಂದಿರುವ ವಿಧಾನ ಪರಿಷತ್ತಿನ ಪ್ರತಿಪಕ್ಷದ ನಾಯಕ ಛಲುವಾದಿ ನಾರಾಯಣಸ್ವಾಮಿ, ಅವರೊಬ್ಬ ಕ್ರೀಯಾಶೀಲ ಅಧ್ಯಕ್ಷರಾಗಿದ್ದಾ–ರೆಂದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರತಿಪಕ್ಷದ ನಾಯಕನ ಬದಲಾವಣೆ ಸೇರಿದಂತೆಯೇ ಯಾರ ಬದಲಾವಣೆ ಇಲ್ಲ. ಈ ಬಗ್ಗೆ ಏನೇ ಇದ್ದರೂ ಪಕ್ಷದ ಹೈಕಮಾಂಡ ನೋಡಿಕೊಳ್ಳುತ್ತದೆ. ಪಕ್ಷದ ಸಂಘಟನೆ ವಿಚಾರವಾಗಿ ದೆಹಲಿಗೆ ರಾಜ್ಯಾಧ್ಯಕ್ಷರು ಹೋಗಿ ಬರುತ್ತಾರೆ. ಅದಕ್ಕೆ ಬೇರೆ ಕಲ್ಪನೆ ಕಟ್ಟುವುದು ಬೇಡ ಎಂದರು. ಇನ್ನೂ 2–3 ತಿಂಗಳಲ್ಲಿ ಭಾರಿ ಬದಲಾವಣೆ ಆಗಲಿದೆ ಎಂಬ ಸಚಿವ ರಾಜಣ್ಣ ಹೇಳಿಕೆ ಬಗ್ಗೆ ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, ರಾಜ್ಯ ಸರ್ಕಾರ ಭ್ರಷ್ಟಾಚಾರದಲ್ಲಿ ಮುಳುಗಿದೆ, ಸಿಎಂ ಸಿದ್ದರಾಮಯ್ಯ ರಾಜೀನಾಮೆ ನೀಡಬೇಕೆಂದರು.

ಆಸ್ಪತ್ರೆಗೆ ಚಿಕಿತ್ಸೆ ಬೇಕಿದೆ – ಛಲುವಾದಿ ಟೀಕೆ



ಇಲ್ಲಿನ ತಾಯಿ, ಮಕ್ಕಳ ಜಿಲ್ಲಾ ಸರ್ಕಾರಿಗೆ ಗುರುವಾರ ಮಧ್ಯಾಹ್ನ ಹಠಾತ್ ನೇ ಭೇಟಿ ಮಾಡಿ ಅಲ್ಲಿನ ಹದಗೆಟ್ಟ ವ್ಯವಸ್ಥೆ ಕಂಡು ಆಕ್ರೋಶ ವ್ಯಕ್ತಪಡಿಸಿ, ಮೊದಲು ಸರ್ಕಾರ ಈ ಆಸ್ಪತ್ರೆಗೆ ಚಿಕಿತ್ಸೆ ಕೊಡಿಸಲಿ ಎಂದು ವ್ಯಂಗ್ಯವಾಡಿದರು.

ವಿವಿಧ ಆಸ್ಪತ್ರೆ ವಿವಿಧ ವಿಭಾಗಗಳಿಗೆ ತೆರಳಿ ಅಲ್ಲಿನ ವ್ಯವಸ್ಥೆ ಮತ್ತು ಸಮಸ್ಯೆ ಕುರಿತು ಸಿಬ್ಬಂದಿಯಿಂದ ಮಾಹಿತಿ ಪಡೆದರು.

ನಂತರ ರೋಗಿಗಳಿಗೆ ಭೇಟಿ ಚಿಕಿತ್ಸೆ ಮತ್ತು ಸೌಲಭ್ಯಗಳ ಮಾಹಿತಿ ಪಡೆದ ಅವರು, ಸರ್ಕಾರದ ದಿವ್ಯನಿರ್ಲಕ್ಷ್ಯಕ್ಕೆ ಒಳಗಾಗಿರುವ ಆಸ್ಪತ್ರೆ ನಿಭಾಯಿಸುವಲ್ಲಿ ಜಿಲ್ಲಾಡಳಿತ ವಿಫಲವಾಗಿದೆ ಎಂದು ದೂರಿದರು.

ಸಾವಿರಾರು ಕೋಟಿ ರೂ. ಖರ್ಚು ಮಾಡುವ ಸರ್ಕಾರಕ್ಕೆ ಆಸ್ಪತ್ರೆಗಳು ಸೂಸಜ್ಜಿತವಾಗಿ ನಡೆಸಲು ಆಗುತ್ತಿಲ್ಲ ಎಂದು ದೂರಿದರು.

# ನಗರದಲ್ಲಿ ಬಿಡುಗಡೆ ಕಂಡ 'ಕಾಲವೇ ಮೋಸಗಾರ' ಚಲನಚಿತ್ರ

## ಕನ್ನಡ ಚಲನಚಿತ್ರ ವೀಕ್ಷಿಸಿ ಕನ್ನಡ ಭಾಷೆ ಉಳಿಸಿ : ನಟ ಭರತ ಸಾಗರ




ಬೀದರ. ಜೂ. 26 : ಕನ್ನಡ ಚಲನಚಿತ್ರಗಳನ್ನು ಚಿತ್ರಮಂದಿರಗಳಿಗೆ ಹೋಗಿ ವೀಕ್ಷಣೆ ಮಾಡುವುದರ ಮೂಲಕ ಕನ್ನಡ ಭಾಷೆ ಮತ್ತುಸಂಸ್ಕೃತಿಯನ್ನುಉಳಿಸಿ ಬೆಳೆಸಬೇಕೆಂದು 'ಕಾಲವೇ ಮೋಸಗಾರ'ಚಿತ್ರದನಾಯಕನಟ ಭರತ ಸಾಗರ್ ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಗುರುವಾರ ಕ–ರೆದ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು ಈ ಚಿತ್ರದಲ್ಲಿ ಪ್ರೀತಿ–ಪ್ರೇಮ, ಹಾಸ್ಯ, ಸಾಮಾಜಿಕ ಕಳಕಳಿ, ಕೌಟುಂಬಿಕ ವಿಚಾರಗಳು ಮತ್ತು ವಿವಿಧ ವಿಷಯಗಳುಅಡಕಗೊಂಡಿವೆ.ಕುರಿ ಪ್ರತಾಪ್, ಬ್ಯಾಂಕ್ ಜನಾರ್ಧನ್ ಸೇರಿದಂತೆ ಹಲವು ದಿಗ್ಗಜರು ಇದರಲ್ಲಿ ನಟಿಸಿದ್ದಾರೆ. ನಟಿ ಯಶಸ್ವಿನಿ ನಾಯಕನಟಿಯಾಗಿ ಕಾಣಿಸಿಕೊಂಡಿದ್ದು, ಉತ್ತಮ ಹಾಡುಗಳು ಇದರಲ್ಲಿವೆ. ಈ ಚಿತ್ರವು 2 ಗಂಟೆ 15 ನಿಮಿಷದ್ದಾಗಿದ್ದು, ಇದರ ಒಟ್ಟು ಖರ್ಚು 1 ಕೋಟಿ 80 ಲಕ್ಷ ಖರ್ಚಾಗಿದೆ. ಸಂಜೀತ್ ಹೆಗಡೆ ಹಿನ್ನೆಲೆ ಗಾಯಕರಾಗಿದ್ದಾರೆ. ಚಿತ್ರವೀಕ್ಷಿಸಿ ಉದಯೋನ್ಮುಖ ಕಲಾವಿದರನ್ನುಪ್ರೋತ್ಸಾಹಿಸುವಂತೆ ಕೋರಿದ್ದಾರೆ.

ಮುಖಂಡರಾದ ನಾಗಯ್ಯ ಸ್ವಾಮಿ ಮಾತನಾಡಿ ಹಳೆಯ ನಟರ ಚಲನಚಿತ್ರ ಎಲ್ಲರೂ ನೋಡುತ್ತಾರೆ. ಆದರೆ ಹೊಸ ಕಲಾವಿದರ ಚಿತ್ರ ನೋಡಿ ಪ್ರೋತ್ಸಾಹಿಸುವ ಅಗತ್ಯವಿದೆ. ಭರತ ಸಾಗರ್ ಅವರು ನಾಯಕನಟರಾಗಿ 'ಕಾಲವೇ ಮೋಸಗಾರ' ಚಿತ್ರದಲ್ಲಿ ನಟಿಸಿದ್ದಾರೆ. ಇದು ಇವರ ಮೂರನೇ ಚಿತ್ರವಾಗಿದ್ದು, ಬೀದರನ ಸಪ್ನಾ ಥೇಟರ್‌ನಲ್ಲಿ ಗುರುವಾರ ಬಿಡುಗಡೆ ಕಂಡಿದೆ. ಜಿಲ್ಲೆಯ ಜನರು ಹೆಚ್ಚು ವೀಕ್ಷಣೆ ಮಾಡಲು ತಿಳಿಸಿದರು.

ಕನ್ನಡ ಸೇನೆ ಕರ್ನಾಟಕದ ರಾಜ್ಯ ಉಪಾಧ್ಯಕ್ಷ ರವಿ ಸ್ವಾಮಿ ನಿರ್ಣಾ ಮಾತನಾಡಿ ಎಲ್ಲಾ ಚಲನಚಿತ್ರಗಳನ್ನು ಬೆಂಗಳೂರಿನಿಂದ ಬಿಡುಗಡೆ ಮಾಡಿದರೆ, ಈ ಚಿತ್ರ ಬೀದರ ಜಿಲ್ಲೆಯಿಂದ ಬಿಡುಗಡೆ ಮಾಡಿಸುತ್ತಿರುವುದು ಖುಷಿ ತಂದಿದೆ. ಚಿತ್ರವು ನೂರು ದಿನ ಓಡಲಿ ಎಂದು ಶುಭ ಹಾರೈಸಿದರು. ಮುಂದಿನ ದಿನಗಳಲ್ಲಿ ಭರತ ಸಾಗರ ಅವರು ಬೀದರನ ಐತಿಹಾಸಿಕ ಸ್ಥಳಗಳಲ್ಲಿ ಶೂಟಿಂಗ್ ಮಾಡಬೇಕೆಂದು ಹೇಳಿದರು.

ಇದೇವೇಳೆ ಸುದ್ದಿಗೋಷ್ಠಿಯಲ್ಲಿ ಕನ್ನಡ ಸೇನೆ ಕರ್ನಾಟಕದ ಜಿಲ್ಲಾಧ್ಯಕ್ಷ ಸುಭಾಷ ಕೆನಡೆ, ಪ್ರಮುಖರಾದ ಶ್ರೀಮಂತ ಸಪಾಟೆ, ರಾಜಕುಮಾರ, ಉಮಾಕಾಂತ ಮೀಸೆ, ಶ್ರೀಕಾಂತ ಸ್ವಾಮಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಪಂಚ ಗ್ಯಾರಂಟಿ ಯೋಜನೆಯ ನಮ್ಮನಡೆ ಹಳ್ಳಿ ಕಡೆ



ಬೀದರ. ಜೂ. 26 : ದಕ್ಷಿಣ ರವರ ಆದೇಶದ ಮೇರೆಗೆ ರಾಜ್ಯ ಸರ್ಕಾರದ ಮಹತ್ವಕಾಂಕ್ಷಿಯೋಜನೆಗಳಾದ ಗೃಹಲಕ್ಷ್ಮೀ, ಅನ್ನಭಾಗ್ಯ, ಗೃಹಜ್ಯೋತಿ, ಯುವನಿಧಿ, ಮತ್ತು ಶಕ್ತಿ ಯೋಜನೆಗಳ ಬಗ್ಗೆ ಬೀದರ ದಕ್ಷಿಣ ಕ್ಷೇತ್ರದ ಪ್ರತಿ ಹಳ್ಳಿಗಳಿಗೆ ತಲುಪಿ ಯೋಜನೆ ಬಗ್ಗೆ ಸಮಿತಿ ಗಮನಕ್ಕೆ ತರುಬೇಕು ಎಂದು ಆದೇಶ ಮಾಡಿದರು,

ಬೀದರ್ ತಾಲೂಕಿನ ಪಂಚ್ ಗ್ಯಾರಂಟಿ ಕಮಿಟಿಯ ಉಪಾಧ್ಯಕ್ಷರಾದ ಶ್ರೀರಾಜಕುಮಾರ ಮಡಕಿ ರವರ ಹಾಗೂ ಸದಸ್ಯರ ನೇತೃತ್ವದಲ್ಲಿ, ನಮ್ಮ ನಡೆ ಹಳ್ಳಿ ಕಡೆ ಕಾರ್ಯಕ್ರಮವನ್ನು ಮಲ್ಕಾಪೂರ ಗ್ರಾಮ ಪಂಚಾಯತಿಯ ವ್ಯಾಪ್ತಿಯಲ್ಲಿ ಬರುವ ಶಹಾಪೂರ ಗ್ರಾಮದಲ್ಲಿ ಕರ್ನಾಟಕ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳಾದ ಗೃಹಲಕ್ಷ್ಮೀ, ಅನ್ನಭಾಗ್ಯ, ಗೃಹಜ್ಯೋತಿ, ಯುವನಿಧಿ, ಮತ್ತು ಶಕ್ತಿ ಯೋಜನೆಗಳ ಮಹತ್ವವದ ಬಗ್ಗೆ ಮನೆ ಮನೆಗೆ ತೆರಳಿ ಜನರಲ್ಲಿ ತಿಳಿಸಲಾಯಿತು. ಈಸಂದರ್ಭದಲ್ಲಿ ಕಮಿಟಿಯ ಸದಸ್ಯರುಗಳಾದ ಉದಯಕುಮಾರ ಚಟನಳ್ಳಿ, ಶಿವಕುಮಾರ ಕುತ್ತಾಬಬಾದ್, ಮತ್ತು ಮುಖಂಡರಾದ ಮೋಹಿನ ಪಠಾಣ, ಮಲ್ಲಿಕಾರ್ಜುನ, ಸಿದ್ದು, ಮತ್ತು ಅನೇಕ ಗ್ರಾಮಸ್ಥರು ಪಾಲ್ಗೊಂಡಿದ್ದರು.

# ಜೂ.29ರಂದು ವೈಭವದ ಜಗನ್ನಾಥ ರಥಯಾತ್ರೆ: ರಾಮಕೃಷ್ಣ ಸಾಳೆ




ಬೀದರ. ಜೂ. 26 : ಈ ತಿಂಗಳ 29ರಂದು ಬೆಳಿಗ್ಗೆ 11.30 ಗಂಟೆಗೆ ಪ್ರತಿ ವರ್ಷದಂತೆ ಈ ವರ್ಷ ಸಹ ವೈಭವದ ಜಗನ್ನಾಥ ರಥಯಾತ್ರೆ ಹಮ್ಮಿಕೊಳ್ಳಲಾಗಿದೆ ಎಂದು ರಥಯಾತ್ರೆ ಉತ್ಸವ ಸಮಿತಿ ಗೌರವಾಧ್ಯಕ್ಷರಾದ ರಾಮಕೃಷ್ಣ ಸಾಳೆ ತಿಳಿಸಿದರು.

ಜಿಲ್ಲಾ ಪತ್ರಿಕಾ ಭವನದಲ್ಲಿ ಗುರುವಾರ ಸುದ್ದಿಗೋಷ್ಟಿ ಉದ್ದೇಶಿಸಿ ಮಾತನಾಡಿರುವ ಅವರು, ಚಾರಧಾಮಗಳಲ್ಲಿ ಒಂದಾದ 800 ವರ್ಷಗಳ ಹಿಂದೆ ಇತಿಹಾಸ ಇರುವ ಓಡಿಸ್ಸಾ ರಾಜ್ಯದ ಪೂರಿನಗರದಲ್ಲಿ ವಿಷ್ಣುವಿನ ಅವತಾರ ಮತ್ತು ಶ್ರೀಕೃಷ್ಣನಿಗೆ ಸಮರ್ಪಿತವಾದ ಶ್ರೀ ಜಗನ್ನಾಥ ಮಂದಿರ ಇದೆ. ಇವರ ರಥಯಾತ್ರೆ ದೂರದ ದೇಶಾದಂತ್ಯ ಜನರು ಸೇರುತ್ತಾರೆ. ಇಲ್ಲಿನ ನಮ್ಮ ಭಕ್ತರಿಗೆ ಅನುಕೂಲವಾಗುವಂತೆ ಅವರೆಲ್ಲರ ಆಶೋತ್ತರಗಳನ್ನು ಈಡೇರಿಸಲು ಬೀದರ ಜಿಲ್ಲಾ ಕೇಂದ್ರದಲ್ಲಿ ಶ್ರೀ ಜಗನ್ನಾಥ ಮಂದಿರ ಸ್ಥಾಪನೆಯಾಗಿದೆ. ಅಂದಿನಿಂದ ಇಂದಿನವರೆಗೆ ಪ್ರತಿ ವರ್ಷ ರಥಯಾತ್ರೆ ಜರುಗುತ್ತಾ ಬಂದಿದೆ. ಈ ರಥಯಾತ್ರೆಯಲ್ಲಿ ಶ್ರೀ ಬಲರಾಮ, ಶ್ರೀ ಸುಭದ್ರೆ ಮತ್ತು ಶ್ರೀ ಕೃಷ್ಣನ ಭವ್ಯ ಮೂರ್ತಿಗಳ ಶೋಭಾಯಾತ್ರೆ ಜರುಗತ್ತದೆ. ರಥಯಾತ್ರೆಯಲ್ಲಿ ಭಾಗವಹಿಸುವುದೆ ಪುಣ್ಯವೆಂದು ತ್ರಿಮೂರ್ತಿಗಳನ್ನು ಕಣ್ಣು ತುಂಬಿಸಿಕೊಳ್ಳಲು ನಾ ಮುಂದು ತಾ ಮುಂದು ಎಂದು ಜನ ಭಾವವಹಿಸುತ್ತಾರೆ. ಅದೇ ಮಾದರಿಯಲ್ಲಿ ಕಳೆದ ಮೂರು ವರ್ಷಗಳಿಂದ ಬೀದರ್‌ನಲ್ಲಿ ಸಹ ರಥಯಾತ್ರೆ ಜರುಗುತ್ತಿದೆ ಎಂದರು.

ಅಂದಿನ ರಥಯಾತ್ರೆ ಸಂದರ್ಭದಲ್ಲಿ ರಸ್ತೆಯುದ್ದಕ್ಕು ಭಗವಂತನ ಪುಷ್ಪವೃಷ್ಟಿ ಆರತಿ, ಕಾಯಿ ಕರಪೂರ, ನೈವೆದ್ದೆ ಸಲ್ಲಿಸಲಾಗುತ್ತದೆ. ಅಲ್ಲಲ್ಲಿ ಹಲವಾರು ಕಡೆ, ಗಣಿದ ಭಕ್ತ ಸಮುಹಕ್ಕೆ ನೀರು, ಪಾನಕ, ಅಲ್ಪಹಾರ, ಹಣ್ಣುಗಳನ್ನು ವಿತರಿಸುವುದು ತೀರ ಸಾಮಾನ್ಯವಾಗಿದೆ ಎಂದು ಹೇಳಿದರು.

ಭಕ್ತಿಭಾವದಿಂದ ಹಾಗೂ ಸಾಂಸ್ಕೃತಿಕ ವೈಭವದೊಂದಿಗೆ ಆಚರಿಸಲಾಗುತ್ತಿರುವ ಈ ಪವಿತ್ರ ಯಾತ್ರೆ ಶ್ರೀ ಲಕ್ಷ್ಮಿ ಸತ್ಯನಾರಾಯಣ ದೇವಸ್ಥಾನ (ಗೌಶಾಲೆ), ರಾಂಪುರ ಕಾಲೋನಿ, ಮನಹಳ್ಳಿ ರಸ್ತೆ ಇಂದ ಬೆಳಿಗ್ಗೆ 11:30 ಕ್ಕೆ ಪ್ರಾರಂಭವಾಗಲಿದೆ. ಕಾರ್ಯಕ್ರಮವು ಮೊದಲಿಗೆ ಶ್ರೀ ಲಕ್ಷ್ಮಿ ಸತ್ಯನಾರಾಯಣ ಪೂಜೆಯಿಂದಪ್ರಾರಂಭವಾಗುತ್ತಿದ್ದು, ನಂತರ ಪಾರಂಪರಿಕ ಜಿಜಾ ಪೂಜೆ (ರಥ ಪೂಜೆ) ಮತ್ತು ಗೌ ಪೂಜೆ ನೆರವೇರಲಿದೆ. ಉತ್ತರ ಪ್ರದೇಶದ ಇಸ್ಕಾನ್ ವೃಂದಾವನದ ಭಕ್ತಿ ಕಿಂಕರ ದಾಮೋದರ ಗೋಸ್ವಾಮಿ ಮುಖ್ಯ ಅತಿಥಿಗಳಶಾಗಿ ಭಾಗವಹಿಸುವರು. ಬೀದರ್ ದಕ್ಷಿಣ ಕ್ಷೇತ್ರದ ಶಾಸಕರಾದ ಡಾ.ಶೈಲೇಂದ್ರ ಬೆಲ್ದಾಳೆ ಗೌರವ ಅತಿಥಿಗಳಾಗಿ ಪಾಲ್ಗೊಳ್ಳುವರು. ರಥಯಾತ್ರೆ ಸಮಿತಿ ಅಧ್ಯಕ್ಷ ಸೋಮಶೇಖರ್ ಪಾಟೀಲ ಗಡಗಿ ಅಧ್ಯಕ್ಷತೆ ವಹಿಸುವರು. ತಾನು, ಸಮಿತಿಯ ಅಧ್ಯಕ್ಷ ವೀರಶೆಟ್ಟಿ ಮನು, ಶ್ರೀ ಲಕ್ಷ್ಮಿ ಸತ್ಯನಾರಾಯಣ ದೇವಸ್ಥಾನ ಅಧ್ಯಕ್ಷ ಪ್ರಭಾಕರ್ ಮೈಲಾಪುರೆ ಸೇರಿದಂತೆ ಇತರರು ಕಾರ್ಯಕ್ರಮದಲ್ಲಿ ವಿವಿಧ ಸಮಿತಿಯ ಸದಸ್ಯರು, ಧಾರ್ಮಿಕ ಮುಖಂಡರು ಹಾಗೂ ಗಣ್ಯರು ಪಾಲ್ಗೊಳ್ಳಲಿದ್ದಾರೆ. ಇದು ಸಾವಿರಾರು ಭಕ್ತರನ್ನು ಆಕರ್ಷಿಸುವ ಪವಿತ್ರ ಯಾತ್ರೆಯಾಗಿದ್ದು, ಪುರುಷರು, ಮಹಿಳೆಯರು ಮತ್ತು ಮಕ್ಕಳು ಸಕ್ರಿಯವಾಗಿ ಭಾಗವಹಿಸಲಿದ್ದಾರೆ. ತೆಲಂಗಾಣ. ಮಹಾರಾಷ್ಟ್ರ ಸೇರಿದಂತೆ ಹತ್ತಿರದ ರಾಜ್ಯಗಳಿಂದ ಮತ್ತು ವಿವಿಧ ನಗರಗಳಿಂದ ಭಕ್ತರು ಬರುವ ನಿರೀಕ್ಷೆಯಿದೆ. ಯಾತ್ರೆ ಅವಧಿಯಲ್ಲಿ ಭಕ್ತರು ಹರೆ ಕೃಷ್ಣ ಮಹಾಮಂತ್ರ, ಭಜನೆಗಳು, ಕೀರ್ತನೆಗಳು, ಹಾಗೂ ಸಾಂಸ್ಕೃತಿಕ ನೃತ್ಯಗಳೊಂದಿಗೆ ಭಕ್ತಿ ಸಾರುವರು. ಇದು ನಮ್ಮ ಹಿಂದೂ ಪರಂಪರೆಯ ವೈಭವವನ್ನು ಪ್ರತಿಬಿಂಬಿಸುತ್ತದೆ ಎಂದು ಸಾಳೆ ಹೇಳಿದರು.

ಕಾರ್ಯಕ್ರಮದ ಆಯೋಜಕರಾದ ವೀರಶೆಟ್ಟಿ ಮಣಗೆ ಮಾತನಾಡಿ, ಬೆಳಗಾವಿಯಿಂದ ಬಂದಿರುವ ಪ್ರಸಿದ್ಧ ರಂಗೋಲಿ ಕಲಾವಿದರು ಮಾರ್ಗವನ್ನು ಆಕರ್ಷಕವಾದ ಚಿತ್ರಗಳಿಂದ ಆಲಂಕರಿಸಲಿದ್ದಾರೆ ಬಿದರ್‌ನ ವಿವಿಧ ಸಮುದಾಯಗಳ ಸಹಕಾರದಿಂದ ಪ್ರಸಾದ ಮತ್ತು ಕುಡಿಯುವ ನೀರಿನ ವ್ಯವಸ್ಥೆ ಮಾಡಲಾಗಿದೆ ಯಾತ್ರೆಯ ನಂತರ ಶ್ರೀ ಜಗನ್ನಾಥ ದೇವಸ್ಥಾನದಲ್ಲಿ ಮಹಾಪ್ರಸಾದ ವಿತರಣೆ ನಡೆಯಲಿದೆ ಎಂದರು.

ಶ್ರೀ ಲಕ್ಷ್ಮಿ ಸತ್ಯನಾರಾಯಣ ದೇವಸ್ಥಾನ (ರಾಂಪುರ ಕಾಲೋನಿ), ಮೈಲೂರ್ ಕ್ರಾಸ್ ರಾಮ್ ಚೌಕ್, ಬೊಲ್ಗೊಂಡೇಶ್ವರ ವೃತ್ತ, ಬಸವೇಶ್ವರ ವೃತ್ತ, ಅಂಬೇಡ್ಕರ್ ವೃತ್ತ, ನವದ್ದೇರಿ, ಚಿಕ್ಕಪೇಟೆ ಯಿಂದ ವರ್ತುಲ ರಸ್ತೆ ಸೇರಿ ಶ್ರೀ ಜಗನ್ನಾಥ ದೇವಸ್ಥಾನ ಯಾತ್ರೆಯು ಸಂಜೆ 6:30 ಕ್ಕೆ ಶ್ರೀ ಜಗನ್ನಾಥ ದೇವಸ್ಥಾನದಲ್ಲಿ ಸಮಾರೋಪವಾಗಲಿದೆ. ಎಲ್ಲಾ ಭಕ್ತರು, ಕುಟುಂಬದವರು ಮತ್ತು ಸಾರ್ವಜನಿಕರನ್ನು ಈ ಪವಿತ್ರ ಯಾತ್ರೆಯಲ್ಲಿ ಪಾಲ್ಗೊಳ್ಳಬೇಕು. ಇಂತಹ ಭವ್ಯ ರಥಯಾತ್ರೆಗೆ ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕೃತಾರ್ಥರಾಗಬೇಕೆಂದು ಮಣಗೆ ಹೇಳಿದರು.

ರಥಯಾತ್ರೆಯ ಆಯೋಜಕರಾದ ಶಿವರಾಮ ಜೋಷಿ, ಸೋಮಶೇಖರ ಪಾಟೀಲ ಗಾದಗಿ, ರಾಜಕುಮಾರ ಅಳ್ಳೆ, ಡಾ.ನಿಲೇಶ ದೇಶಮುಖ ಮಾತನಾಡಿದರು. ಸುನಿಲ ಶರ್ಮಾ ಪತ್ರಿಕಾಗೋಷ್ಟಿಯಲ್ಲಿದ್ದರು.

# ಪರಿಸರ ರಕ್ಷಿಸದಿದ್ದರೆ ಆಪತ್ತು ತಪ್ಪಿದ್ದಲ್ಲ



ಬೀದರ. ಜೂ. 26 : ಎಲ್ಲಾ ಕೆಲಸಕ್ಕಿಂತಲೂ ಪರಿಸರ ಸಂರಕ್ಷಣೆಗೆ ಆದ್ಯತೆ ನೀಡುವ ಅಗತ್ಯವಿದೆ. ಪರಿಸರ ರಕ್ಷಿಸಿ, ಬೆಳೆಸದಿದ್ದರೆ ಬರುವ ವರ್ಷಗಳಲ್ಲಿ ಮಾನವ ಸಮಾಜಕ್ಕೆ ಗಂಡಾಂತರ ತಪ್ಪಿದ್ದಲ್ಲ ಎಂದು ಹಿರಿಯ ಪತ್ರಕರ್ತ ಸದಾನಂದ ಜೋಶಿ ಎಚ್ಚರಿಸಿದರು.

ನಗರದ ಹೊರವಲಯದ ಕೊಳಾರ್ ಹತ್ತಿರದ ಕೌಜಲಗಿ ಪ್ರೈಮ್ ಬಡಾವಣೆಯಲ್ಲಿ ರಿಯಲ್ ಎಸ್ಟೇಟ್ ಡೆವಲಪರ್ ಒಕ್ಕೂಟ (ಕ್ರೆಡಾಯ್) ಮತ್ತು ಇಂಡಿಯನ್ ಕಾಂಕ್ರಿಟ್ ಅಸೋಸಿಯೇಷನ್ (ಐಸಿಐ) ವತಿಯಿಂದ ಗುರುವಾರ ಹಮ್ಮಿಕೊಂಡಿದ್ದ ವಿಶ್ವ ಪರಿಸರ ದಿನಾಚರಣೆ, ಸಸಿ ನೆಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಪರಿಸರದ ನಾಶದಿಂದಲೇ ಪ್ರಕೃತಿಯಲ್ಲಿ ಇಂದು ಅಸಮತೋಲನ ಸೃಷ್ಟಿಯಾಗಿದೆ. ಇದು ಹೀಗೆ–ಯೇ ಮುಂದುವರಿದರೆ ಮನುಕುಲಕ್ಕೆ ಮುಳುವಾಗಿ ಪರಿಣಮಿಸಿದೆ. ಪರಿಸರದ ಸಮತೋಲನದಿಂದ ಮಾತ್ರ ಸಮಾಜ ಸುರಕ್ಷಿತವಾಗಿರಲು ಸಾಧ್ಯ ಎಂದು ಹೇಳಿದರು. ಜನಸಂಖ್ಯೆ ಹೆಚ್ಚುತ್ತಿದ್ದಂತೆಯೇ ನಮ್ಮಲ್ಲಿ ನಗರೀಕರಣ ಸಹ ಜಾಸ್ತಿಯಾಗುತ್ತಿದೆ. ರಿಯಲ್ ಎಸ್ಟೇಟ್ ಇಂದು ದೇಶದ ಅತೀ ದೊಡ್ಡ ಉದ್ಯಮವಾಗಿ ಬೆಳೆದಿದೆ. ಪ್ರತಿ ವರ್ಷ ಲಕ್ಷಾಂತರ ಎಕರೆ ಕೃಷಿಭೂಮಿ ನಿವೇಶನಗಳಾಗಿ ಪರಿವರ್ತನೆಯಾಗುತ್ತಿವೆ. ಇದಕ್ಕಾಗಿ ಅಸಂಖ್ಯೆಯಲ್ಲಿ ದೊಡ್ಡ ಗಿಡ, ಮರಗಳನ್ನು ನೆಲಸಮ ಮಾಡಲಾಗುತ್ತಿದೆ. ರಸ್ತೆ, ಹೆದ್ದಾರಿ, ಬಹುಮಹಡಿ ಕಟ್ಟಡ (ಫ್ಲಾ ??ಟ್) ಮತ್ತಿತರೆ ಕಟ್ಟಡ ನಿರ್ಮಾಣದ ವೇಳೆಯೂ ಅಪಾರ ಮರಗಳ ಮಾರಣಹೋಮ ನಡೆದಿದೆ. ಇದಕ್ಕೆ ಪರ್ಯಾಯವಾಗಿ ನಾವು ಮರ ಬೆಳೆಸದಿದ್ದರೆ ಪರಿಸ್ಥಿತಿ ಕೈಮೀರಿ ಹೋಗಲಿದೆ. ಪರಿಸರ ಹಾಳಾಗಿ ಮನುಷ್ಯರಿಗೆ ಅಕಾರಣ ನಾನಾ ರೋಗಗಳು ಸುತ್ತಿಕೊಳ್ಳಲಿವೆ. ದೆಹಲಿ ತರಹ ಎಲ್ಲೆಡೆ ಶುದ್ಧ ಗಾಳಿಗಾಗಿ ಪರಿತಪಿಸಬೇಕಾಗುತ್ತದೆ. ಪರಿಸರ ನಾಶ ಎಂದರೆ ಸಮಾಜ ನಾಶ ಎಂದರ್ಥ. ಇದನ್ನು ಅರಿತು ಪರಿಸರ ರಕ್ಷಣೆಗೆ ನಾವೆಲ್ಲರೂ ಸಂಕಲ್ಪ ಮಾಡಬೇಕಿದೆ. ಪ್ರತಿ ಮನೆಯವರು 5 ಸಸಿ ನೆಟ್ಟು ಪೋಶಿಸಿದರೆ ಎಲ್ಲ ಸಮಸ್ಯೆ ಪರಿಹಾರವಾಗಲಿವೆ ಎಂದರು.

ಕರ್ನಾಟಕ ವೃತ್ತಿಪರ ಸಿವಿಲ್ ಇಂಜಿನಿರ್ಸ್ ಕೌನ್ಸಿಲ್ ಸದಸ್ಯ ಹಾಗೂ ಐಸಿಐ ಕಲ್ಯಾಣ ಕರ್ನಾಟಕ ಅಧ್ಯಕ್ಷ ಹಾವಶೆಟ್ಟಿ ಪಾಟೀಲ್ ಮಾತನಾಡಿ, ವಿಶ್ವದಲ್ಲಿ ಅತೀ ಹೆಚ್ಚು ಮಾನವ ಸಂಪನ್ಮೂಲ ಭಾರತದಲ್ಲಿದೆ. ಇದರ ಸದ್ಬಳಕೆಯಾದರೆ ಸಮಾಜಕ್ಕೆ ಎದುರಾಗಿರುವ ಅನೇಕ ಸಮಸ್ಯೆ ನಿವಾರಣೆ ಸಾಧ್ಯ. ದೇಶದ ಅಭಿವೃದ್ಧಿ, ಪರಿಸರ ಸಂರಕ್ಷಣೆಯಂಥ ಸಮಾಜಪರ ಕೆಲಸಗಳಲ್ಲಿ ಎಲ್ಲರೂ ಶ್ರದ್ಧೆಯಿಂದ ಕೈಜೋಡಿಸಿತೊಡಗಿದಾಗ ಅಗಾಧ ಬದಲಾವಣೆ ಕಾಣಬಹುದು. ಸ್ವಯಂ ಪರಿವರ್ತನೆಯಿಂದ ವಿಶ್ವ ಪರಿವರ್ತನೆ ಸಾಧ್ಯ ಎಂದು ಪ್ರತಿಪಾದಿಸಿದರು.

ಕ್ರೆಡಾಯ್ ಬೀದರ್ ಅಧ್ಯಕ್ಷ ರವಿ ಮೂಲಗೆ, ರೋಟರಿ ಕ್ಲಬ್ ಅಧ್ಯಕ್ಷ ಸೋಮಶೇಖರ ಪಾಟೀಲ್, ಕಲಂ 371(ಜೆ) ಸಮಗ್ರ ಅನುಷ್ಠಾನ ಸಮಿತಿ ಅಧ್ಯಕ್ಷ ಅಶೋಕ ಮಾನೂರೆ ಮಾತನಾಡಿದರು. ಪ್ರಮುಖರಾದ ಸತೀಶ ನೌಬಾದೆ, ಅನೀಲ ಖೇಣಿ, ಸಂಜುಕುಮಾರ ಶಂಭು, ಸತೀಶ ವಡ್ಡಿ, ಗಣೇಶ ಶೀಲವಂತ, ವೀರೇಂದ್ರವರ್ದಾ, ಸಿದ್ದು ಚಿಟಮೆ ಇತರರಿದ್ದರು. ಬಡಾವಣೆಯಲ್ಲಿ ವಿವಿಧ ತಳಿಗಳ 300ಕ್ಕೂ ಹೆಚ್ಚು ಸಸಿ ನೆಡಲಾಯಿತು.

# ಮಾದಕ ದ್ರವ್ಯ ವ್ಯಸನ ಮುಕ್ತ ದಿನಾಚರಣೆ

## ಜಿಲ್ಲೆಯಾದ್ಯಂತ 4 ಲಕ್ಷ ಮಕ್ಕಳಿಗೆ ಪ್ರತಿಜ್ಞಾವಿಧಿ ಬೋಧನೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.26– ಅಂತರರಾಷ್ಟ್ರೀಯ ಮಾದಕದ್ರವ್ಯ ವ್ಯಸನಮುಕ್ತ ದಿನದ ಅಂಗವಾಗಿ ಗುರುವಾರ ಜಿಲ್ಲೆಯಾದ್ಯಂತ ವಿವಿಧ ಶಾಲಾ, ಕಾಲೇಜಿನ 4 ಲಕ್ಷ ಮಕ್ಕಳಿಗೆ ಪ್ರತಿಜ್ಞಾವಿಧಿ ಬೋಧಿಸಲಾಯಿತು.



ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಪೊಲೀಸ್ ಇಲಾಖೆ ಸಹಯೋಗದಲ್ಲಿ ನವನಗರದ ಅಲ್ಪಸಂಖ್ಯಾತ ಮೊರಾರ್ಜಿ ವಸತಿ ಶಾಲೆಯಲ್ಲಿ ಜಿಲ್ಲಾಧಿಕಾರಿ ಸಂಗಪ್ಪ ಎಂ, ಹಾಗೂ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಅವರ ನೇತೃತ್ವದಲ್ಲಿ ನಡೆದ ಕಾರ್ಯಕ್ರಮದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಮರನಾಥ ರೆಡ್ಡಿ ಶಾಲಾ ಮಕ್ಕಳಿಗೆ ಪ್ರತಿಜ್ಞಾವಿಧಿ ಬೋಧಿಸಿದರು.

ಈ ವೇಳೆಯಲ್ಲಿ ಮಾತನಾಡಿದ ಜಿಲ್ಲಾಧಿಕಾರಿ ಸಂಗಪ್ಪ ಎಂ. ಅವರು, ಅಪ್ರಾಪ್ತ ವಯಸ್ಸಿನಲ್ಲಿ ಮಾದಕ ವ್ಯಸನಿಗೆ ತುತ್ತಾದಲ್ಲಿ ಆರೋಗ್ಯದ ಮೇಲೆ ಪರಿಣಾಮ ಬೀರಿ ಕಿನ್ನತೆಗೆ ಒಳಗಾಗುತ್ತಾರೆ. ಇದರಿಂದ ಮಕ್ಕಳ ಬೆಳವಣಿಗೆ ಕುಂಟಿತಗೊಳ್ಳುವದಲ್ಲದೇ ಕುಟುಂಬದ ಸ್ವಾಸ್ಥ ಹಾಳಾಗುತ್ತದೆ. ಸಾಮಾಜಿಕವಾಗಿ, ಶೈಕ್ಷಣಿಕವಾಗಿ ಪ್ರಗತಿಹೊಂದಲು ಸಾಧ್ಯವಾಗುವದಿಲ್ಲ. ಇಂದು ಪ್ರಮಾಣ ವಚನ ಸ್ವೀಕರಿಸಿದ ಮಕ್ಕಳು ತಮ್ಮ ಕುಟುಂಬದ ಸದಸ್ಯರಲ್ಲಿ ವ್ಯಸನಿಗಳಿದ್ದರೆ ಅವರನ್ನು ಸರಿದಾರಿಗೆ ತರುವ ಕಾರ್ಯ ಮಾಡಬೇಕು ಎಂದರು.

ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಮಾತನಾಡಿ, ಯುವ ಪೀಳಿಗೆ ತಮ್ಮ ಶರೀರ ಯಾವ ರೀತಿಯ ಇರಬೇಕು ಎಂಬುದನ್ನು ತೀರ್ಮಾಣ ಮಾಡಬೇಕಿದೆ. ಪೌಷ್ಠಿಕ ಆಹಾರ ಸೇವನೆ ಮಾಡುವದರ ಜೊತೆಗೆ ಮಾದಕ ದ್ರವ್ಯಗಳಿಂದ ದೂರ ಇದ್ದು, ರಾಷ್ಟ್ರ ಕಟ್ಟುವ ಕಾರ್ಯದಲ್ಲಿ ನಿರತರಾಗಬೇಕು. ಜಿಲ್ಲೆಯಲ್ಲಿ ಅಕ್ರಮ ಮಾದಕ ವಸ್ತು ಮಾರಾಟಗಾರರನ್ನು ಗುರುತಿಸಿ ಶಿಕ್ಷಿಸುವಲ್ಲಿ ಜಿಲ್ಲಾ ಪೊಲೀಸ್ ಮಹತ್ವದ ಕಾರ್ಯ ಮಾಡುತ್ತಿದ್ದು, ಶಾಲಾ, ಕಾಲೇಜು ಆವರಣ ಸುತ್ತಮುತ್ತ ಮಾದಕ ವಸ್ತು ಮಾರಾಟ ಕಂಡುಬಂದಲ್ಲಿ 112ಗೆ ಕರೆ ಮಾಡಿದಾಗ ವಾತಾವರಣ ಸರಿಪಡಿಸಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಜಿಲ್ಲೆಯಾದ್ಯಂತ ನಡೆದ ಕಾರ್ಯಕ್ರಮದಲ್ಲಿ 1600 ಪೊಲೀಸ್ ಸಿಬ್ಬಂದಿ, ಶಿಕ್ಷಣ ಇಲಾಖೆ ಹಾಗೂ ಆರೋಗ್ಯ ಇಲಾಖೆ ಸಿಬ್ಬಂದಿ ಸಹ ಭಾಗವಹಿಸಿದ್ದರು. ಕಾರ್ಯಕ್ರಮದಲ್ಲಿ ಅಲ್ಪಸಂಖ್ಯಾತರ ವಸತಿ ಶಾಲೆ ಹಾಗೂ ಕಾಲೇಜಿನ ಪ್ರಾಂಶುಪಾಲರಾದ ರಾಜೇಶ್ವರಿ, ಮಹಮ್ಮದ ರಹೀಂ, ಆನಂದ ಗಬ್ಬೂರ ಸೇರಿದಂತೆ ಸಹ ಶಿಕ್ಷಕರು, ನಿಲಯಮೇಲ್ವಿಚಾರಕರು ಉಪಸ್ಥಿತರಿದ್ದರು.

# ವಿದ್ಯಾರ್ಥಿಗಳಿಗೆ ಸಕಲ ಸೌಲಭ್ಯ ಕಲ್ಪಿಸಿ



ಬೀದರ. ಜೂ. 26 : ವಸತಿ ನಿಲಯಗಳ ವಿದ್ಯಾರ್ಥಿಗಳಿಗೆ ಸರ್ಕಾರದ ಸಕಲ ಸೌಲಭ್ಯ ಸಮರ್ಪಕವಾಗಿ ಕಲ್ಪಿಸಬೇಕು ಎಂದು ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕಿ ಸಿಂಧು ಎಚ್.ಎಸ್.ರಘು ವಸತಿ ನಿಲಯಗಳ ಮೇಲ್ವಿಚಾರಕರಿಗೆ ಸೂಚಿಸಿದರು. ಔರಾದ್ ಪಟ್ಟಣದ ತಹಶೀಲ್ದಾರ್ ಕಚೇರಿಯಲ್ಲಿ ಗುರುವಾರ ನಡೆದ ಔರಾದ್ ತಾಲ್ಲೂಕುಮಟ್ಟದ ವಸತಿ ನಿಲಯ ವಿದ್ಯಾರ್ಥಿಗಳ ಸುರಕ್ಷಾ ಮೇಲ್ವಿಚಾರಣಾ ಸಮಿತಿಯ ಸಭೆಯಲ್ಲಿ ಅವರು ಮಾತನಾಡಿದರು. ವಸತಿ ನಿಲಯಗಳಲ್ಲಿ ಬಹುತೇಕ ಬಡವರ ಮಕ್ಕಳು ಇರುತ್ತಾರೆ. ಊಟ, ವಸತಿ ಸೇರಿದಂತೆ ಅವರಿಗೆ ಯಾವುದೇ ರೀತಿಯ ತೊಂದರೆ ಆಗದಂತೆ ನೋಡಿಕೊಳ್ಳಬೇಕು. ಅವರ ಶೈಕ್ಷಣಿಕ ಏಳಿಗೆಗೆ ಪ್ರಯತ್ನಿಸಬೇಕು ಎಂದು ತಿಳಿಸಿದರು. ವಸತಿ ನಿಲಯಗಳ ಏನೇ ಸಮಸ್ಯೆಗಳಿದ್ದರೂ ತಮ್ಮ ಗಮನಕ್ಕೆ ತರಬೇಕು. ಕೂಡಲೇ ಅವುಗಳ ಪರಿಹಾರಕ್ಕೆ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು. ಅಧ್ಯಕ್ಷತೆ ವಹಿಸಿದ್ದ ತಹಶೀಲ್ದಾರ್ ಮಹೇಶ್ ಪಾಟೀಲ ಮಾತನಾಡಿ, ಕಾಲ ಕಾಲಕ್ಕೆ ವಸತಿ ನಿಲಯ ವಿದ್ಯಾರ್ಥಿಗಳ ಆರೋಗ್ಯ ತಪಾಸಣೆ ನಡೆಸಬೇಕು. ವಸತಿ ನಿಲಯಗಳಲ್ಲಿ ಶುಚಿತ್ವ ಕಾಪಾಡಬೇಕು. ಒಳ್ಳೆಯ ಶೈಕ್ಷಣಿಕ ವಾತಾವರಣ ನಿರ್ಮಿಸಬೇಕು ಎಂದು ನಿರ್ದೇಶನ ನೀಡಿದರು.

ಸಮಾಜ ಕಲ್ಯಾಣ ಇಲಾಖೆಯ ಔರಾದ್ ತಾಲ್ಲೂಕು ಸಹಾಯಕ ನಿರ್ದೇಶಕ ಅನಿಲಕುಮಾರ ಮೇಲ್ದೊಡ್ಡಿ, ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿ ರವೀಂದ್ರ ಮೇತ್ರೆ, ತಾಲ್ಲೂಕು ಆರೋಗ್ಯ ಅಧಿಕಾರಿ ಡಾ. ಗಾಯತ್ರಿದೇವಿ, ಪಿಎ???ಐ ರೇಣುಕಾದೇವಿ, ಔರಾದ್ ತಾಲ್ಲೂಕಿನ ವಸತಿ ನಿಲಯಗಳು ಹಾಗೂ ಮೋರಾರ್ಜಿ ದೇಸಾಯಿ ವಸತಿ ಶಾಲೆಗಳ ಮೇಲ್ವಿಚಾರಕರು ಹಾಜರಿದ್ದರು.

# ಸ್ವಹಿತಕ್ಕಾಗಿ ದಿ.ಇಂದಿರಾಗಾಂಧಿ ಅವರಿಂದ ತುರ್ತು ಪರಸ್ಥಿತಿ ಹೇರಿಕೆ : ಛಲುವಾದಿ ನಾರಾಯಣಸ್ವಾಮಿ ಆರೋಪ




ಯಾದಗಿರಿ:ಜೂ.26:ತುರ್ತು ಪರಸ್ಥಿತಿ ದೇಶಕ್ಕೆ ಅಂಟಿದ ಕಪ್ಪುಚುಕ್ಕೆ. ತಮ್ಮ ಸ್ವಾರ್ಥಕ್ಕಾಗಿ ದೇಶದಲ್ಲಿ ಇಂತಹ ಸ್ಥಿತಿ ನಿರ್ಮಾಣಕ್ಕೆ ಮಾಜಿ ಪ್ರಧಾನಿ ದಿ.ಇಂದಿರಾಗಾಂಧಿ ಅವರೇ ಕಾರಣ ಎಂದು ವಿಧಾನ ಪರಿಷತ್ತಿನ ಪ್ರತಿಪಕ್ಷದ ನಾಯಕ ಛಲವಾದಿ ನಾರಾಯಾಣಸ್ವಾಮಿ ಆರೋಪಿಸಿದರು.

ನಗರದ ಲಿಂಗೇರಿ ಕೊನಪ್ಪ ಶಿಕ್ಷಣ ಸಂಸ್ಥೆಯಲ್ಲಿ ಗುರುವಾರ ಹಮ್ಮಿಕೊಂಡಿದ್ದ ತುರ್ತು ಪರಸ್ಥಿತಿ ಕರಾಳ ಪರಸ್ಥಿತಿ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಮಾತನಾಡಿದ ಅವರು, 1974–75ರಲ್ಲಿ ಪ್ರಧಾನಿಯಾಗಿದ್ದ ಇವರ ಚುನಾವಣೆ ಆಯ್ಕೆ ವಿರೋಧಿಸಿ ರಾಜನಾರಾಯಣ ಎಂಬುವವರು ಹೈಕೋರ್ಟನಲ್ಲಿ ದಾವೆ ಹೂಡಿದಾಗ ಇಂದಿರಾ ಗಾಂಧಿ ಅವರ ಕುರ್ಚಿಗೂ, ಸಂಸತ್ತ ಸ್ಥಾನಕ್ಕೂ ಕುತ್ತು ಬಂದಾಗ ಸುಪ್ರಿಂ ಕೋರ್ಟ್‌ಗೆ ಮೊರೆ ಹೋದಾಗ ಸಿಕ್ಕ 24 ದಿನಗಳ ಸಮಯದಲ್ಲಿ ಜಗತ್ತೇ ಕೇಳರಿಯದ ಮತ್ತು ಕಾಣದಂತಹ ತುರ್ತು ಪರಸ್ಥಿತಿ ಈ ದೇಶದಲ್ಲಿ ಹೇರುವ ಮೂಲಕ ತಮ್ಮ ಅಧಿಕಾರ ಉಳಿಸಿಕೊಂಡ ಅಪಕೀರ್ತಿ ಇಂದಿರಾಗಾಂಧಿ ಅವರಿಗೆ ಸಲ್ಲಬೇಕೆಂದು ಛಲವಾದಿ ವಿವರಿಸಿದರು.

ಇದನ್ನು ವಿರೋಧಿಸಿದ ಸಾವಿರಾರು ಜನರನ್ನು ಎಲ್ಲೆಂದರಲ್ಲಿ ಜೈಲಿಗೆ ಹಾಕಿದರು. ಸಂವಿಧಾನವೇ ಮುಚ್ಚಿ ಇಟ್ಟರು. ಪತ್ರಿಕಾ ಸ್ವಾತಂತ್ರ್ಯವೇ ಕಸಿದುಕೊಂಡರು. ಸಂವಿಧಾನವನ್ನು ತಮಗೆ ಬೇಕಾದ ಹಾಗೇ ತಿದ್ದರು. ಹೀಗೆ ಇದೊಂದು ಕರಾಳ ಸ್ಥಿತಿ ದೇಶಕ್ಕೆ ನೀಡದ ಕೀರ್ತಿಯೂ ಇಂದಿರಾಗಾಂಧಿ ಅವರಿಗೆ ಸಲ್ಲುತ್ತದೆ ಎಂದು ಜರಿದರು.

ಈ ಕರಾಳ ಇತಿಹಾಸ ಇಂದಿನ ಪೀಳಿಗೆಗೆ ಗೊತ್ತಾಗುವ ನಿಟ್ಟಿನಲ್ಲಿ ನಾವು ದೇಶದ ಎಲ್ಲಡೆ ಇಂತಹ ಕಾರ್ಯಕ್ರಮ ಆಯೋಜಿಸುತ್ತಿದ್ದೇವೆ ಎಂದು ನಾರಾಯಣಸ್ವಾಮಿ ಹೇಳಿದರು.

ಸಂಸ್ಥೆ ಕಾರ್ಯದರ್ಶಿ ಸಿದ್ರಾಮಪ್ಪ ಗೌಡ ಚೇಗಂಟಾ, ಜಿಲ್ಲಾ ಬಿಜೆಪಿ ಅಧ್ಯಕ್ಷ ಬಸವರಾಜಪ್ಪ ವಿಭೂತಿಹಳ್ಳಿ, ಮಾಜಿ ಅಧ್ಯಕ್ಷ ಅಮೀನರಡ್ಡಿ ಯಾಳಗಿ, ಯುವ ಮುಖಂಡ ಮಹೇಶರಡ್ಡಿ ಮುದ್ನಾಳ, ಕಾಲೇಜಿನ ಪ್ರಾಂಶುಪಾಲ ಗುರಪ್ಪಚಾರ್ಯ ವಿಶ್ವಕರ್ಮ, ಸಿಬ್ಬಂದಿಗಳು ಸವಿತಾ, ಅನನ್ಯಾ, ಬಸವರಾಜ ಜುಗೇರಿ, ಸತೀಶಕುಮಾರ, ರಮಾ ಕುಲಕರ್ಣಿ ಸೇರಿದಂತೆಯೇ ಇತರರಿದ್ದರು.

ಅಘೋಷಿತ ತುರ್ತು ಪರಸ್ಥಿತಿ ಎಂದು ಹೇಳಿದ ಖರ್ಗೆಯವರು ಅಂದಿನ ತುರ್ತು ಪರಸ್ಥಿತಿಯನ್ನು ಸತ್ಯವೆಂದು ಒಪ್ಪಿಕೊಂಡಂತಾಗಿದೆ:ಛಲವಾದಿ ಆರೋಪ.

ಕಳೆದ 11 ವರ್ಷಗಳಿಂದ ದೇಶದಲ್ಲಿ ಅಘೋಷಿತ ತುರ್ತು ಪರಸ್ಥಿತಿ ಇದೆ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹೇಳಿದನ್ನು ಗಮನಿಸಿದರೇ ಅಂದು ನಿಜವಾದ ತುರ್ತು ಪರಸ್ಥಿತಿ ಇತ್ತು ಎಂಬುವುದು ಒಪ್ಪಿಕೊಂಡಂತೆಯೇ ಆಗಿದೆ ಎಂದು ಛಲವಾದಿ ನಾರಾಯಣಸ್ವಾಮಿ ಹೇಳಿದರು.

ಈ ಹೇಳಿಕೆ ನೀಡುವ ಬದಲಿಗೆ ಅಂದು ಇಂದಿರಾ ಗಾಂಧಿ ಅವರು ಮಾಡಿದ ತಪ್ಪಿಗೆ ದೇಶದ ಜನತೆಗೆ ಕ್ಷಮೆ ಕೇಳಿದ್ದರೇ ಅವರು ಬಹುದೊಡ್ಡ ವ್ಯಕ್ತಿಯಾಗುತ್ತಿದ್ದರು ಎಂದು ಅವರು ಹೇಳಿದರು.

# ಸಮಾಜ ಸುಧಾರಣೆಗೆ ಯುವ ಸಮುದಾಯ ಮುಂದಾಗಲಿ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.26– ಯುವ ಸಮೂಹ ಮಾದಕ ವಸ್ತು ಸೇವನೆಯಂತಹ ದುಶ್ಚಟಗಳಿಂದ ದೂರ ಸರಿದು ಸಮಾಜ ಸುಧಾರಣೆಗೆಯುವ ಮುಂದಾಗಬೇಕು ಎಂದು ನಗರ ಪೋಲೀಸ ಠಾಣೆಯ ಎಸ್‌ಐ ಧರ್ಮರಾಜ ಧೂಳಖೇಡ ಹೇಳಿದರು.

ನಗರದ ವಿದ್ಯಾ ಪ್ರಸಾರಕ ಮಂಡಳದ ಎಸ್.ಆರ್.ನರಸಾಪೂರ ಕಲಾ ಹಾಗೂ ಎಂ.ಬಿ.ಶಿರೂರ ವಾಣಿಜ್ಯ ಮಹಾವಿದ್ಯಾಲಯದ ಐಕ್ಯೂಎಸಿ, ಎನ್‌ಎಸ್‌ಎಸ್ ಘಟಕಗಳು ಮತ್ತು ಪೊಲೀಸ್ ಇಲಾಖೆ ಸಂಯುಕ್ತವಾಗಿ ಗುರುವಾರ ಆಯೋಜಿಸಿದ್ದ ಅಂತಾರಾಷ್ಟ್ರೀಯ ಮಾದಕ ವಸ್ತು ಮತ್ತು ಅಕ್ರಮ ಕಳ್ಳ ಸಾಗಾಣಿಕೆ ವಿರೋಧ ದಿನದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಮಾದಕ ವ್ಯಸನಿಗಳು ಮನಸ್ಸು ಹಾಗೂ ದೇಹದ ಮೇಲಿನ ನಿಯಂತ್ರಣವನ್ನು ಕಳೆದುಕೊಳ್ಳುತ್ತಾರೆ. ಆಗ ಅವರಿಂದ ಅಪರಾಧಗಳು ಸಂಭವಿಸುತ್ತವೆ. ಇವುಗಳ ಸಹವಾಸ ಬಿಟ್ಟು, ಉತ್ತಮ ಶಿಕ್ಷಣ ಪಡೆದು ಜೀವನದ ಗುರಿ ಸಾಧಿಸಿ ಪಾಲಕರ ಕನಸನ್ನು ಸಾಕಾರಗೊಳಿಸಬೇಕು ಎಂದರು.

ಸಮಾಜ ಸುಧಾರಣೆಯಲ್ಲಿ ಮತ್ತು ಅಪರಾಧ ಪ್ರಕರಣಗಳನ್ನು ತಗ್ಗಿಸುವಲ್ಲಿ ಯುವಕರು ಪ್ರಮುಖ ಪಾತ್ರವಹಿಸಬೇಕು. ಇಲಾಖೆಯ ಜೊತೆಗೆ ಸಹಕರಿಸುವುದರ ಮೂಲಕ ವ್ಯಸನಮುಕ್ತ ಸಮಾಜವನ್ನು ಕಟ್ಟುವಂತೆ ಧೂಳಖೇಡ ಕರೆ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯ ಶ್ರೀನಿವಾಸ ನರಗುಂದ, ವಿದ್ಯಾರ್ಥಿಗಳು ವ್ಯಸನಗಳಿಂದ ದೂರವಿದ್ದು ಉತ್ತಮ ಹವ್ಯಾಸಗಳಿಂದ ಒಳ್ಳೆಯ ಆರೋಗ್ಯವನ್ನು ಬೆಳೆಸಿಕೊಳ್ಳಬೇಕು. ಒಳ್ಳೆಯ ಸ್ನೇಹಿತರನ್ನು ಹೊಂದಿ ರಚನಾತ್ಮಕ ಕಾರ್ಯಗಳಲ್ಲಿ ತೊಡಗಿಕೊಳ್ಳಬೇಕು. ಉತ್ತಮ ಆರೋಗ್ಯವಿದ್ದಾಗ ಮಾತ್ರ ಸಾಧನೆ ಸಾಧ್ಯ ಎಂಬ ಅಂಶವನ್ನು ಅರಿಯಬೇಕು. ಮಾದಕ ವಸ್ತುಗಳ ಬಳಕೆಯನ್ನು ತಡೆಗಟ್ಟಿ ವ್ಯಕ್ತಿ ಮತ್ತು ಸಮಾಜದ ಆರೋಗ್ಯವನ್ನು ರಕ್ಷಿಸಿಕೊಳ್ಳಬೇಕು ಎಂದರು.

ಪೋಲಿಸ್ ಇಲಾಖೆಯ ಸುಭಾಸ್ ನಾಯಕ, ಮಂಜುನಾಥ ಕುರಿ, ಎನ್.ಎಸ್.ಎಸ್.ಅಧಿಕಾರಿ ಎಸ್.ಎಂ.ಹಡಪದ ವೇದಿಕೆ ಮೇಲಿದ್ದರು.

ಸುಮಾ ವಡ್ಡರ ಹಾಗೂ ಅನಿತಾ ದಡ್ಡಿ ಪ್ರಾರ್ಥಿಸಿದರು. ಡಾ.ಎಸ್.ಎಸ್.ಹಂಗರಗಿ ಸ್ವಾಗತಿಸಿದರು. ಉಪನ್ಯಾಸಕಿ ಸವಿತಾ ಜೇವೂರ ನಿರೂಪಿಸಿದರು. ಎನ್.ಎಸ್.ಎಸ್.ಅಧಿಕಾರಿ ಎಸ್.ವಾಯ್.ಬೊಮ್ಮಣ್ಣವರ ವಂದಿಸಿದರು.

# ವ್ಯಸನಮುಕ್ತ ದೇಶ ನಿರ್ಮಾಣಕ್ಕೆ ಯುವಶಕ್ತಿ ಅಗತ್ಯ: ಅಮರನಾಥ ರೆಡ್ಡಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.26–ವ್ಯಸನ ಮುಕ್ತ ದೇಶ ನಿರ್ಮಾಣಕ್ಕೆ ಯುವಶಕ್ತಿಯ ಅಗತ್ಯವಾಗಿದ್ದು, ಮಾದಕ ದ್ರವವ್ಯ ವ್ಯಸನ ಮುಕ್ತ ರಾಷ್ಟ್ರವನ್ನಾಗಿಸಲು ಪಣ ತೋಡೋಣ ಎಂದು ಬಾಗಲಕೋಟೆ ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಅಮರನಾಥ ರೆಡ್ಡಿ ಹೇಳಿದರು. ನಗರದ ಬಿ.ವಿ.ವಿ.ಸಂಘದ ಆಟದ ಮೈದಾನದಲ್ಲಿ ಗುರುವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಪೊಲೀಸ್ ಇಲಾಖೆ ಹಾಗೂ ಬಿ.ವಿ.ವಿ.ಸಂಘದ ವಿವಿಧ ಶಾಲಾ ಕಾಲೇಜುಗಳ ಸಹಯೋಗದಲ್ಲಿ ನಡೆದ ಅಂತರರಾಷ್ಟ್ರೀಯ ಮಾದಕ ದ್ರವ್ಯ ವ್ಯಸನ ಮುಕ್ತ ದಿನದ ನಿಮಿತ್ಯ ಹಮ್ಮಿಕೊಂಡ ಪ್ರತಿಜ್ಞಾವಿಧಿ ಸ್ವೀಕಾರ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಇಂದು ಬಾಗಲಕೋಟೆ ಜಿಲ್ಲೆಯಾದ್ಯಂತ 4 ಲಕ್ಷ ಮಕ್ಕಳಿಗೆ ಪ್ರತಿಜ್ಞಾವಿಧಿ ಬೋಧನೆ ಮಾಡಲಾಗುತ್ತಿದೆ. ಜಿಲ್ಲೆಯಲ್ಲಿರುವ 3 ಸಾವಿರಕ್ಕಿಂತ ಹೆಚ್ಚು ಶಾಲಾ ಕಾಲೇಜುಗಳಲ್ಲಿ 4 ಲಕ್ಷ ಮಕ್ಕಳಿಗೆ ಪ್ರತಿಜ್ಞಾವಿಧಿ ಬೋಧಿಸಲಾಗಿದೆ. ಡ್ರಗ್ ಅನ್ನುವುದು ಕೊಲೆಗಿಂತ ಹೆಚ್ಚು ಹಿಂಸಾತ್ಮಕವಾಗಿದೆ. ಹೀಗಾಗಿ ದೇಶವನ್ನು ವ್ಯಸನಮುಕ್ತವನ್ನಾಗಿ ಮಾಡಬೇಕು ಎಂದರು.

ಡಿವೈಎಸ್ಪಿ ಗಜಾನನ ಸುತಾರ ಪ್ರತಿಜ್ಞಾವಿಧಿ ಬೋಧಿಸಿದರು. ವಿದ್ಯಾಥಿಗಳು ಪ್ರತಿಜ್ಞಾವಿಧಿಯಲ್ಲಿ ಮಾದಕ ದ್ರವ್ಯ ವ್ಯಸನ ಮುಕ್ತ ರಾಷ್ಟ್ರ ನಿರ್ಮಾಣ ಮಾಡಲು ನಾವು ಗಾಂಜಾ, ಅಫೀಮದಂತಹ ಮಾದಕ ದ್ರವ್ಯಗಳನ್ನು ಸೇವಿಸುವುದಿಲ್ಲ. ಇತರರು ಸೇವಿಸದಂತೆ ಶ್ರಮಿಸುತ್ತೇವೆ ಎಂದು, ಅಕ್ರಮ ಮಾದಕ ದ್ರವ್ಯಗಳ ಬಗ್ಗೆ ಮಾಹಿತಿ ಬಂದಲ್ಲಿ ಪೊಲೀಸ್ ಸಹಾಯವಾಣಿ 112 ಗೆ ಕರೆ ಮಾಡುವ ಮೂಲಕ ಮಾದಕ ದ್ರವ್ಯ ವ್ಯಸನ ಮುಕ್ತ ರಾಷ್ಟ್ರವನ್ನಾಗಿ ಮಾಡಲು ಪಣತೊಡುತ್ತೇವೆ ಎಂದು ಪ್ರತಿಜ್ಞೆ ಗೈಯಲಾಯಿತು.

ಕಾರ್ಯಕ್ರಮದಲ್ಲಿ ನಗರದ ಸಿಪಿಐ ಗುರುನಾಥ ಚವ್ಹಾಣ, ಬಿ.ವಿ.ವಿ.ಸಂಘದ ಬಿಎಚ್‌ಆರ್‌ಡಿ ನಿರ್ದೇಶಕ ಸಿದ್ದರಾಮ ಮನಹಳ್ಳಿ ಇದ್ದರು. ಕಲಾ ಮಹಾವಿದ್ಯಾಲಯದ ಪ್ರಾಚಾರ್ಯ ಡಾ.ಎಸ್.ಆರ್. ಮುಗನೂರಮಠ ಸ್ವಾಗತಿಸಿದರು. ವಾಣಿಜ್ಯ ಮಹಾವಿದ್ಯಾಲಯ ಪ್ರಾಚಾರ್ಯ ಡಾ. ಜಗನ್ನಾಥ ಚವ್ಹಾಣ ವಂದಿಸಿದರು. ಡಾ.ಎಸ್.ಡಿ ಕೆಂಗಲಗುತ್ತಿ ನಿರೂಪಿಸಿದರು. ಅಕ್ಕಮಹಾದೇವಿ ಮಹಿಳಾ ಕಾಲೇಜು, ವಿಜ್ಞಾನ ಮಹಾವಿದ್ಯಾಲಯ, ಪಿಯು ಕಾಲೇಜು, ಪ್ರೌಢ ಹಾಗೂ ಪ್ರಾಥಮಿಕ ಶಾಲೆಗಳ ಪ್ರಾಚಾರ್ಯರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದರು.

# ಪೊಲೀಸನಿಂದ ಫೋನ್ ನಲ್ಲಿ ಅವಾಚ್ಯ ಬೈಗುಳ; ಕ್ರಮ ಕೈಗೊಳ್ಳಲು ಎಸ್.ಪಿ. ಗೆ ಮನವಿ

ಯಾದಗಿರಿ:ಜೂ.26:ಶೋರಾಪೂರ ಪೋಲಿಸ್ ಠಾಣೆಯಲ್ಲಿ ಪೇದೆಯಾಗಿ ಕಾರ್ಯ ನಿರ್ವಹಿಸುತ್ತಿರುವ ಭಾಗಪ್ಪ ತಂದೆ ರಾಮಣ್ಣ ಇವರು ನನಗೆ ಅದಕ್ಕೆ ಶಬ್ದಗಳಿಂದ ಬೈದು ಜೀವ ಬೇದರಿಕೆ ಹಾಕಿದ್ದು ಅವರ ವಿರುದ್ಧ ಸೂಕ್ತ ಕಾನೂನು ಕ್ರಮ ಜರುಗಿಸುವಂತೆ ಶಹಾಪೂರದ ಖಾಸಿಂ ಪಟೇಲ್ ತಂದೆ ಚಾಂದ ಪಟೇಲ್ ದೂರು ಸಲ್ಲಿಸಿದ್ದಾರೆ.

ಈ ಕುರಿತು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಮನವಿ ಸಲ್ಲಿಸಿ, ದಿ:20–6–2025ರಂದು ರಾತ್ರಿ 12 ಗಂಟೆ ಸುಮಾರಿಗೆ ನಾನು ಮನೆಯಲ್ಲಿ ಇದ್ದಾಗ ನನ್ನ ಗೆಳೆಯನಾದ ಪ್ರಭು ಇವರ ವಾಹನ ಸಂಖ್ಯೆ: ಕೆಎ 33 ಬಿ. 3579 ವಾಹನವನ್ನು ನಾನು ನಿರ್ವಹಿಸುತ್ತಿದ್ದೆನು. ಇದನ್ನು ಅಂದು ರಾತ್ರಿ ಕರ್ನಾಳ ಚೆಕ್ ಪೋಸ್ಟ್ ನಲ್ಲಿ ಪೊಲೀಸರು ತಡೆಹಿಡಿದಿದ್ದರು.

ಇದನ್ನು ಕೇಳಲು ನನ್ನ ಮೊಬೈಲ್ ಸಂಖ್ಯೆ:– 9980376478 ಯಿಂದ ಭಾಗಪ್ಪ ಪೊಲೀಸದ್ ಇವರ ಮೊಬೈಲ ಸಂಖ್ಯೆ:– 9844933840ಕ್ಕೆ ಮಾಡನಾಡಿದಾಗ ಸದರಿ ಭಾಗಪ್ಪನವರು ನನಗೆ ಏಕಾ ಏಕಿಯಾಗಿ ಅವಾಚ್ಯ ಶಬ್ದಗಳಿಂದ ಬೈದು ಜೀವ ಬೇದರಿಕೆ ಹಾಕಿರುತ್ತಾರೆ.

ದೂರನ್ನು ಸಲ್ಲಿಸುತ್ತಿದ್ದು, ಸದರಿ ಭಾಗಪ್ಪನವರು ನನಗೆ ಅವಾಚ್ಯ ಶಬ್ದಗಳಿಂದ ಬೈದ ಮೊಬೈಲ ರಿರ್ಕಾಡಿಂಗ ಸಹ ಪೆನ್ ಡ್ರೈವನಲ್ಲಿ ಹಾಕಿ ಸಲ್ಲಿಸಿದ್ದಾಗಿ ತಿಳಿಸಿದ್ದಾರೆ.

ಅವಾಚ್ಯ ನಿಂದಿಸಿದ ಪೊಲೀಸ ಪೇದೆ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ಅವರು ಒತ್ತಾಯಿಸಿ ಮನವಿ ಸಲ್ಲಿಸಿದ್ದಾರೆ.

# ಚಿಗುರು ಕಾರ್ಯಕ್ರಮ ಆಯೋಜನೆಗೆ ಅರ್ಜಿ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.26–ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಪ್ರಸಕ್ತ ಸಾಲಿನಲ್ಲಿ ಚಿಗುರು, ಯುವ ಸೌರಭ, ಸಾಂಸ್ಕೃತಿಕ ಸೌರಭ ಹಾಗೂ ಹಾಡಿರೆ ರಾಗಗಳ, ತೂಗಿರೆ ದೀಪಗಳ ಕಾರ್ಯಕ್ರಮಗಳಲ್ಲಿ ಭಾಗವಹಿಸಲು ಇಚ್ಚಿಸುವ ಕಲಾವಿದರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಇಲಾಖೆ ವತಿಯಿಂದ ಆಯೋಜಿಸಲಾಗುವ ಚಿಗರು ಕಾರ್ಯಕ್ರಮಕ್ಕೆ 6 ರಿಂದ 14 ವರ್ಷ ವಯೋಮಾನದ ಮಕ್ಕಳು ಹಾಗೂ ಯುವ ಸೌರಭ ಕಾರ್ಯಕ್ರಮಕ್ಕೆ 16 ರಿಂದ 30 ವರ್ಷದೊಳಗಿನ ಪ್ರತಿಭಾವಂತ ಯುವ ಕಲಾವಿದರು ಮತ್ತು ಸಾಂಸ್ಕೃತಿಕ ಸೌರಭ ಕಾರ್ಯಕ್ರಮಕ್ಕೆ ಹಿರಿಯ ಕಲಾವಿದರಿಂದ ಹಾಗೂ ವಿಶೇಷ ಘಟಕ ಯೋಜನೆಯಡಿ ಏರ್ಪಡಿಸುವ ಹಾಡಿರೆ ರಾಗಗಳ, ತೂಗಿರೇ ದೀಪಗಳ ಕಾರ್ಯಕ್ರಮಕ್ಕೆ ಅರ್ಹ ಆಸಕ್ತ ಕಲಾವಿದರು ಜುಲೈ 8 ರೊಳಗಾಗಿ ಸಹಾಯಕ ನಿರ್ದೇಶಕರ ಕಾರ್ಯಾಲಯ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ನವನಗರ, ಬಾಗಲಕೋಟೆ ಇವರಿಗೆ ಅರ್ಜಿಯನ್ನು ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ.08354–200500ಗೆ ಸಂಪರ್ಕಿಸುವಂತೆ ಇಲಾಖೆಯ ಸಹಾಯಕ ನಿರ್ದೇಶಕ ಕರ್ಣಕುಮಾರ ಜೈನಾಪೂರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಕ್ಕಳಿಗೆ ಕಂಪ್ಯೂಟರ ಜ್ಞಾನದ ಅವಶ್ಯಕತೆಯಿದೆ:ಶಾಸಕ ಮೇಟಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.26– ಇಂದಿನ ತಂತ್ರಜ್ಞಾನದ ಯುಗದಲ್ಲಿ ಪ್ರತಿಯೊಬ್ಬ ಮಕ್ಕಳಿಗೂ ಕಂಪ್ಯೂಟರ್ ಜ್ಞಾನದ ಅವಶ್ಯಕತೆಯಿದೆ ಎಂದು ಶಾಸಕ ಎಚ್.ವಾಯ್. ಮೇಟಿ ಹೇಳಿದರು.

ತಾಲೂಕಿನ ಕಿರಸೂರ ಗ್ರಾಮದ ಸರ್ಕಾರಿ ಮಾದರಿ ಪ್ರಾಥಮಿಕ ಶಾಲೆಯಲ್ಲಿ ಬುಧವಾರ ಗಣಕಯಂತ್ರ ಕೊಠಡಿ ಉದ್ಘಾಟನೆ ನೆರವೇರಿಸಿ ಮಾತನಾಡಿದ ಅವರು, ಪ್ರಾಥಮಿಕ ಹಂತದಲ್ಲಿಯೇ ಮಕ್ಕಳಿಗೆ ಕಂಪ್ಯೂಟರ ಜ್ಞಾನದ ತಿಳುವಳಿಕೆ ಹಾಗೂ ಕಂಪ್ಯೂಟರ ಬಳಕೆಯ ವಿಧಾನವನ್ನು ತಿಳಿಸುವ ಕಾರ್ಯವನ್ನು ಶಿಕ್ಷಕರು ಮಾಡಬೇಕು ಎಂದರು.

ವಿದ್ಯಾರ್ಥಿಗಳು ತಮ್ಮ ಕಲಿಕಾ ಅವಧಿಯ ಜೊತೆಗೆ ಕಂಪ್ಯೂಟರ್ ಬಗ್ಗೆ ತಿಳುವಳಿಕೆ ಪಡೆಯಬೇಕು. ಅದನ್ನು ಸದ್ಬಳಕೆ ಮಾಡಿಕೊಂಡು ಹೆಚ್ಚಿನ ಜ್ಞಾನ ಸಂಪಾದಿಸಿಕೊಳ್ಳಬೇಕು ಎಂದು ಶಾಸಕರು ಮಕ್ಕಳಿಗೆ ಸಲಹೆ ನೀಡಿದರಲ್ಲದೇ, ಶಿಥಿಲಾವಸ್ಥೆಯಲ್ಲಿರುವ ಶಾಲಾ ಕೊಠಡಿಗಳನ್ನು ಶೀಘ್ರದಲ್ಲೇ ಸುಸಜ್ಜಿತವಾಗಿ ನವೀಕರಿಸಲಾಗುವುದು. ಸಮುದಾಯ ಭವನವನ್ನು ಸಹ ದುರಸ್ಥಿಗೊಳಿಸಲಾಗುವುದು ಹಾಗೂ ಕಿರಸೂರ ಗ್ರಾಮದ ಸಮಗ್ರ ಅಭಿವೃದ್ಧಿಗೆ ಪ್ರಾಮಾಣಿಕವಾಗಿ ಶ್ರಮಿಸುವುದಾಗಿ ಭರವಸೆ ನೀಡಿದರು.

ಕಾರ್ಯಕ್ರಮದಲ್ಲಿ ಶಿಕ್ಷಣ ಇಲಾಖೆಯ ಕ್ಷೇತ್ರ ಶಿಕ್ಷಣಾಧಿಕಾರಿ ಎಂ.ಎಸ್.ಬಡದಾನಿ, ಎಸ್.ಎನ್.ರಾಂಪೂರ, ಕಲ್ಲು ಹಳ್ಳೂರ, ಶಿವಪುತ್ರಪ್ಪ ದೊಡಮನಿ, ಸಿ.ಬಿ.ಕಲ್ಲೋಲ, ಗ್ರಾಮ ಪಂಚಾಯತಿ ಪಿಡಿಓ ಶಶಿಕಲಾ ಕೊಡತೆ, ಕಾರ್ಯದರ್ಶಿ ಪುಟ್ಟು ಲಮಾಣಿ ಸೇರಿದಂತೆ ಅನೇಕ ಗಣ್ಯರು ಇದ್ದರು.

# ಔರಾದ: ಪ್ರಧಾನಮಂತ್ರಿ ಫಸಲ್ ಬಿಮಾ (ವಿಮಾ) ಯೋಜನೆಯಡಿ ನೋಂದಣಿ ಮಾಡಿಸಲು ರೈತಬಾಂಧವರಲ್ಲಿ ಮನವಿ

ಬೀದರ. ಜೂ. 26 : ಅತಿವೃಷ್ಟಿ, ಅನಾವೃಷ್ಟಿ, ಅಕಾಲಿಕ ಮಳೆ ಮುಂತಾದ ಪ್ರಕೃತಿ ವಿಕೋಪಗಳು ಸೇರಿದಂತೆ ಹಲವಾರು ಕಾರಣಗಳಿಂದ ಬೆಳೆ ನಷ್ಟ ಉಂಟಾದಾಗ ರೈತರ ನೆರವಿಗೆ ಬರಲು ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಬಿಮಾ (ವಿಮಾ) ಯೋಜನೆಯನ್ನು 2025–26ನೇ ಸಾಲಿನಲ್ಲಿ ಸಹ ಜಾರಿಗೆ ತರಲು ಉದ್ದೇಶಿಸಲಾಗಿದೆ. ಈ ಯೋಜನೆಗೆ ಒಳಪಡುವ ವಿವಿಧ ಬೆಳೆಗಳಿಗೆ ಸಾಲ ಪಡೆಯುವ ಮತ್ತು ಬೆಳೆ ಸಾಲ ಪಡೆಯದ ರೈತರು ಬ್ಯಾಂಕುಗಳಿಗೆ ಘೋಷಣೆಗಳನ್ನು ಸಲ್ಲಿಸಬಹುದಾಗಿದೆ ಎಂದು ಔರಾದ (ಬಿ) ಸಹಾಯಕ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಯುನಿವರ್ಸಲ್ ಸೋಂಪೊ ಜನರಲ್ ಇನ್‌ಶ್ಯೂರೆನ್ಸ್ ಕಂಪನಿಯನ್ನು ನಿಗದಿಪಡಿಸಲಾಗಿದೆ. ತೋಗರಿ (ಮ.ಆ), ಸೋಯಾಅವರೆ (ಮ.ಆ), ಸೋಯಾ ಅವರೆ (ನೀ), ಉದ್ದು (ಮ.ಆ), ಹೆಸರು (ಮ.ಆ), ನೆಲಗಡಲೆ (ಮ.ಆ.), ಮುಸುಕಿನ ಜೋಳ (ಮ.ಆ.), ಭತ್ತ (ಮ.ಆ), ಭತ್ತ (ನೀ), ಸಜ್ಜೆ (ಮ.ಆ.), ಎಳ್ಳು (ಮ.ಆ.), ಜೋಳ (ಮ.ಆ), ಹತ್ತಿ (ಮ.ಆ) ಬೆಳೆಗಳಿಗೆ ವಿಮಾ ಕಂತು ತುಂಬಲು ದಿನಾಂಕ: 31–07–2025 ಹಾಗೂ ಸೂರ್ಯಕಾಂತಿ (ಮ.ಆ.) ಬೆಳೆಗೆ ವಿಮಾ ಕಂತು ತುಂಬಲು ದಿನಾಂಕ: 16–08–2025 ಕೊನೆಯ ದಿನಾಂಕವಾಗಿರುತ್ತದೆ.

ಬೆಳೆ ಸಾಲ ಪಡೆಯದ ರೈತರು ನೋಂದಣಿಗಾಗಿ ಅರ್ಜಿಯೊಂದಿಗೆ ಭೂಮಿ ಹೊಂದಿರುವುದಕ್ಕೆ ದಾಖಲೆಗಳಾದ ಪಹಣಿ, ಆಧಾರ ಸಂ–ಖ್ಯೆ ಜೋಡಿಸಿದ ಬ್ಯಾಂಕ್ ಖಾತೆ/ಪಾಸ್ ಬುಕ್ ಮತ್ತು ಆಧಾರ ಸಂಖ್ಯೆಯೊಂದಿಗೆ ಡಿಸಿಸಿ/ಇತರೆ ಬ್ಯಾಂಕ್, ಗ್ರಾಮ–ಒನ್ ಮತ್ತು ಸಿ.ಎಸ್.ಸಿ.ಕೇಂದ್ರಗಳಿಗೆ ಸಂಪರ್ಕಿಸಬೇಕು ಹಾಗೂ ರೈತರು ನೋಂದಣಿಗಾಗಿ ಕಡ್ಡಾಯವಾಗಿ ಈಖಗಖಖಿಖ ಖಳ(ಈಖಳ) ಹೊಂದಿರಬೇಕು ಎಂದು ಅವರು ತಿಳಿಸಿದ್ದಾರೆ.

# ಜು.೮ ರಂದು ದಿಶಾ ಸಮಿತಿ ಸಭೆ

ಬೀದರ. ಜೂ. 26 : ಬೀದರ ಲೋಕಸಭಾ ಸಂಸದರು ಹಾಗೂ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಮೇಲುಸ್ತುವಾರಿ ಸಮಿತಿಯ ಅಧ್ಯಕ್ಷರ ಅಧ್ಯಕ್ಷತೆಯಲ್ಲಿ ದಿನಾಂಕ: 08–07–2025 ರಂದು ಬೆಳಿಗ್ಗೆ 11 ಗಂ–ಟೆಗೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ದಿಶಾ ಸಮಿತಿ ಸಭೆ ನಿಗದಿಪಡಿಸಲಾಗಿದೆ. ಕಾರಣ ಸದರಿ ಸಭೆಗೆ ಜಿಲ್ಲಾ ಮಟ್ಟದ ಅಧಿಕಾರಿಗಳು ತಮ್ಮ ಇಲಾಖೆಯ ಪ್ರಗತಿ ವರದಿಯೊಂದಿಗೆ ತಪ್ಪದೇ ಸಭೆಗೆ ಹಾಜರಾಗಬೇಕೆಂದು ಬೀದರ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೆಕ್ಕೆಜೋಳ ಬೆಳೆಯಲ್ಲಿ ಲದ್ದಿ ಹುಳು ನಿರ್ವಹಣೆಗೆ ರೈತರಿಗೆ ಕೃಷಿ ಇಲಾಖೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ,ಜೂ.26–ಜಿಲ್ಲೆಯಲ್ಲಿ ಅಲ್ಲಲ್ಲಿ ಮೆಕ್ಕೆಜೋಳ ಬೆಳೆಯಲ್ಲಿ ಲದ್ದಿ ಹುಳುವಿನ (ಕಂಬಳಿ ಹುಳ) ಬಾಧೆ ಕಂಡುಬಂದಿದ್ದು, ಲದ್ದಿ ಹುಳು ನಿರ್ವಹಣೆಗೆ ಈ ಕೆಳಕಂಡ ನಿರ್ವಹಣಾ ಕ್ರಮಗಳನ್ನು ಅನುಸರಿಸುವಂತೆ ಜಂಟಿ ಕೃಷಿ ನಿರ್ದೇಶಕ ಲಕ್ಷ್ಮಣ ಕಳ್ಳೆನ್ನವರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಬಿತ್ತಿದ 15 ದಿವಸಗಳ ನಂತರ ಹೊಲದಲ್ಲಿ ಎಕರೆಗೆ 12 ರಂತೆ ಮೋಹಕ ಬಲೆಗಳನ್ನು ಹಾಕಿ ಒಂದು ಬಲೆಯಲ್ಲಿ 4 ಕ್ಕಿಂತ ಹೆಚ್ಚು ಗಂಡು ಪತಂಗಗಳು ಬಿದ್ದಲ್ಲಿ ಸಿಂಪರಣಾ ಕ್ರಮಗಳನ್ನು ತೆಗೆದುಕೊಳ್ಳಬೇಕು. ಮೊದಲನೆ ಸಿಂಪರಣೆಯಾಗಿ ಬೇವಿನ ಕಷಾಯ (ಪ್ರತಿ ಲೀಟರ್ ನೀರಿಗೆ, 5 ಮಿಲಿ ಲೀಟರ) ಸಿಂಪರಣೆ ಮಾಡುವುದರಿಂದ ಪತಂಗವು ಮೊಟ್ಟೆ ಇಡುವ ಪ್ರಮಾಣ ಸ್ವಲ್ಪ ಕಡಿಮೆಯಾಗುತ್ತದೆ.

# ಮಾದಕ ವಸ್ತುಗಳ ಸೇವನೆಯಿಂದ ದೂರವಿರಿ:ಡಾ.ಬಂಟನೂರ



ತಾಳಿಕೋಟಿ:ಜೂ.26:ವಿದ್ಯಾರ್ಥಿ ಜೀವನವು ಭವಿಷ್ಯದ ಬದುಕನ್ನು ರೂಪಿಸಿಕೊಳ್ಳುವ ಮಹತ್ವದ ಘಟ್ಟವಾಗಿದೆ. ಈ ಹಂತದಲ್ಲಿ ಮಾದಕವಸ್ತು ಸೇರಿದಂತೆ ಆರೋಗ್ಯ ಮತ್ತು ಭವಿಷ್ಯಕ್ಕೆ ಮಾರಕವಾಗುವಂತಹ ಯಾವುದೇ ಚಟಗಳ ಆಕರ್ಷಣೆಗೆ ಒಳಗಾಗದೆ ದೂರವಿರಬೇಕು' ಎಂದು ಪ್ರಾಚಾರ್ಯ ಡಾ. ಆರ್.ಎಂ.ಬಂಟನೂರ ಸಲಹೆ ನೀಡಿದರು.

ಶ್ರೀ ಖಾಸ್ಗತೇಶ್ವರ ಶಿಕ್ಷಣ ಮಹಾವಿದ್ಯಾಲಯದ ಐಕ್ಯೂಎಸಿ. ಸಹಯೋಗದಲ್ಲಿ ಗುರುವಾರ ಹಮ್ಮಿಕೊಂಡಿದ್ದ ಅಂತರರಾಷ್ಟ್ರೀಯ ಮಾದಕ ವಸ್ತುಗಳ ಬಳಕೆ ವಿರೋಧಿ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ವಿಶ್ವದಾದ್ಯಂತ ಈ ದುಶ್ಚಟಗಳಿಗೆ ಇತ್ತೀಚಿನ ವರ್ಷಗಳಲ್ಲಿ ಮಕ್ಕಳು ಮತ್ತು ಯುವಕರು ಹೆಚ್ಚು ಬಲಿಯಾಗುತ್ತಿದ್ದಾರೆ. ಮಾದಕ ವಸ್ತುಗಳ ಮಾರಾಟ ಹಾಗೂ ಸಾಗಾಣೆ ಕಾನೂನ ಬಾಹಿರ ಎಂದು ಗೊತ್ತಿದ್ದರೂ ಇದರ ದಂಧೆ ಎಗ್ಗಿಲ್ಲದೆ ನಡೆಯುತ್ತಿದೆ. ಡ್ರಗ್ ಮಾಫಿಯಾ ಹತೋಟಿಗೆ ತರಲು ವಿಶ್ವದೆಲ್ಲೆಡೆ ಕಾನೂನು ಪ್ರಯತ್ನಗಳು ನಡೆಯುತ್ತಿವೆ. ಆದರೆ ಇದನ್ನು ಬುಡ ಸಮೇತ ಕಿತ್ತು ಹಾಕಲು ಸಾಧ್ಯವಾಗಿಲ್ಲ ಎಂದು ಹೇಳಿದರು.

ಪ್ರಶಿಕ್ಷಣಾರ್ಥಿ ಶಿವರಾಜ ಉಪ್ಪಾರ ಮಾತನಾಡಿ ತೀವ್ರ ಕುತೂಹಲ, ಸ್ನೇಹಿತರ ಒತ್ತಾಯ,ಗೆಳೆಯರ ಗುಂಪಿನಲ್ಲಿ ಹೊಂದಾಗಬೇಕೆಂಬ ಭಾವನೆ, ದೈಹಿಕ ಮತ್ತು ಮಾನಸಿಕ ಒತ್ತಡ ಕಡಿಮೆ ಮಾಡಿಕೊಳ್ಳಲು, ತಾತ್ಕಾಲಿಕವಾಗಿ ಸಮಸ್ಯೆಯನ್ನು ಮರೆಯಲು ಹೀಗೆ ಅನೇಕ ಕಾರಣಗಳಿಗಾಗಿ ಮಾದಕ ವಸ್ತುಗಳ ಸೇವನೆಯನ್ನು ಯುವಜನರು ಪ್ರಾರಂಭಿಸುತ್ತಾರೆ. ಮುಂದೆ ಅದು ವ್ಯಸನವಾಗಿ ಅನೇಕ ರೀತಿಯ ಸಮಸ್ಯೆಗಳಿಗೆ ಕಾರಣವಾಗುತ್ತದೆ ಎಂದರು.

ಇನ್ನೋರ್ವ ಪ್ರಶಿಕ್ಷಣಾರ್ಥಿ ಸಂತೋಷ ಬಿರಾದಾರ ಮಾತನಾಡುತ್ತಾ ವಿದ್ಯಾರ್ಥಿಗಳು ದುರ್ಜನರು ಹಾಗೂ ದುಶ್ಚಟಗಳ ಸಹವಾಸದಿಂದ ದೂರವಿರಬೇಕು. ಒಳ್ಳೆಯ ಅಭಿರುಚಿ ಹೊಂದಿರುವ ಸ್ನೇಹಿತರು ಹಾಗೂ ಗುರುಗಳ ಒಡನಾಟ ಇಟ್ಟುಕೊಂಡು ಉತ್ತಮ ಅಭ್ಯಾಸಗಳ ಕಡೆಗೆ ಗಮನ ಕೊಡಬೇಕು. ಮನಸ್ಸನ್ನು ಯಾವಾಗಲು ಶುದ್ಧವಾಗಿ ಇಟ್ಟುಕೊಳ್ಳಲು ಪ್ರಯತ್ನಿಸಬೇಕು. ಇದರಿಂದ ಶೈಕ್ಷಣಿಕವಾಗಿ ಸಾಧನೆ ಮಾಡಲು ಸಾಧ್ಯ ಎಂದು ಹೇಳಿದರು.

ಅಂತರರಾಷ್ಟ್ರೀಯ ಮಾದಕ ವಸ್ತುಗಳ ಬಳಕೆ ವಿರೋಧಿ ದಿನಾಚರಣೆ ಅಂಗವಾಗಿ. ಪ್ರಶಿಕ್ಷಣಾರ್ಥಿಗಳಿಗೆ ಪ್ರತಿಜ್ಞೆಯನ್ನು ಬೋಧಿಸಲಾಯಿತು.ಕಾರ್ಯಕ್ರಮದಲ್ಲಿ ಐಕ್ಯೂಎಸಿ ಸಂಯೋಜಕ ಯು.ಎನ್.ಮಂಗೊಂಡ, ಕಾಲೇಜಿನ ಸರ್ವ ಸಿಬ್ಬಂದಿ ವರ್ಗ ಪ್ರಶಿಕ್ಷಣಾರ್ಥಿಗಳು ಹಾಜರಿದ್ದರು.ಕಾರ್ಯಕ್ರಮದಲ್ಲಿ ಪ್ರಶಿಕ್ಷಣಾರ್ಥಿ ಪಾರ್ವತಿ ಪ್ರಾರ್ಥಿಸಿದರು. ಕುಮಾರಿ ಶ್ವೇತಾ ಸ್ವಾಗತಿಸಿದರು.ಕುಮಾರಿ ಅನ್ನಪೂರ್ಣ ವಂದಿಸಿದರು. ಕುಮಾರಿ ರೇಷ್ಮಾ ಚಲವಾದಿ ನಿರೂಪಿಸಿದರು.

ಮಾದಕದ್ರವ್ಯ ಸೇವನೆಯಿಂದ ವ್ಯಕ್ತಿಯ ದೈಹಿಕ ಮತ್ತು ಮಾನಸಿಕ ಆರೋಗ್ಯದ ಮೇಲೆ ಗಂಭೀರ ಪರಿಣಾಮ ಬೀರುತ್ತದೆ. ಇದ–ರಿಂದಾಗಿ ವ್ಯಕ್ತಿ ತಾನು ಏನು ಮಾಡುತ್ತಿದ್ದಾನೆ ಎಂಬುದರ ಅರಿವು ಕೂಡ ಇರುವುದಿಲ್ಲ. ಇಂತಹ ನಶೆಯಲ್ಲಿ ಇರುವವರು ಕಳ್ಳತನ ಕೊಲೆ ದರೋಡೆ ಲೈಂಗಿಕ ಕಿರುಕುಳ ಅಂತಹ ಅಪರಾಧ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವರು, ಆದ್ದ–ರಿಂದ ಕೆಟ್ಟ ನಶೆಗಳಿಂದ ದೂರ ಸರಿದು ಉತ್ತಮ ಜೀವನ ಕಟ್ಟಿಕೊಳ್ಳಬೇಕು.ಡಾ.ಆರ್.ಎಂ. ಬಂಟನೂರ ಬಿಎಡ್ ಕಾಲೇಜ ಪ್ರಾಚಾರ್ಯ.

# ಚಟ್ನಳ್ಳಿ ಗ್ರಾಮದಲ್ಲಿ ಸಿಪಿಐಎಂ ಪಕ್ಷದ ಪ್ರಚಾರ ಅಭಿಯಾನ



ಶಹಾಪೂರ:ಜೂ.26:ರೈತರ ಸಾಲ ಸಂಪೂರ್ಣ ಮನ್ನಾ ಮಾಡಬೇಕು ಎಂದು ದಿನಾಂಕ 20.07.2025 ರಂದು ರೈತರಿಗೆ ಮೋಸ ಮಾಡುತ್ತಿರುವ

ಬೀಜ, ನಕಲಿ ಗೊಬ್ಬರ ನಕಲಿ ಕ್ರಿಮಿ ನಾಶಕ ಮಾರಾಟಗಾರರ ಮೇಲೆ ಸೂಕ್ತ ಕಾನೂನು ಕ್ರಮ ಜರುಗಿಸಬೇಕು. ಮೋಸ ಮಾಡುವ ವ್ಯಾಪಾರಸ್ಥರಿಂದ ರೈತರು ಕೂಲಿಕಾರರು ಎಚ್ಚರಿಕೆಯಿಂದ ಇರಬೇಕು ಎಂದು ಹೇಳಿದರು. ಮಹಾತ್ಮ ಗಾಂಧಿ ನೆರೆಗ ಯೋಜನೆಯಲ್ಲಿ 200 ನೂರು ದಿನ ಕೆಲಸ ಕೊಡಬೇಕು ಒಂದು ದಿನಕ್ಕೆ 600 ಕೂಲಿ ನೀಡಬೇಕು.

ಮಹಾತ್ಮ ಗಾಂಧಿ ನೆರಗ ಯೋಜನೆಯಲ್ಲಿ ರೈತರ ಹೊಲಗಳಿಗೆ ಬೀಜ ನಾಟಿ ಮಾಡುವುದಕ್ಕೆ ಮತ್ತು ಕಳೆ ತೆಗೆಯುವುದಕ್ಕೆ ಕಟಾವು ಮಾಡುವುದಕ್ಕೆ. ರೈತರ ವ್ಯವಸಾಯಕ್ಕೆ ಅನುಕೂಲವಾಗುವ ರೀತಿ ಮಹಾತ್ಮ ಗಾಂಧಿ ಉದ್ಯೋಗ ಖಾತ್ರಿಯಲ್ಲಿ ಕಾನೂನು ಆಗಬೇಕು. ಮುಖಂಡರು ಭಾಗವಹಿಸಿ ರೈತ ಕೂಲಿಕಾರರಗೆ ಜಾಗೃತಿಯನ್ನು ಮೂಡಿಸಿದರು ಈ ಸಂದರ್ಭದಲ್ಲಿ ಸಿಪಿಐಎಂ ಪಕ್ಷದ ಜಿಲ್ಲಾ ಕಾರ್ಯದರ್ಶಿಗಳಾದ ಚೆನ್ನಪ್ಪ ಆನೆಗುಂದಿ ಜಿಲ್ಲಾ ಮುಖಂಡರಾದ ಸಿಪಿಐಎಂ ಪಕ್ಷದ ಜಿಲ್ಲಾ ಸಮಿತಿ ಸದಸ್ಯರಾದ ಭೀಮರಾಯ

ಪೂಜಾರಿ. ಕರ್ನಾಟಕ ಪ್ರಾಂತ ರೈತ ಸಂಘದ ತಾಲೂಕ ಅಧ್ಯಕ್ಷರಾದ ಭೀಮಣ್ಣ ತಪ್ಪೆದಾರ್. ಚಟ್ನಳ್ಳಿ ಗ್ರಾಮದ ರೈತ ಮುಖಂಡರಾದ ಮಾಳಪ್ಪ ಪೂಜಾರಿ. ರೈತ ಯುವ ಮುಖಂಡರಾದ. ವಾಸುದೇವ್. ಗ್ರಾಮದ ರೈತ ಕೂಲಿಕಾರ ಮಹಿಳೆಯರು ಭಾಗವಹಿಸಿದರು.

# ಮಾದಕ ವಸ್ತುಗಳ ಸೇವನೆಯಿಂದ ದೂರವಿರಿ:ಪಿಎಸ್ಐ ಮಂಟೂರ



ಕಲಕೇರಿ:ಜೂ.26: ಮಾದಕ ವಸ್ತುಗಳ ಸೇವನೆಗೆ ಒಂದು ಬಾರಿ ಅಂಟಿಕೊಂಡರೆ ಅದ–ರಿಂದ ಸರಳವಾಗಿ ಹೊರಬರಲು ಸಾಧ್ಯವಿಲ್ಲ ನಮ್ಮ ಯುವಕರು ಅದರಲ್ಲೂ ವಿಸೇಷವಾಗಿ ವಿಧ್ಯಾರ್ಥಿಗಳು ಇದರಿಂದ ದೂರ ಇರಲು ಪ್ರಯತ್ನಿಸಬೇಕು ಎಂದು ಕಲಕೇರಿ ಪಿಎಸ್ಐ ಸುರೇಶ ಮಂಟೂರ ಹೆಳಿದರು.

ಕಲಕೇರಿ ಗ್ರಾಮದ ಮಲ್ಲಿಕಾರ್ಜುನ ವಿಧ್ಯಾವರ್ಧಕ ಸಂಘದ ಬಸವೇಶ್ವರ ಪದವಿ ಪೂರ್ವ ಕಾಲೇಜು ಹಾಗೂ ಕಲಕೇರಿ ಪೋಲಿಸ್ ಠಾಣೆಯ ಸಹಯೋಗದಲ್ಲಿ ಹಮ್ಮಿಕೊಂಡ ಮಾದಕ ವಸ್ತುಗಳ ನಿಷೇದ ಮತ್ತು ವಿಧ್ಯಾರ್ಥಿಗಳಿಗೆ ಅರೀವು ಮೂಡಿಸುವ ಕಾರ್ಯಕ್ರಮಕ್ಕೆ ಚಾಲನೆ ನಿಡಿ ಅವರು ಮಾತನಾಡಿದರು.

ಜಾಗತಿಕ ಮಟ್ಟದಲ್ಲಿ ಪ್ರತಿವರ್ಷ ಜೂನ್ 26 ರಂದು ಮಾದಕ ವಸ್ತುಗಳ ದುರ್ಭಳಕೆ ಮತ್ತು ಅದರ ಅಕ್ರಮ ಕಳ್ಳಸಾಗಾಣಿಕೆಯನ್ನು ತಡೆಯಲು ಅಂತರಾಷ್ಟ್ರೀಯ ಮಾದಕ ದ್ರವ್ಯ ಮ್ತು ಕಳ್ಳಸಾಗಣೆ ವಿರೋದಿ ದಿನವನ್ನು ಆಚರಿಸಲಾಗುತ್ತಿದ್ದು ಯುವ ಸಮೂಹ,ವಿಧ್ಯಾವಂತರು ಗ್ರಾಮೀಣ ಪ್ರದೇಶದ ಜನತೆಗೆ ಇದರ ಕುರಿತು ಅವರಲ್ಲಿ ಅರಿವೂ ಮೂಡಿಸುವ ಕಾರ್ಯದಲ್ಲಿ ಭಾಗಿಯಾಗಬೇಕು ಎಂದು ಸಲಹೆ ಮಾಡಿದರು.

ಧೈಹಿಕ ಶಿಕ್ಷಣ ಉಪನ್ಯಾಸಕ ಶಾಂತು ಧುರ್ಗಿ, ಇಎಲ್‌ಸಿ ಕ್ಲಬ್ ಸಂಚಾಲಕ ಬಸವರಾಜ್ ಕುಂಬಾರ ಮಾತನಾಡಿ ಇಂದಿನ ಯುವಜನತೆಯು ಮೋಜು ಮಸ್ತಿ, ತಡರಾತ್ರಿಯ ಪಾರ್ಟಿ ಎಂದು ತಮ್ಮ ಜೀವನಶೈಲಿಯನ್ನೆ ಬದಲಾಯಿಸಿಕೊಂಡಿದ್ದಾರೆ, ಇದರಿಂದ ಹದಿಹರೇಯದ ವಯಸ್ಸಿನಲ್ಲಿ ಹಾದಿ ತಪ್ಪುವದು ಸರ್ವೇ ಸಾಮಾನ್ಯವಾಗಿಬಿಟ್ಟಿದೆ ಆದ್ದರಿಂದ ಯುವಕರು ದುಚ್ಚಟಗಳಿಗೆ ದಾಸರಾಗದೆ ತಮ್ಮ ಉಜ್ವಲ ಭವಿಷ್ಯವನ್ನು ನಿರ್ಮಿಸಿಕೊಳ್ಳುತ್ತ ನಿರಂತರ ಪ್ರಯತ್ನಶಿಲರಾಗಬೇಕು ಎಂದು ಅವರು ಹೆಳಿದರು.

ಇದೇ ವೇಳೆ ಕಲಕೇರಿ ಪೋಲಿಸ್ ಠಾಣೆ–ಯ ವತಿಯಿಂದ ಮಾದಕ ವಸ್ತುಗಳಿಂದಾಗುವ ದುಷ್ಪರಿಣಾಮಗಳ ಕುರಿತು ಕಾಲೇಜು ವಿಭಾಗದ ವಿಧ್ಯಾರ್ಥಿಗಳಿಗೆ ಪ್ರಭಂದ ಸ್ಪರ್ಧೆಯನ್ನು ಏರ್ಪಡಿಸಲಾಗಿತ್ತು. ಕಾರ್ಯಕ್ರಮದಲ್ಲಿ ಪ್ರಾಚಾರ್ಯ ಸಿಎಸ್ ಹಿರೇಮಠ,ರವಿಕುಮಾರ ಗುಮಶೇಟ್ಟಿ,ಎಸ್ ಎಸ್ ಧುರ್ಗಿ,ಬಿ ಎಂ ಕುಂಬಾರ,ಜಿ ಜಿ ಮೇಡೆದಾರ,ಗೌಡಪ್ಪಗೌಡ ಹದರಿ,ಶಿವಾನಂದ ಹರಿಜನ್ ಸೇರಿದಂತೆ ಕಲಕೇರಿ ಪೋಲಿಸ್ ಠಾಣೆಯ ಸಿಬ್ಬಂದ್ದಿ ಹಾಜರಿದ್ದರು.

# ದಿಗ್ಗಿ ಅಗಸಿ ರಸ್ತೆಯಲ್ಲಿ ಇಂದಿನಿಂದ ಸಂಚಾರ ಪ್ರಾರಂಭ :ವೆಂಕಟೇಶ್ ಬೋನರ್ ಹರ್ಷ





ಶಹಾಪುರ:ಜೂ.26:ನಗರದ ಕೇಂದ್ರಹೃದಯ ಭಾಗದಲ್ಲಿರುವ ಬಿಗಿಯಾಗಿಸಿ ಎಂಬ ಐತಿಹಾಸಿಕ ಅಗಸಿಯನ್ನು ಹಲವಾರು ವರ್ಷಗಳಿಂದ ಕಟ್ಟಡವು ಸ್ಥಿಲಗೊಂಡಿತು.

ಆ ಕಟ್ಟಡಕ್ಕೆ ಆಯುಕ್ತರು ಪ್ರಾಚ್ಯವಸ್ತು ಸಂಗ್ರಹಾಲಯದ ಪರಂಪರೆ ಇಲಾಖೆ ಮೈಸೂರು ರವರ ನಿರ್ದೇಶನದ ಮೇರೆಗೆ ಹಂಪಿ ಪುರಾತತ್ವ ಇಲಾಖೆಯ ಕಾರ್ಯನಿರ್ವಾಹಕ ಅಭಿಯಂತರರಾದ ಶ್ರೀ ಕುಬೇರಪ್ಪ ಅವರ ಮಾರ್ಗದರ್ಶನದಲ್ಲಿ. ಸ್ಥಳೀಯ ಶಾಸಕರು ಮತ್ತು ಸಚಿವರಾದ ಶ್ರೀ ಶರಣಬಸಪ್ಪಗೌಡ ದರ್ಶನಾಪುರ ಅವರ ವಿಶೇಷ ಅನುದಾನದಲ್ಲಿ ಅವರ ಸತತ ಪರಿಶ್ರಮದಿಂದ ಕರ್ತವ್ಯ ಆಗಿದ್ದ–ರಿಂದ ಕಳೆದ ಒಂದುವರೆ ವರ್ಷದಿಂದ ನನಗುತ್ತಿಗೆ ಬಿದ್ದಿದ್ದ ಶಹಾಪುರ್ ನಗರದ ಪ್ರಮುಖ ರಸ್ತೆಗಳಲ್ಲಿ ಒಂದಾದ ದಿಗ್ಗ ಅಗಸಿ ರಸ್ತೆಯು ಸಾರ್ವಜನಿಕ ಸಂಚಾರಕ್ಕೆ ಮುಕ್ತವಾಗಿದೆ. ಎಂದು ಕರ್ನಾಟಕ ರಕ್ಷಣಾ ವೇದಿಕೆ ಪ್ರವೀಣ್ ಶೆಟ್ಟಿ ಬಣದ ವತಿಯಿಂದ ಹರ್ಷ ವ್ಯಕ್ತಪಡಿಸಲಾಯಿತು ಎಂದು ವೆಂಕಟೇಶ್ ಬೋನೇರ ಕರವೇ ತಾಲೂಕು ಅಧ್ಯಕ್ಷರು ಶಹಪುರ ತಿಳಿಸಿದ್ದಾರೆ.

# ಮಹಿಳಾ ಶೌಚಾಲಯ ಕಟ್ಟಡ ಕಾಮಗಾರಿ ಪೂರ್ಣಗೊಳಿಸಲು ಪುರಸಭೆ ಅಧಿಕಾರಿಗೆ ಮನವಿ



ಲಿಂಗಸುಗೂರು:ಜೂ.26:ಪುರಸಭೆ ವ್ಯಾಪ್ತಿಯಲ್ಲಿ ಬರುವ ಕಸಬಾ ಲಿಂಗಸಗೂರು ವಾರ್ಡ ನಂ.21 ರಲ್ಲಿ ಬರುವ ಮಹಿಳಾ ಶೌಚಾಲಯ 2 ವರ್ಷ ಕಳೆದರೂ ಅರ್ಧಕ್ಕೆ ನಿಂತ ಕಾಮಗಾರಿ ಪೂರ್ಣಗೊಳಿಸಿ ಹಾಗೂ ಸಂಬಂಧಪಟ್ಟ ಅಧಿಕಾರಿಗಳ ಮೇಲೆ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕೆಂದು ಯುವ ನಾಗರೀಕ ವೇದಿಕೆ ಪಧಾದಿಕಾರಿಗಳು ಹಾಗೂ ವಾರ್ಡಿನ ನಾಗರೀಕರು ಪುರಸಭೆ ಅಧ್ಯಕ್ಷರು ಬಾಬು ರೆಡ್ಡಿ ಮೂನ್ನೂರು ಹಾಗೂ ಪುರಸಭೆ ಮುಖ್ಯಾಧಿಕಾರಿ ರವಿ ಸಿರುಗುಪ್ಪಿ ಅವರಿಗೆ ಮನವಿ ಪತ್ರ ಸಲ್ಲಿಸಿ ಒತ್ತಾಯಿಸಿದರು.

ಕಸಬಾ ಲಿಂಗಸಗೂರಿನ 21ನೇ ವಾರ್ಡಿನಲ್ಲಿ ಪುರಸಭೆಗೆ ಬಂದ ಅನುದಾನದಲ್ಲಿ ಮಹಿಳಾ ಶೌಚಾಲಯ ನಿರ್ಮಾಣ ಮಾಡಲು ಕಾಮಗಾರಿಯನ್ನು ಈಗಾಗಲೇ 2 ವರ್ಷಗಳ ಹಿಂದಿನಿಂದ ಇಂದಿನವರೆಗೂ ಕಾಮಗಾರಿಯನ್ನು ಸಂಪೂರ್ಣವಾಗಿ ಕೈಗೊಳ್ಳದೇ ಇರುವದರಿಂದ ಮಹಿಳೆಯರು ಶೌಚಾಲಯಕ್ಕೆ ತುಂಬಾ ತೊಂದರೆಯನ್ನು ಅನುಭವಿಸುತ್ತಿದ್ದು, ಅಲ್ಲದೇ ಮಹಿಳೆಯರು ಮೇನ್ ರೋಡ ಬದಿಯಲ್ಲಿ ಶೌಚಾಲಯ ಮಾಡುತ್ತಿರುವದು ಶೋಚನಿಯ ಸಂಗತಿಯಾಗಿದೆ. ಸದರಿ ಕಾಮಗಾರಿಯು ಈಗಾಗಲೇ ಶೇಕಡಾ 80%ರಷ್ಟು ಕಾಮಗಾರಿ ಮುಕ್ತಾಯದ ಹಂತದಲ್ಲಿದ್ದು, ಬಾಕಿ 20% ಕಾಮಗಾರಿಯನ್ನು ಕೈಗೊಳ್ಳದೇ ಎಡರು ವರ್ಷಗಳು ಕಳೆದರೂ ಮಹಿಳಾ ಶೌಚಾಲಯದ ಬಗ್ಗೆ ಮಹಿಳಿಯರಿಗೆ ಆಗುತ್ತಿರುವ ತೊಂದರೆಯನ್ನು ಸಂಬಂಧಪಟ್ಟ ಅಧಿಕಾರಿಗಳು ಕಾಮಗಾರಿಯ ಸ್ಥಳ ಪರಿಶೀಲನೆಗೆ ದಿನಾಂಕ ನಿಗದಿಪಡಿಸಿ ನಿಲುಗಡೆ ಆದ / ಬಾಕಿ ಇರುವ ಕಾಮಗಾರಿಯನ್ನು ಇನ್ನು ಮುಂದೆ ವಿಳಂಬಕ್ಕೆ ಅವಕಾಶ ಮಾಡಿಕೊಡದೇ ಕೂಡಲೇ ಕ್ರಮ ಕೈಗೊಂಡು ಸಾರ್ವಜನಿಕ ಮಹಿಳೆಯರಿಗೆ ಅನುಕೂಲ ಮಾಡಬೇಕೆಂದು ಮನವಿ ಪತ್ರ ಸಲ್ಲಿಸಿ ಒತ್ತಾಯಿಸಿದರು.ಈ ಸಂಧರ್ಭದಲ್ಲಿ ರಾಮಯ್ಯ ಗುತ್ತೆದಾರ, ಅಮರೇಶ ಹೊರಪೇಟಿ,ಪತ್ರಕರ್ತ ರಾಜೇಶ ಮಾಣಿಕ್, ಚಂದ್ರಕಾಂತ ಕಾಡ್ಲೂರ,ನಾಗೇಶಭೋವಿ,ಅಮರೇಶ ಅಂಟಿಗೇರ, ಜಗದೀಶ ಗುತ್ತೆದಾರ,ರವಿಭೋವಿ,ಶಿವರಡ್ಡಿ ಆಸ್ಕಿಹಾಳ,ಬಸನಗೌಡಕಬಂಳಿ,ಪ್ರಕಾಶ ಅಂತರಗಂಗಿ, ಶ್ರೀಮಂತ ಚಲವಾದಿ,ಸೇರಿದಂತೆ ಅನೇಕರು ಇದ್ದರು.

# ಜೂ.28 ರಂದು ವಿದ್ಯುತ್ ವ್ಯತ್ಯಯ

ಬಳ್ಳಾರಿ,ಜೂ.26:ಬಳ್ಳಾರಿ ನಗರ ಜೆಸ್ಕಾಂ ಉಪವಿಭಾಗ–2 ರ ವ್ಯಾಪ್ತಿಯಲ್ಲಿ ಕಬ್ಬಿಣದ ವಿದ್ಯುತ್ ಕಂಬಗಳ ಬದಲಾವಣೆ ಕಾರ್ಯ ಕೈಗೊಳ್ಳುತ್ತಿರುವುದರಿಂದ ಜೂ.28 ರಂದು ಬೆಳಿಗ್ಗೆ 08.30 ಗಂಟೆಯಿಂದ ಸಂಜೆ 06 ಗಂಟೆಯವರೆಗೆ ಎಫ್–ಫೀಡರ್‌ನ ಬಸವನಕುಂಟೆ, ಕೋಟೆ ಪ್ರದೇಶ, ಮೇದಾರ್ ಓಣಿ ಸೇರಿದಂತೆ ಮುಂತಾದ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಹಾಗೂ ವಿದ್ಯುತ್ ಗ್ರಾಹಕರು ಸಹಕರಿಸಬೇಕು ಎಂದು ಬಳ್ಳಾರಿ ನಗರ ಉಪವಿಭಾಗ–2 ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಾದಕ ವಸ್ತು ಮುಕ್ತ ಜಿಲ್ಲೆ ನಮ್ಮ ಗುರಿ: ಡಾ. ಶರಣಪ್ಪ ಎಸ್.ಡಿ.



ಕಲಬುರಗಿ:ಜೂ.26 : ನಮ್ಮ ನಗರ ರಾಜ್ಯ, ದೇಶ ಮಾದಕ ವಸ್ತುಗಳಿಂದ ಮುಕ್ತ ಆಗಬೇಕಾದರೆ ಅಕ್ರಮ ಮಾದಕ ವಸ್ತು ಸಾಗಣಿಕೆ ವಿರುದ್ಧ ಎಲ್ಲ ಅಧಿಕಾರಿಗಳು ಶ್ರಮವಹಿಸಿ ಕೆಲಸ ಕಾರ್ಯಗಳನ್ನು ಮಾಡಿದಾಗ ಹಾಗೂ ಬಳಕೆಯ ವಿರುದ್ಧ ಸಾರ್ವಜನಿಕರ ನಿರಂತರ ಹೋರಾಟದಿಂದ ಮಾತ್ರ ಮಾದಕ ವಸ್ತುಗಳ ಮುಕ್ತ ಸಮಾಜವನ್ನಾಗಿ ಪರಿವರ್ತನೆ ಮಾಡಲು ಸಾಧ್ಯವೆಂದು ನಗರ ಪೊಲೀಸ್ ಆಯುಕ್ತ ಡಾ. ಶರಣಪ್ಪ ಎಸ್.ಡಿ. ಅವರು ಅಭಿಪ್ರಾಯಪಟ್ಟರು.

ಅವರು ಇಂದು ಕರ್ನಾಟಕ ರಾಜ್ಯ ಪೋಲಿಸ್, ಪೊಲೀಸ್ ತರಬೇತಿ ಮಹಾವಿದ್ಯಾಲಯ, ಕಲಬುರಗಿ ಅಂತರರಾಷ್ಟ್ರೀಯ ಮಾದಕ ದ್ರವ್ಯ ದುರುಪಯೋಗ ಮತ್ತು ಅಕ್ರಮ ಮಾದಕ ವಸ್ತು ಕಳ್ಳ ಸಾಗಾಣಿಕೆ ವಿರೋಧಿ ದಿನಾಚರಣೆ ಅಂಗವಾಗಿ ಜಾಥ ಕಾರ್ಯಕ್ರಮ ಜಗತ್ ವೃತ್ತದಲ್ಲಿ ಚಾಲನೆ ನೀಡಿ ನಂತರ ಕಾಲುನಡಿಗೆಯಲ್ಲಿ ತಿಮ್ಮಾಪುರಿ ಸರ್ಕಲ್‌ವರೆಗೆ ಬಂದು ಜಾಥ ಉದ್ದೇಶಿಸಿ ಮಾತನಾಡಿದರು.

ಅಕ್ರಮ ಮಾದಕ ವಸ್ತು ಸಾಗಣಿಕೆ ಮತ್ತು ಬಳಕೆಯ ಸಮಸ್ಯೆಯ ಮೂಲ ಯಾವ ಮಟ್ಟಿಗೆ ಇದೆ ಎಂದು ನಾವು ಅಧಿಕಾರಿಗಳು ತಿಳಿದುಕೊಳ್ಳಬೇಕು, ಮಾದಕ ವಸ್ತು ಎಲ್ಲಿ ಹಾವಳಿ ಇದೆ ಅದನ್ನು ಪತ್ತೆ ಹಚ್ಚಬೇಕು. ಮಾದಕ ವಸ್ತುಗಳಿಂದ ಮಕ್ಕಳ ಮೇಲೆ ಅನೇಕ ದುಷ್ಪಾರಿಣಾಮ ಬೀರುತ್ತವೆ.

ಸಾರ್ವಜನಿಕರು ಮಾದಕ ವಸ್ತುಗಳ ಹಾವಳಿ ಕಂಡು ಬಂದಲ್ಲಿ ತಕ್ಷಣ ದೂರವಾಣಿ ಸಂಖ್ಯೆ 1908,1933 ಹಾಗೂ 112 ಮಾಹಿತಿ ನೀಡಿದರೆ ನೀವು ಮಾಡಿದ ಕೆರೆಗಳನ್ನು ಗೌಪ್ಯವಾಗಿ ಇಡಲಾಗುತ್ತದೆ. ಕಳೆದ ಐದು ಆರು ತಿಂಗಳಿನಿಂದ ಅನೇಕ ಪ್ರಕರಣಗಳನ್ನು ದಾಖಲು ಮಾಡಿದ್ದೇವೆ ಯಾರು ಭಯ ಪಡುವ ಅಗತ್ಯವಿಲ್ಲ ಎಂದರು.

ಡ್ರಗ್ಸ್ ಸಾಯಿಸಲು ಬರುತ್ತದೆ ಬದುಕಲು ಅಲ್ಲ, ಡ್ರಗ್ಸ್ ನಿಮ್ಮನ್ನು ಕೊಲ್ಲುತ್ತದೆ, ಗಾಂಜ ಮತ್ತು ಡ್ರಗ್ಸ್ ಸೇವನೆ ಕಾನೂನು ಬಾಹಿರ ಚಟುವಟಿಕೆ ಎನ್ನುವ ಎಚ್ಚರ ಪ್ರತಿಯೊಬ್ಬ ಯುವಕರಿಗೂ ಅರಿವಿರಬೇಕು, ಓದುವ ಮತ್ತು ಭವಿಷ್ಯ ಕಟ್ಟಿಕೊಳ್ಳುವ ವಯಸ್ಸಿನಲ್ಲಿ ಯುವಕರು ಮಾದಕ ವಸ್ತುಗಳಿಗೆ ದಾಸರಾಗಬಾರದು ಎಂದು ಅವರು ಹೇಳಿದರು.

ಯುವಕರನ್ನು ಮಾದಕ ವಸ್ತುಗಳಿಂದ ರಕ್ಷಿಸಲು ಮತ್ತು ಕಲಬುರಗಿ ನಗರವನ್ನು ಮಾದಕ ವಸ್ತುಗಳಿಂದ ಮುಕ್ತಗೊಳಿಸಲು ನಗರ ಪೋಲಿಸ್ ವತಿಯಿಂದ ಕಟ್ಟುನಿಟ್ಟಿನ ಕಾರ್ಯಚರಣೆ ಮಾಡಲಾಗುತ್ತಿದೆ ಎಂದರು.

ನಾಗನಳ್ಳಿ ರಾಜ್ಯ ಪೊಲೀಸ್ ಮಹಾವಿದ್ಯಾಲಯದ ಎಸ್.ಪಿ. ಹಾಗೂ ಪ್ರಾಂಶುಪಾಲರಾದ ಡೆಕ್ಕ ಕಿಶೋರ ಬಾಬು ಅವರು ಮಾತನಾಡಿ, ಮಾದಕ ವಸ್ತುಗಳು ಬಳಸುವುದರಿಂದ ಮನುಷ್ಯನ ಮೇಲೆ ಅನೇಕ ದುಷ್ಪರಿಣಾಗಳು ಬೀರುತ್ತೇವೆ. ಇದರ ವಿರುದ್ಧ ಪ್ರತಿಯೊಬ್ಬರು ಹೋರಾಡುವ ಮೂಲಕ ನಮ್ಮ ಮಕ್ಕಳನ್ನು ನಾವೇ ರಕ್ಷಿಸಿಕೊಳ್ಳಬೇಕಿದೆ ಎಂದರು.

ನಾವು ನಶಮುಕ್ತ ಭಾರತ, ನಶಮುಕ್ತ ಕರ್ನಾಟಕ ನಿರ್ಮಾಣ ಮಾಡಲು ಆರೋಗ್ಯವಂತ ರಾಜ್ಯ ದೇಶವನ್ನು ಕಟ್ಟಲು ಮಾದಕ ವಸ್ತುಗಳ ಆಮೀಷಕ್ಕೆ ಒಳಗಾಗದೆ ಶಾರೀರಿಕವಾಗಿ ಮಾನಸಿಕವಾಗಿ ದೃಢವಾಗಿ ನಮ್ಮ ಸಮಾಜಕ್ಕೆ ಒಳ್ಳೆಯ ಕೆಲಸ ಮಾಡಬೇಕೆಂದು ಹೇಳಿದರು.

ಡಿ.ಸಿ.ಪಿ.(ಕಾನೂನು ಸುವ್ಯವಸ್ಥೆ) ಕನಿಕಾ ಸಿಕ್ರೀವಾಲ್ ಮಾತನಾಡಿದರು. ಇದೇ ಸಂದರ್ಭದಲ್ಲಿ ಡಿಸಿಪಿ(ಕಾನೂನು ಸಂಚಾರ) ಪ್ರವೀಣ ನಾಯಕ್, ಅಬಕಾರಿ ಇಲಾಖೆಯ ಡಿ.ಸಿ. ಚಂದನ ಗೌಡ, ಎನ್.ಸಿ.ಸಿ. ಬಾಟಲಿಯನ್ ಸಿಕೇಂದ್ರಸಿಂಗ್ ಸುಬೇದಾರ,ನಿವೃತ್ತ ಡಿ.ಎಸ್.ಪಿ. ನಾರಾಯಣ ಸ್ವಾಮಿ. ಇನ್ಸಪೆಕ್ಟರ್ ಶಾಂತಿನಾಥ ಸೇರಿದಂತೆ ಪೋಲಿಸ್ ಇಲಾಖೆ ಸರ್ಕಲ್ ಇನ್ಸ್‌ಪೆಕ್ಟರ್, ಇನ್ಸಪೆಕ್ಟರ್, ಪೋಲಿಸ್ ಇಲಾಖೆ ಅಧಿಕಾರಿಗಳು, ಪ್ರಶಿಕ್ಷಣಾರ್ಥಿಗಳು, ಎನ್.ಸಿ.ಸಿ. ಕಮಾಂಡೆಟ್‌ಗಳು ಉಪಸ್ಥಿತರಿದ್ದರು.

# ಸಮಗ್ರ ಕೃಷಿಯ ಹೊಸ ಆವಿಷ್ಕಾರದ ಯುವ ರೈತ ಸತೀಶ್



ಅಮಿನಗಡ ಎಂದಾಕ್ಷಣ ಎಲ್ಲರ ಬಾಯಲ್ಲಿ ಒಂದು ಕ್ಷಣ ನೀರು ಬಂದು ನೆನಪಿಗೆ ಬರುವುದೇ ಕರದಂಟು ಎಲ್ಲರ ಅಚ್ಚುಮೆಚ್ಚಿನ ಸಿಹಿ ಪದಾರ್ಥ ರೆಡಿಯಾಗುವ ಊರಲ್ಲೊಬ್ಬ ಮಾದರಿ ಯುವ ರೈತ ವಿವಿಧ ತಳಿಯ ಹಣ್ಣುಗಳನ್ನು ಬೆಳೆಯುವ ಸಮಗ್ರ ಕೃಷಿ ರೈತನೊಬ್ಬ ನಿರುದ್ಯೋಗಿ ಯುವ ರೈತರಿಗೆ ಮಾದರಿಯಾಗಿದ್ದಾನೆ .


ಸುಪ್ರಸಿದ್ಧ ಕರೆದಂಟು ನಾಡಿನಲ್ಲಿಯೇ ಸರಕಾರಿ ನೌಕರಿ ಜೊತೆಗೆ ಆದರ್ಶ ಯುವ ರೈತನಾಗಿ ಅದೆಷ್ಟೋ ನಿರುದ್ಯೋಗಿ ಯುವ ರೈತರಿಗೆ ಮಾದರಿ ಎನ್ನುವಂತೆ.

ರೈತರೆಂದರೆ ಮೂಗು ಮುರಿಯುವ ಇವತ್ತಿನ ಯುವತಿಯರಿಗೆ ಸ್ವತ: ಸರ್ಕಾರಿ ನೌಕರನೊಬ್ಬ ನೌಕರಿಗಿಂತ ಹೆಚ್ಚಿನ ಆದಾಯವನ್ನು ಕೃಷಿಯಲ್ಲಿ ರೈತನಾಗಿ ಗಳಿಸಬಹುದು ಎನ್ನುವುದನ್ನು ಸಾಧಿಸಿ ತೋರಿಸಿ ರೈತನೆಂದು ಮೂಗು ಮುರಿಯುವ ಯುವತಿಯರಿಗೆ ಮೂಗಿನ ಮೇಲೆ ಬೆರಳುವಂತೆ ಮಾಡಿದಾನೆ. ಹೌದು ಇಂತಹ ಅಪರೂಪದ ಯುವ ರೈತನೇ ಸತೀಶ ರಾಠೋಡ.ಸರಕಾರಿ ನೌಕರಿ ಇದ್ದರೂ ನೌಕರಿಗಿಂತ ಹೆಚ್ಚಿನ ಆದಾಯ ಕೃಷಿಯಲ್ಲಿ ತೆಗೆಯಬಹುದು ಕೃಷಿಯಲ್ಲಿ ಸಾಧನೆ ಮಾಡಲು ಸಾಕಷ್ಟು ಅವಕಾಶಗಳಿದ್ದು ಖುಷಿಯಿಂದ ಕೃಷಿಯನ್ನು ಅದನ್ನು ಸದುಪಯೋಗಪಡಿಸಿಕೊಂಡರೆ ನೌಕರಿಯ ಪಗಾರಕಿಂತ ಹೆಚ್ಚಿನ ಆದಾಯ ಕೃಷಿಯಲ್ಲಿ ಗಳಿಸಬಹುದು ಎನ್ನುವುದನ್ನು ಚಾಲೆಂಜ್ ಆಗಿ ತೆಗೆದುಕೊಂಡು ಕೃಷಿ ಮಾಡಲು ಆಗುವುದಿಲ್ಲ ಎನ್ನುವ ಯುವಕರಿಗೆ ಮಾದರಿ ಎನ್ನುವಂತೆ ಅಚ್ಚುಕಟ್ಟಾಗಿ ನೌಕರಿಯ ಜೊತೆಗೆ ಚೆಂದಾಗಿ ಚೊಕ್ಕವಾಗಿ ಸಮಗ್ರ ಕೃಷಿ ಅಳವಡಿಸಿಕೊಂಡು ಅನೇಕ ತರಹದ ವಿವಿಧ ಮಾದರಿಯ ಹಣ್ಣಿನ ಗಿಡಗಳನ್ನು ಬೆಳೆದು ಈ ನಾಡಿಗೆ ರೈತನಾದವನು ಛಲ ತೊಟ್ಟರೆ ಏನೆಲ್ಲಾ ಸಾಧನೆ ಮಾಡಬಹುದು ಎನ್ನುವುದು ತೋರಿಸಿಕೊಟ್ಟಿರುವ ಸತೀಶ್ ರಾಠೋಡ. ಕೃಷಿಯ ಜೊತೆಗೆ ಹೈನುಗಾರಿಕೆ, ಕುರಿ ಸಾಕಾಣಿಕೆ ಅಳವಡಿಸಿಕೊಂಡು ಸರಕಾರಿ ಕೆಲಸದ ಬಿಡುವಿನ ಸಮಯದಲ್ಲಿ ಸಂಪೂರ್ಣವಾಗಿ ತನ್ನ ಒಲವನ್ನು ಕೃಷಿಗೆ ಒತ್ತು ಕೊಟ್ಟು ರಾಜ್ಯಾದ್ಯಂತ ವಿವಿಧ ರೈತರು ತನ್ನ ತೋಟಕ್ಕೆ ಬಂದು ತನ್ನ ವಿಶೇಷ ಮತ್ತು ವಿಶಿಷ್ಟ ಕೃಷಿಯನ್ನು ನೋಡಿಕೊಂಡು ಯುವ ರೈತ ಸತೀಶನ ಕೃಷಿಯನ್ನೇ ನಾವು ಅಳವಡಿಸಿಕೊಳ್ಳಬೇಕು ಎಂದು ದಿನಂಪ್ರತಿ ವಿವಿಧ ಕಡೆಗಳಿಂದ ರೈತರು ಸತೀಶನ ತೋಟಕ್ಕೆ ಬಂದು ಆಗಮಿಸಿ ಸಮಗ್ರ ಕೃಷಿಯ ಮಾಹಿತಿಯನ್ನು ಪಡೆಯುತ್ತಿದ್ದಾರೆ ಎಂದರೆ ನಿರುದ್ಯೋಗಿಯಾಗಿರುವ ಅದೆಷ್ಟೋ ಯುವಕರಿಗೆ ಮತ್ತು ಕೃಷಿಯಲ್ಲಿ ಏನು ಸಾಧಿಸಲಿಕ್ಕೆ ಸಾಧ್ಯವಾಗುವುದಿಲ್ಲ ಎನ್ನುವ ರೈತರಿಗೆ ಸಲ್ಪ ಜಮೀನಿನಲ್ಲಿಯೇ ನಾವು ಎಲ್ಲವನ್ನು ಸಾಧಿಸಬಹುದು ಎನ್ನುವುದನ್ನು ವಿವಿಧ ಮಾದರಿಯ ತಳಿಯ ಹಣ್ಣುಗಳ ಬೆಳೆಯುವ ಮೂಲಕ ಸಾಕ್ಷಿಯಾಗಿ ನಿಂತಿರುವ ಈ ಯುವ ರೈತನ ಚಾಣಾಕ್ಷತನಕ್ಕೆ ನಮ್ಮದೊಂದು ಸಲಾಂ ಇರಲಿ.ಮೂಲತ ಕೃಷಿ ಕುಟುಂಬದಿಂದ ಬಂದಿರುವ ಸತೀಶ್ ರಾಠೋಡ ನಾನು ನೌಕರಿ ಮಾಡುವ ಇಷ್ಟ ಇಲ್ಲದಿದ್ದರೂ ಕೃಷಿಯಲ್ಲಿ ಸಾಧನೆ ಮಾಡಬಹುದು ಎಂದು ನಾನು ನಮ್ಮ ಮನೆಯ ಹಿರಿಯರಿಗೆ ತಿಳಿಸಿದಾಗ ನೀನು ಕೃಷಿಯಲ್ಲಿ ಎಷ್ಟೇ ಸಾಧನೆ ಮಾಡಿದರು ನೌಕರಿಗೆ ಇರುವಷ್ಟು ಬೆಲೆ ರೈತನಿಗೆ ಇಲ್ಲ ಹಾಗಾಗಿ ನೀನು ನೌಕರಿಗೆ ಹಾಜರಾಗಲೇಬೇಕು ಎಂದು ಒತ್ತಾಯಪೂರ್ವಕವಾಗಿ ನನ್ನನ್ನು ನೌಕರಿಗೆ ಕಳಿಸಿದ್ದು ನಾನು ಈಗಲೂ ನೌಕರಿಯ ಬಿಡುವಿನ ಸಮಯದಲ್ಲಿನ ಸಂಪೂರ್ಣ ಸಮಯವನ್ನು ಕೃಷಿಗಾಗಿಯೇ ಮೀಸಲಿರಿಸಿ ನಾನು ಕೃಷಿಯಲ್ಲಿ ಅಂದುಕೊಂಡಿರುವ ಸಾಧನೆಯನ್ನು ಮಾಡುತ್ತಿದ್ದೇನೆ ಎಂದು ಹೆಮ್ಮೆ ಎನಿಸುತ್ತದೆ ಎಂದು ಹೇಳುತ್ತಾರೆ.

ತಮ್ಮ ಕೃಷಿಯಲ್ಲಿ ಕೀಟನಾಶಕಗಳನ್ನು ಬಳಸದೆ ಸ್ವಯಂ ತಯಾರಿಸಿದ ಕೀಟನಾಶಕಗಳನ್ನು ಬಿಡಿಸಿ ಸಿಂಪಡಿಸಿ ಯಶಸ್ವಿ ಕಾಣುತ್ತಿದ್ದೇನೆ ಎಂದು ತಮ್ಮ ಹಾದಿಯ ಪಯಣವನ್ನು ತೋರಿಸುತ್ತಿದ್ದಾರೆ

ರೈತ ಮನಸ್ಸು ಮಾಡಿದರೆ ಏನೆಲ್ಲ ಸಾಧಿಸಬಹುದು ಅದೆಲ್ಲವನ್ನು ಸಾಧಿಸುವ ಛಲ ಹೊಂದಿರುವ ಯುವ ರೈತ ರೈತಾಪಿ ಕೆಲಸದಲ್ಲಿ ನಾವು ಶ್ರಮ ಹಾಕಿ ದುಡಿದರೆ ನಮ್ಮನ್ನು ಭೂಮಿತಾಯಿ ಯಾವತ್ತೂ ಕೈ ಬಿಡುವುದಿಲ್ಲ ಎನ್ನುವುದನ್ನು ಸಾಬೀತು ಮಾಡಿರುವ ಈ ಯುವಕ ಸದಾ ಸಮಯದಲ್ಲೂ ವಿವಿಧ ರೀತಿಯ ವಿವಿಧ ಮಾದರಿಯ ಹಣ್ಣುಗಳನ್ನು ಬೆಳೆಸುವ ಆಲೋಚನೆಯಲ್ಲಿಯೇ ಹೊಸ ಹೊಸ ಕೃಷಿ ಪದ್ಧತಿಗಳನ್ನು ಸ್ವತಃ ಮಾಡಿಕೊಂಡು







ಪ್ರಯೋಗ ಮಾಡಿ ಅದರಲ್ಲಿ ನಿಧಾನವಾದರೂ ಚಿಂತೆ ಇಲ್ಲ ಯಶಸ್ವಿಗೊಳ್ಳುತ್ತಿರುವುದು ನನಗೆ ತುಂಬ ಸಂತೋಷ ನೀಡುತ್ತಿದೆ ಎಂದು, ಯುವ ರೈತ ಸತೀಶ ರಾಠೋಡ ನಿರುದ್ಯೋಗಿ ಯುವ ರೈತರಿಗೆ ಕೃಷಿಯಲ್ಲಿ ಸಾಧನೆ ಮಾಡಲು ಸಾಕಷ್ಟು ಅವಕಾಶಗಳಿದ್ದು ಅವುಗಳನ್ನು ಮೈಗೂಡಿಸಿಕೊಳ್ಳಬೇಕೆ ಅಷ್ಟೇ ಎಂದು ಹೇಳುತ್ತಾರೆ.

ಸ್ವತ ರೈತರೇ ತಮ್ಮ ಮಗಳನ್ನು ರೈತನಿಗೆ ಕನ್ಯ ಕೊಡುವುದಿಲ್ಲ ಸರ್ಕಾರಿ ನೌಕರರಿಗೆ ಕೊಡುತ್ತೇನೆ ಎಂದು ವಾಗ್ದಾನ ಮಾಡುವ ರೈತರಿಗೆ ನಾಚಿಕೆಯನ್ನುವಂತೆ ಸರಕಾರಿ ನೌಕರಿಯ ಜೊತೆಗೆ ಪಕ್ಕ ರೈತಾಪಿ ಕೆಲಸ ಮಾಡುತ್ತಾ ಸರ್ಕಾರಿ ನೌಕರಿಗಿಂತ ಕೃಷಿಯಲ್ಲಿ ದೊಡ್ಡ ಸಾಧನೆ ಮಾಡಬಹುದು ಎನ್ನುವುದನ್ನು ರೈತರನ್ನು ಹೀಯಾಳಿಸುವ ರೈತರೇ ಬಾಯಿ ಮೇಲೆ ಕೈ ಇಟ್ಟುಕೊಳ್ಳುವಂತೆ ಕೃಷಿ ಕಾಯಕದಲ್ಲಿ ಯಶಸ್ವಿ ಆಗಿರುವುದನ್ನು ಕಂಡು ಸರ್ಕಾರಿ ನೌಕರಿಗಿಂತ ಕೃಷಿಯಲ್ಲಿ ಹೆಚ್ಚು ಆದಾಯ ಗಳಿಸಬಹುದು ಎನ್ನುವುದನ್ನು ತೋರಿಸಿ ರೈತನಿಗೆ ಕನ್ಯ ಕೊಡುವುದಿಲ್ಲ ಎನ್ನುವ ತಂದೆ ತಾಯಿಗಳಿಗೆ ಅಸೂಯೆ ಪಡುವಂತ ಸಾಧನೆ ಮಾಡುತ್ತಿರುವ ಈ ಯುವ ರೈತನ ಬಗ್ಗೆ ಅಮೀನಗಡ ಹಾಗೂ ಹುನುಗುಂದ ತಾಲೂಕಿನ ಎಲ್ಲಾ ರೈತರು ಮಾತನಾಡಿಕೊಳ್ಳುತ್ತಿದ್ದಾರೆ ಎಂದರೆ ನೌಕರಿಗಿಂತ ಹೆಚ್ಚು ಆದಾಯ ಮತ್ತು ಸಾಧನೆಯನ್ನು ಕೃಷಿ ಆದಾಯದಲ್ಲಿ ಮಾಡಬಹುದು ಎನ್ನುವುದನ್ನು ತೋರಿಸಿಕೊಟ್ಟ ಈ ರೈತನಿಗೆ ನಾವು ತಲೆಬಾಗಲೇಬೇಕು ಎಂದು ಕೆಲ ಪರಿಣಿತ ರೈತರು ತಮ್ಮ ಅಭಿಪ್ರಾಯವನ್ನು ವ್ಯಕ್ತಪಡಿಸುತ್ತಾರೆ.

ಸಾವಯವ ಗೊಬ್ಬರಕ್ಕೆ ಆದ್ಯತೆ ರಾಸಾಯನಿಕ ಗೊಬ್ಬರದಿಂದ ತನ್ನ ಕೃಷಿಯಲ್ಲಿ ಸಾವಯವ ಗೊಬ್ಬರವನ್ನೇ ಸಂಪೂರ್ಣವಾಗಿ ತನ್ನ 4 ಎಕ–ರೆ ಹೊಲಕ್ಕೆ ಬಳಕೆ ಮಾಡುತ್ತಿದ್ದು ಸಾವಯವ ಗೊಬ್ಬರ ತಯಾರಿಕೆಗಾಗಿಯೇ ಆಕಳುಗಳನ್ನು ಸಾಕಿದ್ದಾರೆ.ಸಮಗ್ರ ಕೃಷಿಗೆ ಒತ್ತು ಕೊಡುವ ನಿಟ್ಟಿನಲ್ಲಿ ತನ್ನ 4 ಎಕರೆ ಜಮೀನಿನಲ್ಲಿ ದಾಳಿಂಬೆ, ಮೋಸಂಬೆ ಚಿಕ್ಕು, ಆರೆಂಜ, ಸೀಡ್ಲೆಸ್ ನೇಮನ್ನು, ಬಾಳೆ, ಅಂಜೂರ, ವಿವಿಧ ತಳಿಯ ಮಾವು, ನೇರಳೆ ವೈಟ್ ಪಿಂಕ್ ವಾಟರ್ ಆಪಲ್, ಹಲಸು, ಸ್ಟಾರ್ ಪ್ರೂಟ್ ಸೇಬು, ತೆಂಗು ಗೋಡಂಬಿ ಎಲಿವೆಟ್ ಆಪಲ್, ಸರ್ವ ಸಾಂಬಾರ್, ನುಗ್ಗೆ, ಲಕ್ಷ್ಮಣ ಫಲ (ಕ್ಯಾನ್ಸರ್ ನಿವಾರಣ ಹಣ್ಣು)

ಸೀತಾಫಲ, ಫೇರೂ, ಡ್ರಾಗನ್ ಪ್ರುಟ್, ಅರಿಸಿಣ ಪಪ್ಪಾಯಿ ಹೀಗೆ ಎಲ್ಲಾ ತರದ ಹಣ್ಣಿನ ಗಿಡಗಳ ಜೊತೆಗೆ ವಿವಿಧ ಬೆಳೆಗಳನ್ನು ಕೃಷಿಯಲ್ಲಿ ಅಳವಡಿಸಿಕೊಂಡಿದ್ದಾರೆ.

ಜೀವಾಮೃತ :– ಇದರ ತಯಾರಿಕೆಗಾಗಿ ಎರಡು ನೂರು ಲೀಟರ್ ನೀರಿನಲ್ಲಿ ಎರಡು ಕೆಜಿ ಕಪ್ಪು ಬೆಲ್ಲ 20 ಲೀಟರ್ ಗಂಜಲು 2 ಕೆಜಿ ದ್ವಿದಳ (ಎಣ್ಣೆ ಕಾಳು) ಹೊರತುಪಡಿಸಿ ಹಿಟ್ಟನ್ನು ಬಳಸಿ ಸಾವಯವ ಜೀವಾಮೃತ ತಯಾರಿಸಿ ಏಳು ದಿನಗಳವರೆಗೆ ಕ್ಲಾಕ್ ವೈಸ್ ಡೈರೆಕ್ಷನ್ ನಲ್ಲಿ ಕಲಬೇರಿಕೆ ಮಾಡಿ ತಯಾರಾದ ಜೀವಾಮೃತ ತಾವು ಬೆಳೆದ ವಿವಿಧ ಮಾದರಿಯ ಹಣ್ಣಿನ ಗಿಡಗಳಿಗೆ ಉಪಯೋಗಿಸಿದಾಗ ಅದು ಬೇಗನೆ ಗೊಬ್ಬರವಾಗಿ ಪರಿವರ್ತನೆಯಾಗುವುದರಿಂದ ಗಿಡಗಳ ಪಸಲು ಚೆನ್ನಾಗಿ ಬರುತ್ತದೆ ಎಂದು ತಾವೇ ಸ್ವತ ಜೀವಾಮೃತ ತಯಾರಿಸಿ ಗಿಡಗಳಿಗೆ ಬಳಿಸುತ್ತಾರೆ. ಮತ್ತು ಪ್ರತಿ ರೈತರಿಗೂ ಸುಲಭ ಹಾಗೂ ಸರಳ ರೀತಿಯಲ್ಲಿ ಸಿಗುವ ಪದಾರ್ಥಗಳನ್ನು ಬಳಸಿ ಸಾವಯವ ಗೊಬ್ಬರವನ್ನು ತಯಾರಿಸಿ ಈ ಭಾಗದ ರೈತರಿಗೆ ಸಾವಯವ ಗೊಬ್ಬರದ ಪರಿಚಯ ಮಾಡಿಸಿ ರಾಸಾಯನಿಕ ಗೊಬ್ಬರದಿಂದ ದೂರ ಉಳಿಯುವಂತೆ ಮಾಡಿದ್ದಾರೆ ಘನ ಜೀವಾಮೃತ:– ಸಗಣಿ ಗಂಜಲ ದ್ವಿದಳ ಧಾನ್ಯಗಳ ಹಿಟ್ಟು ಹಾಗೂ ಕರಿ ಬೆಲ್ಲ ಕಲಿಸಿ ನೆರಳಲ್ಲಿ 90 ದಿನಗಳವರೆಗೆ ಒಣಗಿಸಿ ತಯಾರಿಸುವ ಗೊಬ್ಬರದಿಂದ ಗಿಡಗಳಿಗೆ ಹಾಕಿದಾಗ ಗಿಡಕ್ಕೆ ನೀರಿನ ಅಂಶ ಕಡಿಮೆ ಇದ್ದಾಗಲೂ ಗಿಡಗಳಿಗೆ ನೀರಿನ ಅಂಶದ ವೃದ್ಧಿ ಮಾಡುವುದರ ಜೊತೆಗೆ ಗಿಡಗಳನ್ನು ತೇಜಸ್ ಆಗಿ ಬೆಳೆಯುವಂತೆ ಮಾಡುತ್ತದೆ ಹೀಗಾಗಿ ಪ್ರತಿ ಗಿಡಗಳಿಗೂ ನಾನು ಘನ ಜೀವಾಮೃತ ಬಳಸಿ ಕೃಷಿ ಮಾಡುತ್ತೇನೆ ಎಂದು ಹೇಳುತ್ತಾರೆ.

ವೆಸ್ಟ್ ಡಿ ಕಂಪೋಸರ್ :– ಎರಡು ನೂರು ಲೀಟರ್ ನೀರಿಗೆ 2 ಕೆ.ಜಿ ಕರಿ ಬೆಲ್ಲ. ವೆಸ್ಟ್ ಡಿ ಕಂಪೋಸರ್ ಕಲಬೆರಿಕೆ ಮಾಡಿ ಐದು ದಿನಗಳವರೆಗೆ ಇಟ್ಟಾಗ ಸೋಡಿಯಂ ಮಿಶ್ರಣ ಸಾವಯವ ಉತ್ತಮವಾದ ಗೊಬ್ಬರ ನಮಗೆ ಸಿಗುವುದರಿಂದ ಬೆಳೆಗಳು ಚೆನ್ನಾಗಿ ಬರುವುದರ ಜೊತೆಗೆ ಫಸಲನ್ನು ಹೆಚ್ಚಾಗಿ ಬರುವಂತೆ ವೆಸ್ಟ್ ಡಿ ಕಂಪೋಸರ್ ಕೆಲಸ ಮಾಡುವುದರಿಂದ ಅದನ್ನು ಕಡ್ಡಾಯವಾಗಿ ತಯಾರಿಸಿ ಬಳಸುತ್ತೇವೆ ಯುವ ರೈತ ಸತೀಶ್ ರಾಠೋಡ.

ಸಮಗ್ರ ಕೃಷಿಯ ಜೊತೆಗೆ ಹೈನುಗಾರಿಕೆ ಮಾಡಿದ್ದು ಅದರಲ್ಲೂ ವಿಶೇಷವಾಗಿ ಮತ್ತು ವಿಶೇಷ ತಳಿಯ ಕುರಿಗಳನ್ನು ಸಾಕಿದ್ದು ಎಳಗಾ ಕುರಿ, ಟಗರು, ಆಡು. ಸಾಕಾಣಿಕೆಯ ಜೊತೆಗೆ ಸಿರೋಯಿ ರಾಜಸ್ಥಾನ ತಳಿ, ಸೌಜತ್ ಹರಿಯಾಣ ಮತ್ತು ಪಂಜಾಬ್ ತಳಿ, ಬೀಟಲ್ ಪಂಜಾಬ್ ತಳಿ, ಹೀಗೆ ವಿವಿಧ ತಳಿಯ ಹಾಡುಗಳನ್ನು ಸಾಕಿ ಅದರಲ್ಲಿ ಯಶಸ್ಸು ಕಂಡಿರುತ್ತಾರೆ.

ಅಗ್ನಿಶಾಮಕ ಇಲಾಖೆಯ ನೌಕರಿಯ ಜೊತೆಗೆ ಇಷ್ಟೆಲ್ಲ ಸಮಗ್ರ ಕೃಷಿ ಮತ್ತು ಕುರಿ ಸಾಗಾಣಿಕೆ ಹೊಂದಿಗೆ ಸಮಾಜಕ್ಕೆ ಮಾದರಿಯಾಗಿ ನಿರುದ್ಯೋಗಿಗಳಿಗೆ ಉದ್ಯೋಗ ಹುಡುಕುವ ಮಾರ್ಗವನ್ನು ತೋರಿಸಿಕೊಟ್ಟ ಮತ್ತು ಅನೇಕ ನಿರುದ್ಯೋಗಿ ಯುವಕರು ನಾಚುವಂತೆ ಅಗ್ನಿಶಾಮಕ ಇಲಾಖೆಯ ಕರ್ತವ್ಯ ನಿಷ್ಠೆಯಿಂದ ನಿರ್ವಹಿಸಿ ಕೃಷಿಯಲ್ಲೋ ತುಂಬಾ ಉತ್ಸಕತೆಯಿಂದ ಪಾಲ್ಗೊಂಡು ನೌಕರಿ ಪಗಾರಕಿಂತ ಕೃಷಿಯಲ್ಲಿಯೇ ಹೆಚ್ಚು ಆದಾಯ ಪಡೆದುಕೊಂಡಿದ್ದೇನೆ ಎಂದು ಹೇಳುವ ಇಂತಹ ಯುವಕರು ಇಂದಿನ ಆಧುನಿಕ ಪ್ರಸ್ತುತ ಕಾಲಮಾನದಲ್ಲಿ ಯುವ ರೈತರು ತೀರಾ ವಿರಾಳ ಎನಿಸುತ್ತದೆ ಆದರೆ ಮಗನ ಕೃಷಿ ಕಾಯಕ ಕಂಡು ತಂದೆ ಪುನೀತ್ ತಾಯಿ ಅಂಬಿಕಾ ಮತ್ತು ಸಹೋದರ ಡಾ// ಆಕಾಶ್ ಸತೀಶನ ಬಗ್ಗೆ ತುಂಬಾ ಮೆಚ್ಚುಗೆಯ ಮಾತುಗಳನ್ನು ಆಡುವುದರ ಜೊತೆಗೆ ನಮ್ಮ ಭಾಗದಲ್ಲಿ ನೌಕರಿಗೆ ಆದ್ಯತೆ ಕೊಟ್ಟಷ್ಟೇ ಕೃಷಿ ಕಾಯಕಕ್ಕೆ ಆದ್ಯತೆ ಕೊಡುವ ಅಪರೂಪದ ಮಗ ನಮ್ಮ ಉದರದಲ್ಲಿ ಜನಿಸಿರುವುದು ನಮ್ಮ ಭಾಗ್ಯ ಎಂದು ಮಗನ ಬಗ್ಗೆ ಮೆಚ್ಚುಗೆ ಮಾತುಗಳನಾಡುತ್ತಾರೆ....









ಜಗದೀಶ.ಎಸ್.ಗಿರಡ್ಡಿ.
ಲೇಖಕರು.ಗೊರಬಾಳ.
9902470856.

# ಸಾಹಿತ್ಯ ಓದುವ ಅಭಿರುಚಿ ಬೆಳೆಯಲಿ:ಗುರುಬಸವ ಪಟ್ಟದ್ದೇವರು



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ: ಜೂ.26:ಮನುಷ್ಯ ಒತ್ತಡದಿಂದ ಹೊರಬರಲು ಸಾಹಿತ್ಯದ ಪ್ರಕಾರಗಳಾದ ಕಥೆ, ಕವನ, ಕಾವ್ಯ ಅಧ್ಯಯನದ ಅಭಿರುಚಿ ಬೆಳೆಸಿ ಕೊಳ್ಳಬೇಕು ಎಂದು ಹಿರೇಮಠ ಸಂಸ್ಥಾನದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಹೇಳಿದರು.

ತಾಲೂಕಿನ ಭಾತಂಬ್ರಾ ಗ್ರಾಮದಲ್ಲಿ ಆನಂದವಾಡಿಯ ಭೂರೆ ಮತ್ತು ಅಂಬಾಡೆ ಪರಿವಾರದ ಪೂಜಾ ಮತ್ತು ಬಸವರಾಜ ಅವರ ನಿಶ್ಚಿತಾರ್ಥ ಕಾರ್ಯಕ್ರಮದಲ್ಲಿ ಏರ್ಪಡಿಸಿದ್ದ ಕಳೆದು ಹೋಗಿವೆ ಕವನ ಸಂಕಲನ ಬಿಡುಗಡೆ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಸಾಹಿತಿ ಗಣಪತಿ ಭೂರೆ ಅವರು ಚನ್ನಬಸವೇಶ್ವರ ಗುರುಕುಲದಲ್ಲಿ ಅಧೀಕ್ಷಕರಾಗಿ ಸೇವೆ ಸಲ್ಲಿಸುವುದರ ಜತೆಗೆ ಸಾಹಿತ್ಯ ಕ್ಷೇತ್ರದಲ್ಲಿಯೂ ತಮ್ಮದೇ ಛಾಪು ಮೂಡಿಸಿದ್ದಾರೆ.

ಅವರು ಸಾಹಿತ್ಯದ ವಿವಿಧ ಪ್ರಕಾರಗಳಲ್ಲಿ ಕೃಷಿ ಮಾಡಿದ್ದಾರೆ. ಕಾದಂಬರಿ, ನಾಟಕ, ಕಥಾ ಸಂಕಲನ, ಸಂಪಾದನೆ, ಪ್ರಬಂಧ, ಜೀವನ ಚರಿತ್ರೆ, ಗ್ರಾಮ ಚರಿತ್ರೆಗಳು ಸೇರಿದಂತೆ ಅನೇಕ ಕವನ ಸಂಕಲನ ಪ್ರಕಟಿಸಿ ಸಾಹಿತ್ಯ ಕ್ಷೇತ್ರಕ್ಕೆ ಉತ್ತಮ ಕೊಡುಗೆ ನೀಡಿದ್ದಾರೆ ಎಂದರು.

ಇಂದಿನ ದಿನಗಳಲ್ಲಿ ನಿಶ್ಚಿತಾರ್ಥ, ಮದುವೆ ಕಾರ್ಯಕ್ರಮಗಳು ಆಡಂಬರದಿಂದ ಕೂಡಿರುತ್ತಿವೆ. ಆದರೆ ಭೂರೆ ಮತ್ತು ಅಂಬಾಡೆ ಪರಿವಾರದ ನಿಶ್ಚಿತಾರ್ಥ ಕಾರ್ಯಕ್ರಮದಲ್ಲಿ ಗಣಪತಿ ಭೂರೆ ಅವರು ಬರೆದ ಕಳೆದು ಹೋಗಿವೆ ಕವನ ಸಂಕಲನ ಬಿಡುಗಡೆಗೊಳಿಸಿ ನೆರೆದ ಜನರನ್ನು ಸಾಹಿತ್ಯದತ್ತ ಸೆಳೆಯುವ ಪ್ರಯತ್ನ ಆಗುತ್ತಿರುವುದು ಸಂತಸ ತರಿಸಿದೆ ಎಂದು ತಿಳಿಸಿದರು.

ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು ಅಧ್ಯಕ್ಷ ಶಂಭುಲಿಂಗ ಕಾಮಣ್ಣ ಅವರು ಕವನ ಸಂಕಲನ ಪರಿಚಯ ಮಾಡಿಕೊಟ್ಟರು. ಈ ಸಂದರ್ಭದಲ್ಲಿ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಶಶಿಧರ ಕೋಸಂಬೆ, ಸಾಹಿತಿಗಳಾದ ವೀರಣ್ಣ ಕುಂಬಾರ, ಗಣಪತಿ ಭೂರೆ, ನಿವೃತ್ತ ಪ್ರಾಧ್ಯಾಪಕ ಚಂದ್ರಶೇಖರ ಬಿರಾದಾರ್, ರವೀಂದ್ರ ಅಂಬಾಡೆ, ಶಿವಕುಮಾರ ನಾರಾ, ಶ್ರೀನಿವಾಸ ಭೂರೆ, ಬಾಬುರಾವ ಭೂರೆ, ಸಂಗಮೇಶ ಭೂರೆ ಸೇರಿದಂತೆ ಹಲವರು ಇದ್ದರು.

ಬಸವರಾಜ ಮಡಿವಾಳ ನಿರೂಪಿಸಿ, ವಂದಿಸಿದರು.

# ತಳವಾರ ಜಾತಿ ಪ್ರಮಾಣ ಪತ್ರ ನೀಡುವಂತೆ ಸಚಿವ ಪ್ರಿಯಾಂಕ ಖರ್ಗೆ ಅವರಿಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಜೂ.26: ಕಳೆದ ಬಿ.ಜೆ.ಪಿ ಪಕ್ಷದ ರಾಜ್ಯ ಸರಕಾರದ ಅವಧಿಯಲ್ಲಿ ವಿಳಂಬವಾಗಿರುವ ತಳವಾರ ಜಾತಿ ಪ್ರಮಾಣ ಪತ್ರ ಅನೇಕ ಹೋರಾಟಕ್ಕೆ ಮಣಿದು ತಳವಾರ ಜನಾಂಗಕ್ಕೆ ನೀಡಿರುವ ಪರಿಶಿಷ್ಟ ಪಂಗಡ ಪ್ರಮಾಣ ಪತ್ರ ಕಾಂಗ್ರೆಸ್ ಸರ್ಕಾರದಲ್ಲಿ ತಡೆಹಿಡಿಯಲಾಗಿದ್ದು, ಸದರಿ ಪ್ರಮಾಣ ಪತ್ರಗಳು ನೀಡುವಂತೆ ರಾಜ್ಯ ಸರಕಾರ ಹಾಗೂ ಕಲಬುರಗಿ ಜಿಲ್ಲಾಧಿಕಾರಿಗಳಿಗೆ ಶಿಫಾರಸ್ಸು ಮಾಡಬೇಕೆಂದು ಕರ್ನಾಟಕ ರಾಜ್ಯ ಕೋಲಿ, ಕಬ್ಬಲಿಗ ಎಸ್.ಟಿ ಹೋರಾಟ ಸಮಿತಿ ಹಾಗೂ ಕರ್ನಾಟಕ ರಾಜ್ಯ ತಳವಾರ ಸಮಾಜ ಸಂಘಟನೆ ಜಂಟಿಯಾಗಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ ಹಾಗೂ ಐಟಿಬಿಟಿ ಮತ್ತು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರೀಯಾಂಕ ಖರ್ಗೆ ಅವರಿಗೆ ಬೆಂಗಳೂರಿನಲ್ಲಿ ಮನವಿ ಸಲ್ಲಿಸಿದರು.

ಕರ್ನಾಟಕದಲ್ಲಿ ನ್ಯಾಯಬದ್ಧವಾಗಿ ಸಿಗಬೇಕಾಗಿರುವ ತಳವಾರ, ಪರಿವಾರ, ಪರಿಶಿಷ್ಟ ಜಾತಿ ಪ್ರಮಾಣ ಪತ್ರಕ್ಕಾಗಿ ನಡೆದ ಅನೇಕ ಹೋರಾಟ, ರಸ್ತಾ ರೋಕೋ, ಧರಣಿ ಸತ್ಯಾಗ್ರಹ, ಬೃಹತ್ ಪ್ರತಿಭಟನಾ ಮೆರವಣಿಗೆಗಳು ನಿರಂತರ ಹೋರಾಟಕ್ಕೆ ಮಣಿದ



ಕಳೆದ ಬಿ.ಜೆ.ಪಿ ಪಕ್ಷದ ರಾಜ್ಯ ಸರಕಾರ ತನ್ನ ಅವಧಿಯಲ್ಲಿ ವಿಳಂಬವಾಗಿದ್ದ ತಳವಾರ ಜಾತಿ ಜನಾಂಗಕ್ಕೆ ಪರಿಶಿಷ್ಟ ಪಂಗಡ ಪ್ರಮಾಣ ಪತ್ರ ದಾಖಲೆಗಳನ್ನು ಪರಿಶೀಲಿಸಿ, ಈಗಾಗಲೇ ಅನೇಕ ಜನರಿಗೆ ನೀಡಿರುತ್ತಾರೆ.


ಆದರೆ, ಇತ್ತೀಚ್ಚಿನ ದಿನಗಳಲ್ಲಿ ನಮ್ಮ ಸರ್ಕಾರ ತಳವಾರ, ಪರಿವಾರ ಜನಾಂಗಕ್ಕೆ ಅವರವರ ಸೂಕ್ತ ದಾಖಲೆಗಳು ಮತ್ತು ಸರಕಾರದ ನಿಯಮಗಳಂತೆ, ಪಂಚನಾಮೆ ಇತ್ಯಾದಿಗಳನ್ನು ಪರಿಶೀಲಿಸಿ, ನೀಡಬೇಕಾಗಿರುವ ತಳವಾರ, ಪರಿವಾರ, ಜನಾಂಗದ ಪ್ರಮಾಣ ಪತ್ರ ತಡೆಹಿಡಿಯಲಾಗಿದೆ. ಇದರಿಂದ ಸರಕಾರಿ ಹುದ್ದೆಗಳಲ್ಲಿ ಆಯ್ಕೆಯಾಗಿರುವ ಅನೇಕ ಫಲಾನುಭವಿಗಳಿಗೆ, ಸಿಂಧುತ್ವ ಪ್ರಮಾಣ ಪತ್ರ ನೀಡದೇ ಅನ್ಯಾಯ ವ್ಯಸಗಲಾಗುತ್ತಿದೆ ಮತ್ತು ವಿಶೇಷವಾಗಿ ಗಮನಿಸಬೇಕಾಗಿರುವ ವಿಷಯವೇನೆಂದರೆ, ರಾಜ್ಯದಲ್ಲಿ ಈಗಾಗಲೇ ಪರಿಶಿಷ್ಟ ಪಂಗಡದಲ್ಲಿರುವ ಕೆಲವು ಪಟ್ಟಭದ್ರ ಹಿತಾಸಕ್ತಿಗಳು ಕೆಲವು ರಾಜಕೀಯ ಪ್ರಭಾವಿಗಳು, ಸದರಿ ಪರಿಶಿಷ್ಟ ಪಂಗಡದ ಸೌಲಭ್ಯಗಳು ಮಾತ್ರ ಕೆಲವೇ, ಕೆಲವು ಜಾತಿ ಜನಾಂಗಕ್ಕೆ ಸೀಮಿತವಾಗಬೇಕನ್ನುವಹುನ್ನಾರದಿಂದ ವಿನಾಕಾರಣ ಸರಕಾರ ಹಾಗೂ ಜಿಲ್ಲಾಧಿಕಾರಿಗಳ ಮೇಲೆ ಒತ್ತಡಹೇರಿ ದುರ್ಬಲ ಜನಾಂಗಕ್ಕೆ ನಿರಂತರವಾಗಿ ಅನ್ಯಾಯ ಮಾಡುತ್ತಿದ್ದಾರೆ. ಇಂತಹ ಅಸಂವಿಧಾನ ಬದ್ಧವಾದ ವಿಚಾರವಾದಿಗಳಿಗೆ ಮಣಿದು ಸರಕಾರ ಹಾಗೂ ಅಧಿಕಾರಿಗಳು ಆಟದ ಬೊಂಬೆಯಂತೆ ಕುಣಿದರೆ ದುರ್ಬಲರ ಗತಿ ಏನಾಗಬೇಕು.

ಕಾರಣ ಪ್ರಜಾ ಪ್ರಭುತ್ವದ ವ್ಯವಸ್ಥೆಯ ಮೇಲೆ ನಂಬಿಕೆ ಇಟ್ಟು, ನಡೆಯುತ್ತಿರುವ ಜನಾಂಗಕ್ಕೆ ಅನ್ಯಾಯವಾಗದಂತೆ ಸಂವಿಧಾನಬದ್ಧವಾದ ನ್ಯಾಯ ದೊರಕಿಸಿ ರಾಜ್ಯ ಸರಕಾರ ಹಾಗೂ ಜಿಲ್ಲಾಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಬೇಕೆಂದು ಮನವಿಯಲ್ಲಿ ತಿಳಿಸಿದ್ದಾರೆ. ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯ ತಿಪ್ಪಣ್ಣಪ್ಪ ಕಮಕನೂರ, ಸಮಿತಿಯ ರಾಜ್ಯಾಧ್ಯಕ್ಷ ಲಚ್ಚಪ್ಪ ಎಸ್. ಜಮಾದಾರ, ಕರ್ನಾಟಕ ರಾಜ್ಯ ತಳವಾರ ಸಮಾಜ ಸಂಘಟನೆ ರಾಜ್ಯಾಧ್ಯಕ್ಷ ಡಾ. ಸರದಾರ ರಾಯಪ್ಪ, ರೇವಣಸಿದ್ದ ಕಮಾನಮನಿ, ರಾಜ್ಯ ಸಲಹೆಗಾರ ಹಣಮಂತ ಸಂಕನೂರ, ರಾಜ್ಯಕೋಶಾಧ್ಯಕ್ಷ ಪಿಂಟು ಜಮಾದಾರ, ರಾಜ್ಯ ಉಪಾಧ್ಯಕ್ಷರಾದ ರಾಮಲಿಂಗ ನಾಟಿಕಾರ, ಮಲ್ಲಿಕಾರ್ಜುನ ಗುಡಬಾ, ಸೇಡಂ ತಾಲೂಕಾಧ್ಯಕ್ಷ ನಾಗೇಂದ್ರಪ್ಪ ಲಿಂಗಂಪಲ್ಲಿ, ಕಮಲಾಪೂರ ಅಧ್ಯಕ್ಷ ಅಂಬಾರಾಯ ಜವಳಗಾ, ಚಿತ್ತಾಪೂರ ಅಧ್ಯಕ್ಷ ನಿಂಗಣ್ಣ ಹೆಗಲೇರಿ, ಕಲಬುರಗಿ ತಾಲೂಕ ಅಧ್ಯಕ್ಷ ಶಿವರಾಜ ಹಿಂಚಗೇರಿ, ಜೇವರ್ಗಿ ಅಧ್ಯಕ್ಷ ರೇವಣಸಿದ್ದ ಕಮಾನಮನಿ, ಶಹಾಬಾದ ಅಧ್ಯಕ್ಷ ಶಿವು ತಳವಾರ, ಗ್ರಾಮೀಣ ಅಧ್ಯಕ್ಷ ಉಮೇಶ ಕುರಿ-ಕೋಟಾ, ಯಡ್ರಾಮಿ ಅಧ್ಯಕ್ಷ ರಾಚಣ್ಣ ತಳವಾರ, ಚಿಂಚೋಳಿ ಅಧ್ಯಕ್ಷ ಅನಿಲ ಜಮಾದಾರ, ಸೇರಿದಂತೆ ಇತರರು ಇದ್ದರು.

# ಬಾಹ್ಯಾಕಾಶದಲ್ಲಿ ಮೊಳಕೆ ಒಡೆಯಲಿವೆ ಧಾರವಾಡ ಕೃಷಿ ವಿವಿಯ ಮೆಂತೆ, ಹೆಸರು ಕಾಳು

ಮಲ್ಲಮ್ಮ ನುಡಿ ವಾರ್ತೆ

ಧಾರವಾಡ:ಜೂ.26: ಧಾರವಾಡ ಕೃಷಿ ವಿಶ್ವವಿದ್ಯಾಲಯದ ಹೆಸರು ಮತ್ತು ಮೆಂತೆ ಬೀಜಗಳನ್ನು ಆಕ್ಸಿಯಂ-4 ಬಾಹ್ಯಾಕಾಶ ಯೋಜನೆಗಾಗಿ ಬುಧವಾರ ಅಂತರರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣಕ್ಕೆ ರವಾನಿಸಲಾಗಿದೆ. ಬಾಹ್ಯಾಕಾಶದಲ್ಲಿ ಸಲಾಡ್ ಬೀಜಗಳ ಮೊಳಕೆ ಗಗನಯಾತ್ರಿಗಳ ಆಹಾರ ಪೋಷಣೆ ಸಂಶೋಧನೆ ನಿಟ್ಟಿನಲ್ಲಿ ಪರೀಕ್ಷಾರ್ಥವಾಗಿ ರವಾನಿಸಲಾಗಿದೆ ಎಂದು ಧಾರವಾಡ ಕೃಷಿ ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಪಿ.ಎಲ್.ಪಾಟೀಲ ಮಾಹಿತಿ ನೀಡಿದ್ದಾರೆ. ಗಗನಯಾತ್ರಿಗಳು ಅಂತರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಲ್ಲಿ ಈ ಬೀಜಗಳಿಗೆ ನೀರು ಹಾಕುತ್ತಾರೆ. ಎರಡ-ರಿಂದ ನಾಲ್ಕು ದಿನಗಳಲ್ಲಿ ಇವು ಮೊಳಕೆಯೊಡೆಯುತ್ತವೆ. ಮೊಳಕೆ




ಕಾಳುಗಳನ್ನು ಬಾಹ್ಯಾಕಾಶದಲ್ಲಿ ಶೈತ್ಯ ಘಟಕದಲ್ಲಿ ಇಟ್ಟು ನಂತರ ಭೂಮಿಗೆ ತರಲಾಗುತ್ತದೆ. ಮೊಳಕೆ ಕಾಳುಗಳನ್ನು ವಾಪಸ್ ಭೂಮಿಗೆ ತಂದ ನಂತರ ಧಾರವಾಡ ಕೃಷಿ ವಿಶ್ವವಿದ್ಯಾಲಯದಲ್ಲಿ ಅಧ್ಯಯನ ಮಾಡಲಾಗುತ್ತದೆ. ಮೊಳಕೆ ಪ್ರಮಾಣ, ಅವುಗಳ ಪೋಷಕಾಂಶ ಗುಣಮಟ್ಟ, ಫೈಟೋ-ಹಾರ್ಮೋನ್‌ಗಳ ಚಟುವಟಿಕೆ ಹಾಗೂ ಜೀವಸೂತ್ರ (ಟ್ರಾನ್ಸ್ ಕ್ರಿಪ್ಟೋಮ್) ಪರೀಕ್ಷಿಸಿ ವಿಶ್ಲೇಷಿಸಲಾಗುವುದು, ಅಲ್ಲದೇ ಮೊಳಕೆಯ ಮೇಲೆ ಮೈಕ್ರೋಬಿಯಲ್ ಬೆಳವಣಿಗೆ ಅಧ್ಯಯನ ಮಾಡಲಾಗುತ್ತದೆ. ಈ ಸಂಶೋಧನೆಯು ಭವಿಷ್ಯದಲ್ಲಿ ಅಂತರಿಕ್ಷ-ಯಾನದಲ್ಲಿ ಭಾರತೀಯರ ಆಹಾರದ ಭಾಗವಾಗಬಲ್ಲ ಆರೋಗ್ಯಕರ ಸಲಾಡ್ ತರಕಾರಿ ಅಭಿವೃದ್ಧಿಗೆ ಸಹಕಾರಿಯಾಗಲಿದೆ. ಮೊಳಕೆಯೊಡೆಯುವ ಬೀಜಗಳನ್ನು ಬೆಳೆಸಲು ಕೇವಲ ಕಂಟೇನರ್, ನೀರು ಇದ್ದರೆ ಸಾಕು. ಮೊಳಕೆ ಕಾಳುಗಳು ಪೋಷಕಾಂಶ ಭರಿತವಾಗಿರುತ್ತವೆ. ಗಗನಯಾನ ಮಿಷನ್ ಭವಿಷ್ಯದ ಯಾತ್ರಿಕರ ಆಹಾರ ಗಮನದಲ್ಲಿಟ್ಟುಕೊಂಡು ಈ ಸಂಶೋಧನೆಗೆ ಹೆಸರು, ಮೆಂತೆ ಬೀಜಗಳ ಮೊಳಕೆ ಅಧ್ಯಯನ ಆಯ್ಕೆ ಮಾಡಿಕೊಳ್ಳಲಾಗಿದೆ. ಮೆಂತೆ ರೋಗನಿರೋಧಕ ಶಕ್ತಿಯನ್ನು ವೃದ್ಧಿಸುತ್ತದೆ. ಎಲುಬಿನ ಆರೋಗ್ಯ ಉತ್ತಮಗೊಳಿಸುತ್ತದೆ. ಮೂತ್ರಕೋಶದಲ್ಲಿ ಕಲ್ಲು ರಚನೆಯ ಅಪಾಯವನ್ನು ಕಡಿಮೆ ಮಾಡುತ್ತದೆ. ಹೃದಯಸಂಬಂಧಿ ಸಮಸ್ಯೆಗಳಿಗೆ ಪರಿಹಾರ ನೀಡುತ್ತದೆ. ಗಗನಯಾತ್ರಿಗಳ ಆರೋಗ್ಯದ ದೃಷ್ಟಿಯಿಂದ ಸಂಶೋಧನೆಗೆ ಈ ಬೀಜಗಳನ್ನು ಆಯ್ಕೆ ಮಾಡಲಾಗಿದೆ ಎಂದು ಪ್ರೊ.ಪಿ.ಎಲ್.ಪಾಟೀಲ ವಿವರಿಸಿದರು.

# ರಾಷ್ಟ್ರೀಯ ಹೆದ್ದಾರಿಗಳಲ್ಲಿ ದ್ವಿಚಕ್ರ ವಾಹನ ಸವಾರರಿಗೆ ಟೋಲ್:ಸುಳ್ಳು ಸುದ್ದಿ ಎನ್‌ಎಚ್‌ಎಐ ಸ್ಪಷ್ಟನೆ

ನವದೆಹಲಿ:ಜೂ.26: ರಾಷ್ಟ್ರೀಯ ಹೆದ್ದಾರಿಗಳಲ್ಲಿ ದ್ವಿಚಕ್ರ ವಾಹನ ಸವಾರರು ಸಹ ಟೋಲ್ ಶುಲ್ಕ ಪಾವತಿಸಬೇಕು ಎಂದು ಕೆಲವು ಮಾಧ್ಯಮಗಳು ವರದಿ ಮಾಡಿದ್ದು, ಇದು ಸುಳ್ಳುಸುದ್ದಿ ಎಂದು ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಗುರುವಾರ ಸ್ಪಷ್ಟೀಕರಣ ನೀಡಿದೆ.

ಬೈಕ್‌ಗಳಿಗೂ ಯಾವುದೇ ಟೋಲ್ ಶುಲ್ಕ ವಿಧಿಸುತ್ತಿಲ್ಲ. ಕೆಲವು ಮಾಧ್ಯಮಗಳಲ್ಲಿ ಬಂದ ಎಲ್ಲಾ ವರದಿಗಳು ಸುಳ್ಳು ಎಂದು ಎನ್‌ಎಚ್‌ಎಐ ಸ್ಪಷ್ಟನೆ ನೀಡಿದೆ. ಅಲ್ಲದೆ, ಅಂತಹ ಯಾವುದೇ ಪ್ರಸ್ತಾಪ ಸಹ ಕೇಂದ್ರ ಸರ್ಕಾರದ ಮುಂದೆ ಇಲ್ಲ ಎಂದು ಹೇಳಿದೆ. ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಅವರು ಇದನ್ನೇ ಹೇಳಿ, ಸಾಮಾಜಿಕ ಮಾಧ್ಯಮ ವೇದಿಕೆಗಳಲ್ಲಿ ಪೋಸ್ಟ್



ಹಂಚಿಕೊಂಡಿದ್ದಾರೆ. ಸಾಮಾಜಿಕ ಮಾಧ್ಯಮದಲ್ಲಿ ಹಂಚಿಕೊಂಡ ತಮ್ಮ ಪೋಸ್ಟ್‌ನಲ್ಲಿ, ಕೇಂದ್ರ ಸಚಿವ ನಿತಿನ್ ಗಡ್ಕರಿ ಅವರು, "ಕೆಲವು ಮಾಧ್ಯಮಗಳು ದ್ವಿಚಕ್ರ ವಾಹನಗಳಿಗೆ ಟೋಲ್ ಶುಲ್ಕ ವಿಧಿಸುವ ಬಗ್ಗೆ ದಾರಿತಪ್ಪಿಸುವ ಸುದ್ದಿಗಳನ್ನು ಹರಡುತ್ತಿವೆ. ಅಂತಹ ಯಾವುದೇ ನಿರ್ಧಾರ ಸರ್ಕಾರದ ಮುಂದೆ ಇಲ್ಲ. ದ್ವಿಚಕ್ರ ವಾಹನಗಳಿಗೆ ಟೋಲ್ ವಿನಾಯಿತಿ ಸಂಪೂರ್ಣವಾಗಿ ಮುಂದುವರಿಯುತ್ತದೆ. ಸತ್ಯವನ್ನು ಪರಿಶೀಲಿಸದೆ ದಾರಿತಪ್ಪಿಸುವ ಸುದ್ದಿ ಹರಡುವುದು ಆರೋಗ್ಯಕರ ಪತ್ರಿಕೋದ್ಯಮದ ಸಂಕೇತವಲ್ಲ. ನಾನು ಇದನ್ನು ಖಂಡಿಸುತ್ತೇನೆ" ಎಂದು ಹೇಳಿದ್ದಾರ. ರಾಷ್ಟ್ರೀಯ ಹೆದ್ದಾರಿಗಳಲ್ಲಿ ದ್ವಿಚಕ್ರ ವಾಹನಗಳಿಗೆ ಟೋಲ್-ಮುಕ್ತ ಪ್ರಯಾಣ ಕೊನೆಗೊಳ್ಳಬಹುದು. ಜುಲೈ 15, 2025 ರಿಂದ ರಾಷ್ಟ್ರೀಯ ಹೆದ್ದಾರಿಳಲ್ಲಿ ಬೈಕ್ ಗಳಿಗೆ ಟೋಲ್ ಶುಲ್ಕ ವಿಧಿಸಬಹುದು ಎಂದು ಕೆಲವು ಮಾಧ್ಯಮ ವರದಿ ಮಾಡಿದ್ದವು.

ಪ್ರಸ್ತುತ, ದೇಶಾದ್ಯಂತ ರಾಷ್ಟ್ರೀಯ ಹೆದ್ದಾರಿಗಳಲ್ಲಿ ದ್ವಿಚಕ್ರ ವಾಹನಗಳಿಗೆ ಯಾವುದೇ ಟೋಲ್ ಶುಲ್ಕ ಇಲ್ಲ.

# ಭಾಲ್ಕಿಯಲ್ಲಿ ತಿರುಪತಿ ರೈಲು ನಿಲುಗಡೆ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜೂ.26:ತಿರುಪತಿ-ಔರಂಗಬಾದ್ ಮಧ್ಯ ಸಂಚರಿಸುವ 17621/17622 ಸಂಖ್ಯೆಯ ತಿರುಪತಿ-ಔರಂಗಬಾದ್ ಎಕ್ಸಪ್ರೆಸ್ ರೈಲು ಭಾಲ್ಕಿಯ ರೈಲ್ವೆ ನಿಲ್ದಾಣದಲ್ಲಿ ನಿಲುಗಡೆಗೆ ರೈಲ್ವೆ ಇಲಾಖೆ ಆದೇಶ ನೀಡಿದೆ ಎಂದು ಸಂಸದ ಸಾಗರ ಖಂಡ್ರೆ ತಿಳಿಸಿದ್ದಾರೆ.

ತಿರುಪತಿ-ಔರಂಗಬಾದ್ ಎಕ್ಸ್‌ಪ್ರೆಸ್ ರೈಲು ಭಾಲ್ಕಿಯಲ್ಲಿ ನಿಲುಗಡೆಗೆ



ಹಲವು ದಿನಗಳಿಂದ ಭಾಲ್ಕಿ ಸೇರಿ ಸುತ್ತಮೂತ್ತಲಿನ ಭಾಗದ ಜನರ ಬೇಡಿಕೆ ಇತ್ತು. ಈ ಬೇಡಿಕೆ ಆಧಾರದ ಮೇಲೆ ನಿರ್ಧಾರ ಕೈಗೊಳ್ಳಲಾಗಿದೆ. ಇದು ತಿರುಪತಿ ಯಾತ್ರೆ ಕೈಗೊಳ್ಳುವ ಭಕ್ತರಿಗೆ ಹೆಚ್ಚಿನ ಅನುಕೂಲ ಆಗಲಿದೆ. ಟ್ರಾಯಲ್ ಆಧಾರದ ಮೇಲೆ ಸದ್ಯ ನಿಲುಗಡೆ ಇರಲಿದೆ. ಯಾತ್ರಾರ್ಥಿಗಳು ನೋಡಿಕೊಂಡು ಅಂತಿಮ ನಿರ್ಧಾರ ತೆಗೆದುಕೊಳ್ಳಲಾಗುತ್ತದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ

# ಕಾಂಗ್ರೆಸ್ ಅಸಮಾಧಾನಿತರಿಂದ ಕೆಪಿಸಿಸಿ ಅಧ್ಯಕ್ಷರಿಗೆ ದೂರು



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 26 : ಜಿಲ್ಲೆಯ ಕಾಂಗ್ರೆಸ್ ಅಸಮಾಧಾನಿತ ಮುಖಂಡರು ಬೆಂಗಳೂರಿನಲ್ಲಿ ಬುಧವಾರ ಕೆಪಿಸಿಸಿ ಅಧ್ಯಕ್ಷರೂ ಆದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರನ್ನು ಭೇಟಿ ಮಾಡಿದರು.

ಕಾಂಗ್ರೆಸ್ ಮುಖಂಡರೂ ಆದ ಮಾಜಿಸಚಿವ ರಾಜಶೇಖರ ಪಾಟೀಲ ಹುಮನಾಬಾದ್, ಮಾಜಿ ವಿಧಾನ ಪರಿಷತ್ ಸದಸ್ಯ ಅರವಿಂದಕುಮಾರ ಅರಳಿ ಅವರ ನೇತೃತ್ವದಲ್ಲಿ ಮುಖಂಡರು, ಶಿವಕುಮಾರ ಅವರನ್ನು ಭೇಟಿಯಾಗಿ ಅರ್ಧಗಂ-ಟೆಗೂ ಹೆಚ್ಚು ಕಾಲ ಚರ್ಚಿಸಿದರು.

ಬೀದರ್ ಜಿಲ್ಲಾ ಕಾಂಗ್ರೆಸ್‌ನಲ್ಲಿ ತಲೆದೋರಿರುವ ಸಮಸ್ಯೆಗಳ ಕುರಿತು ಎಳೆ ಎಳೆಯಾಗಿ ವಿವರಿಸಿದರು ಎಂದು ಗೊತ್ತಾಗಿದೆ.

'ಬೀದರ್ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ. ಖಂಡ್ರೆ ಅವರು ಜಿಲ್ಲೆಯಲ್ಲಿ ಏಕಪಕ್ಷೀಯವಾದ ನಿರ್ಧಾರಗಳನ್ನು ತೆಗೆದುಕೊಳ್ಳುತ್ತಿದ್ದಾರೆ. ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳುತ್ತಿಲ್ಲ. ಕಾಂಗ್ರೆಸ್‌ಗಿಂತ ಬಿಜೆಪಿ ಶಾಸಕರ ಮಾತಿಗೆ ಮನ್ನಣೆ ನೀಡುತ್ತಿದ್ದಾರೆ. ಬಿಜೆಪಿ ಶಾಸಕರ ಜೊತೆ ಒಳ ಒಪ್ಪಂದ ಮಾಡಿಕೊಂಡಿದ್ದಾರೆ. ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರೂ ಹೆಸರಿಗಷ್ಟೇ ಸೀಮಿತರಾಗಿದ್ದಾರೆ. ಪಕ್ಷ ಸಂಘಟನೆಯ ಕೆಲಸ ಆಗುತ್ತಿಲ್ಲ. ಇದರಿಂದ ಪಕ್ಷದ ನಿಷ್ಠಾವಂತರಿಗೆ ಬೇಸರವಾಗುತ್ತಿದೆ ಎಂದು ಡಿ.ಕೆ. ಶಿವಕುಮಾರ ಅವರಿಗೆ ವಿವರಿಸಲಾಗಿದೆ' ಎಂದು ಹೆಸರು ಹೇಳಲಿಚ್ಛಿಸದ ಪಕ್ಷದ ಮುಖಂಡರೊಬ್ಬರು ತಿಳಿಸಿದ್ದಾರೆ.

'ಸಚಿವ ರಹೀಂ ಖಾನ್ ಕೂಡ ಪಕ್ಷಕ್ಕೂ ತನಗೂ ಯಾವುದೇ ಸಂಬಂಧವಿಲ್ಲದಂತೆ ವರ್ತಿಸುತ್ತಿದ್ದಾರೆ. ಇಬ್ಬರು ಸಚಿವರ ನಡವಳಿಕೆಯಿಂದ ಕಾಂಗ್ರೆಸ್‌ನ ನಿಷ್ಠಾವಂತರಿಗೆ ಬಹಳ ನೋವಾಗಿದೆ. ಇದರಿಂದ ಪಕ್ಷದ ಮೇಲೆ ಪರಿಣಾಮ ಆಗುತ್ತದೆ. ಇದನ್ನು ಶೀಘ್ರ ಸರಿಪಡಿಸದಿದ್ದರೆ ಪಕ್ಷಕ್ಕೆ ದೊಡ್ಡ ನಷ್ಟ ಉಂಟಾಗುತ್ತದೆ. ಕೂಡಲೇ ಮಧ್ಯಪ್ರವೇಶಿಸಿ ಸರಿಪಡಿಸಬೇಕು. ನಿಷ್ಠಾವಂತರಿಗೆ ಗೌರವ ಸಿಗಬೇಕು. ಏಕಪಕ್ಷೀಯ ನಿರ್ಧಾರಕ್ಕೆ ಬ್ರೇಕ್ ಹಾಕಲು ಕೋರಲಾಗಿದೆ. ಇದಕ್ಕೆ ಶಿವಕುಮಾರ ಅವರು ಸಕಾರಾತ್ಮಕವಾಗಿ ಸ್ಪಂದಿಸಿ, ಜಿಲ್ಲೆಗೆ ಕಾಂಗ್ರೆಸ್ ಸತ್ಯಶೋಧನಾ ಸಮಿತಿ ಕಳಿಸಿ, ಅದರ ವರದಿ ಆಧರಿಸಿ ಸೂಕ್ತ ಕ್ರಮ ಕೈಗೊಳ್ಳುವ ಭರವಸೆ ನೀಡಿದ್ದಾರೆ. ಖಂಡಿತವಾಗಿಯೂ ಪಕ್ಷದ ನಿಷ್ಠಾವಂತರಿಗೆ ನ್ಯಾಯ ಸಿಗುವ ವಿಶ್ವಾಸ ಇದೆ' ಎಂದು ಹೇಳಿದ್ದಾರೆ.

ಕೆಪಿಸಿಸಿ ಸಹಕಾರ ವಿಭಾಗದ ಅಧ್ಯಕ್ಷ ಧನರಾಜ ತಾಳಂಪಳ್ಳಿ, ಕೆಪಿಸಿಸಿ ಸಂಯೋಜಕ ಅಜಮತ್ ಪಟೇಲ್, ಬೀದರ್ ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ದತ್ತಾತ್ರೇಯ ಮೂಲಗೆ, ಮುಖಂಡರಾದ ಪಂಡಿತರಾವ್ ಚಿದ್ರಿ, ಅಬ್ದುಲ್ ಮನ್ನಾನ್ ಸೇಠ ಇದ್ದರು.

# ನಿದ್ದೆಗೆ ಜಾರಿದ ಗ್ರಾಮಸ್ಥರು! ಮನೆಗಳ್ಳತನಕ್ಕೆ ಸ್ಕೇಚ್ ಹಾಕಿದ ಖದೀಮರು

ಮಲ್ಲಮ್ಮ ನುಡಿ ವಾರ್ತೆ

ಅಫಜಲಪುರ:ಜೂ.26: ತಾಲೂಕಿನ ಚಿಂಚೋಳಿ ಗ್ರಾಮದಲ್ಲಿ ಕಳೆದ ರಾತ್ರಿ ಮನೆಗಳ ಕಳ್ಳತನವಾಗಿದ್ದು ಬೆಳಕಿಗೆ ಬಂದಿದೆ. ಗ್ರಾಮದ ಓರ್ವರ ಮನೆಯ ಸಿಸಿಟಿವಿಯಲ್ಲಿ ಕಳ್ಳರ ಚಲನವಲನಗಳು ಸೇರೆಯಾಗಿದ್ದು ಗ್ರಾಮದಲ್ಲಿ ಭಯದ ವಾತಾವರಣ ನಿರ್ಮಾಣವಾಗಿದೆ. ಗ್ರಾಮದ ಅರ್ಜುನ ಕಡ್ಲೇವಾಡ ರವರ ಮನೆ ಭಗವಂತರಾಯ ಹೂಗಾರ ರವರ ಮನೆ, ವಿಶ್ವನಾಥ ಬೆಳಗುಂಪಿರವರ ಮನೆ, ಸದಾನಂದ ಕಾಳಿ ರವರ ಮನೆಗಳು ಕಳ್ಳತನವಾಗಿದ್ದು, ಮನೆಯಲ್ಲಿರುವ ಒಡವೆಗಳು ಮತ್ತು ಹಣ ಕಳ್ಳತನವಾಗಿರುವುದು ಮನೆಯ ಮುಖ್ಯಸ್ಥರು ತಿಳಿಸಿದ್ದಾರೆ. ರಾತ್ರಿ ಸುಮಾರು 1:30 ಗಂಟೆಯ ಸಮಯದಲ್ಲಿ ಕಳ್ಳತನವಾಗಿರುವುದು ತಿಳಿದು ಬಂದಿದೆ. ಕಳ್ಳರ ಕೈಚಳಕ ಸಿಸಿ ಟಿವಿಯಲ್ಲಿ ಸೇರೆಯಾಗಿದ್ದು



ಅಫಜಲಪುರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಾಗಿದೆ. ಕಳ್ಳರ ಹುಡುಕಾಟಕ್ಕೆ ಪೊಲೀಸರು ಬಲೆ ಬಿಸಿದ್ದಾರೆ.

# 10.5 ಕೋಟಿ ಮೌಲ್ಯದ ಚಿನ್ನ ಕದ್ದಿದ್ದ ಮೂವರ ಬಂಧನ

ಮಲ್ಲಮ್ಮ ನುಡಿ ವಾರ್ತೆ

ವಿಜಯಪುರ:ಜೂ.26: ಸಿನಿಮೀಯ ರೀತಿಯಲ್ಲಿ ಬ್ಯಾಂಕ್ ದರೋಡೆ ಮಾಡಿ, 10.5 ಕೋಟಿ ರೂ. ಮೌಲ್ಯದ ಚಿನ್ನವನ್ನು ಕಳ್ಳತನ ಮಾಡಿದ್ದ ಮೂವರು ಆರೋಪಿಗಳನ್ನು ವಿಜಯಪುರ ಪೊಲೀಸರು ಬಂಧಿಸಿದ್ದಾರೆ. ಮೇ 25ರಂದು ಜಿಲ್ಲೆಯ ಬಸವನಬಾಗೇವಾಡಿ ತಾಲೂಕಿನ ಮನಗೂಳಿ ಪಟ್ಟಣದ ಕೆನರಾ ಬ್ಯಾಂಕ್‌ನಲ್ಲಿ ದರೋಡೆ ನಡೆದಿತ್ತು. ಸ್ವತಃ ಬ್ಯಾಂಕ್ ಮ್ಯಾನೇಜರ್ ದರೋಡೆಗೆ ಸ್ಕೆಚ್ ಹಾಕಿದ್ದ. ಧಾರಾಕಾರ ಮಳೆಯಲ್ಲೇ ಸಿನಿಮೀಯ ಶೈಲಿಯಲ್ಲಿ ಬಂದು 58 ಕೆ.ಜಿ 975.94 ಗ್ರಾಂ ಚಿನ್ನಾಭರಣ ಹಾಗೂ 5.20 ಲಕ್ಷ ರೂ. ನಗದು ಕದ್ದು ಪರಾರಿಯಾಗಿದ್ದರು. ಇದರಿಂದ ಬ್ಯಾಂಕ್‌ನ ಗ್ರಾಹಕರು ಕಂಗಾಲಾಗಿದ್ದರು. ಆರೋಪಿಗಳನ್ನು ಪತ್ತೆಹಚ್ಚುವುದೇ



ಜಿಲ್ಲಾ ಪೊಲೀಸರಿಗೆ ತಲೆನೋವಾಗಿ ಪರಿಣಮಿಸಿತ್ತು. ಆರೋಪಿಗಳ ಪತ್ತೆಗಾಗಿ ವಿಜಯಪುರ ಎಸ್ಪಿ ಲಕ್ಷ್ಮಣ ನಿಂಬರಗಿ 8 ತಂಡಗಳನ್ನ ರಚಿಸಿದ್ದರು. ಪ್ರಕರಣವನ್ನು ಎಲ್ಲ ಆಯಾಮಗಳಲ್ಲಿ ತನಿಖೆ ಮಾಡಿ, ಒಂದೇ ತಿಂಗಳಲ್ಲಿ ಮೂವರು ಆರೋಪಿಗಳನ್ನು ಅರೆಸ್ಟ್ ಮಾಡಿದ್ದಾರೆ. ವಿಜಯಕುಮಾರ್ (41), ಚಂದ್ರಶೇಖರ್ (38), ಸುನೀಲ್ (40) ಬಂಧಿತ ಆರೋಪಿಗಳು. ಜೊತೆಗೆ 10.5 ಲಕ್ಷ ರೂ. ಮೌಲ್ಯದ ವಸ್ತುಗಳು ಹಾಗೂ ಕೃತ್ಯಕ್ಕೆ ಬಳಸಿದ ಎರಡು ಕಾರುಗಳನ್ನು ವಶಕ್ಕೆ ಪಡೆದುಕೊಂಡಿದ್ದಾರೆ. ಸದ್ಯ ಪ್ರಕರಣ ಭೇದಿಸಿದ್ದಕ್ಕೆ ಬ್ಯಾಂಕ್‌ನಲ್ಲಿ ಚಿನ್ನಾಭರಣ ಇಟ್ಟಿದ್ದ ಗ್ರಾಹಕರು ಕೊಂಚ ರಿಲ್ಯಾಕ್ಸ್ ಆಗಿದ್ದಾರೆ. ಆರೋಪಿ ವಿಜಯಕುಮಾರ ಹುಬ್ಬಳ್ಳಿಯ ಕೋಠಾರಿ ನಗರದ ಕೆನರಾ ಬ್ಯಾಂಕ್‌ನಲ್ಲಿ ಸೀನಿಯರ್ ಮ್ಯಾನೇಜರ್ ಆಗಿ ಕಾರ್ಯನಿರ್ವಹಿಸುತ್ತಿದ್ದ. ಇನ್ನೋರ್ವ ಆರೋಪಿ ಚಂದ್ರಶೇಖರ ಹುಬ್ಬಳ್ಳಿಯಲ್ಲಿ ಖಾಸಗಿ ಉದ್ಯೋಗಿಯಾಗಿದ್ದ. ಮೂರನೇ ಆರೋಪಿ ಸುನೀಲ್ ಚಾಲಕನಾಗಿ ಕೆಲಸ ಮಾಡುತ್ತಿದ್ದ. ಮೇ 25ರಂದು ಬ್ಯಾಂಕ್‌ನ ಕಿಟಕಿಂ-ಯ ಸರಳುಗಳನ್ನು ಕಟ್ ಮಾಡಿ, ಒಳನುಗ್ಗಿದ್ದರು. ಜೊತೆಗೆ ಪೊಲೀಸರ ದಿಕ್ಕು ತಪ್ಪಿಸಲು ಗೊಂಬೆ ಇಟ್ಟು ವಾಮಾಚಾರ ಮಾಡಿದ್ದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.